23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 328 | ನವದೆಹಲಿ | ಬೆಲೆ ₹ 10 | ಜೂನ್ 3, 2026, ಬುಧವಾರ

## ಒಳಪುಟಗಳಲ್ಲಿ

ರಾಜೀನಾಮೆ ನೀಡಿದ ಬೆನ್ನಲ್ಲೇ ಅಮಿತ್ ಷಾ ಭೇಟಿಯಾದ ಅಣ್ಣಾಮಲೈ - ಪು.4

ಕದನ ವಿರಾಮ ಒಪ್ಪಂದದ ಹೊರತಾಗಿಯೂ ದಕ್ಷಿಣ ಲೆಬನಾನ್‌ನಲ್ಲಿ ಇಸ್ರೇಲಿ ಮಿಲಿಟರಿ, ಹಿಜ್ಬುಲ್ಲಾ ನಡುವೆ ನಿಲ್ಲದ ಸಂಘರ್ಷ - ಪು.8

# ಡಿಕೆಶಿಗೆ ಮುಖ್ಯಮಂತ್ರಿ ಗದ್ದುಗೆ: ಇಂದು ಪ್ರಮಾಣವಚನ

**ನವದೆಹಲಿ, ಜೂ. 2:** ನಿಯೋಜಿತ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಬೆಂಗಳೂರಿನ ಲೋಕಭವನದಲ್ಲಿ ಬುಧವಾರ ಸಂಜೆ 4.05ಕ್ಕೆ ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಅವರೊಂದಿಗೆ 10–15 ಮಂದಿ ಸಂಪುಟ ದರ್ಜೆ ಸಚಿವರು ಪದಗ್ರಹಣ ಮಾಡಲಿದ್ದಾರೆ.

ನಿಯೋಜಿತ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಹಿರಿಯ ನಾಯಕ ಸಿದ್ದರಾಮಯ್ಯ ಅವರು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ, ಕೆ.ಸಿ. ವೇಣುಗೋಪಾಲ್ ಮತ್ತು ರಣದೀಪ್ ಸುರ್ಜೇವಾಲಾ ಅವರೊಂದಿಗೆ ಖರ್ಗೆ ನಿವಾಸದಲ್ಲಿ ಮಂಗಳವಾರ ಸಭೆ ನಡೆಸಿದರು. ಸಭೆಯಲ್ಲಿ ಹೊಸ ಸಚಿವರ ಹೆಸರುಗಳನ್ನು ಅಂತಿಮಗೊಳಿಸಲಾಗಿದ್ದು, ಹೆಸರುಗಳನ್ನು ಗೌಪ್ಯವಾಗಿ ಇಡಲಾಗಿದೆ. ಒಟ್ಟು ಎರಡು ಹಂತಗಳಲ್ಲಿ ಸಚಿವ ಸಂಪುಟ ರಚನೆಯಾಗುತ್ತಿದ್ದು ಮೊದಲ ಹಂತದಲ್ಲಿ 10–15 ಶಾಸಕರು ಸಚಿವರಾಗುವ ನಿರೀಕ್ಷೆಯಿದೆ.

ಸಂಪುಟಕ್ಕೆ ಸೇರುವವರ ಪಟ್ಟಿಗೆ ಹೈಕಮಾಂಡ್ ಅನುಮೋದನೆ ನೀಡಿದೆ. ಬಹುತೇಕ ಬುಧವಾರವೇ ಪಟ್ಟಿ ಬಿಡುಗಡೆಯಾಗುವ ಸಾಧ್ಯತೆಯಿದೆ. ಹಿಂದಿನ ಸಂಪುಟದಲ್ಲಿ ಸಚಿರಾಗಿದ್ದ 8 ಮಂದಿ ಜೊತೆಗೆ ಯತೀಂದ್ರ ಸಿದ್ಧರಾಮಯ್ಯ ಸಚಿವರಾಗುವ ಹೊಸ ಮುಖವಾಗಿದ್ದಾರೆ. ರಾಜ್ಯ ಸಚಿವ ಸಂಪುಟದಲ್ಲಿ ಯಾರಿಗೆ ಅವಕಾಶ ನೀಡಬೇಕು, ವಿವಿಧ ಸಮುದಾಯಗಳು ಮತ್ತು ಜಿಲ್ಲೆಗಳಿಗೆ ಸೂಕ್ತ ಪ್ರಾತಿನಿಧ್ಯ ಕಲ್ಪಿಸುವುದು ಸೇರಿದಂತೆ ಹಲವು ವಿಷಯಗಳು ಸಭೆಯಲ್ಲಿ ಚರ್ಚೆಗೆ ಬಂದಿರುವುದಾಗಿ ತಿಳಿದುಬಂದಿದೆ.


### 10-15 ಸಚಿವರ ಸಂಪುಟ ಅಸ್ತಿತ್ವಕ್ಕೆ ಬರುವ ನಿರೀಕ್ಷೆ

### ಸಂಪುಟ ರಚನೆ ಬಗ್ಗೆ ಖರ್ಗೆ, ರಾಹುಲ್ ಸಮ್ಮುಖದಲ್ಲಿ ಪಟ್ಟಿಗೆ ಅಂತಿಮ ರೂಪ

### ಡಿಕೆಶಿ ಜತೆ ಪ್ರಮಾಣವಚನ ಸ್ವೀಕರಿಸಲಿರುವವರು

ಪ್ರಿಯಾಂಕ ಖರ್ಗೆ, ಯತೀಂದ್ರ ಸಿದ್ದರಾಮಯ್ಯ, ಯು.ಟಿ.ಖಾದರ್, ಕೆ.ಎಚ್.ಮುನಿಯಪ್ಪ, ಎಂ.ಬಿ.ಪಾಟೀಲ್, ಡಾ.ಜಿ.ಪರಮೇಶ್ವರ್, ಕೆ.ಜೆ.ಜಾರ್ಜ್, ರಾಮಲಿಂಗಾರೆಡ್ಡಿ, ಕೃಷ್ಣ ಬೈರೆಗೌಡ, ಬಿ. ಕೆ.ಹರಿಪ್ರಸಾದ್, ಚಲುವರಾಯಸ್ವಾಮಿ, ಬೈರತಿ ಸುರೇಶ್, ಸತೀಶ್ ಜಾರಕಿಹೊಳಿ.

ಸಭೆಯ ಬಳಿಕ ಸಂಪುಟದ ಅಂತಿಮ ಪಟ್ಟಿಗೆ ಕೇಂದ್ರ ನಾಯಕತ್ವದ ಒಪ್ಪಿಗೆ ಪಡೆದಿದ್ದಾರೆ ಡಾ.ಜಿ.ಪರಮೇಶ್ವರ್, ಸತೀಶ್ ಜಾರಕಿಹೊಳಿ, ಪ್ರಿಯಾಂಕ್ ಖರ್ಗೆ, ರಾಮಲಿಂಗಾ ರೆಡ್ಡಿ, ಕೃಷ್ಣ ಬೈರೇಗೌಡ, ಕೆ.ಜೆ. ಜಾರ್ಜ್ ಎಂ.ಬಿ. ಪಾಟೀಲ್, ಯು.ಟಿ. ಖಾದರ್, ಈಶ್ವರ ಖಂಡ್ರೆ ಸಂಪುಟ ಸೇರುವ ನಿರೀಕ್ಷೆಯಿದೆ.



ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಲಿರುವ ಡಿ.ಕೆ. ಶಿವಕುಮಾರ್ ಹಾಗೂ ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿದರು.

## ನನ್ನ ರಾಜಕೀಯ ಪಯಣದಲ್ಲಿ ಗಾಂಧಿ ಕುಟುಂಬ ನಿರ್ಣಾಯಕ ಪಾತ್ರ

### ಡಿ.ಕೆ. ಶಿವಕುಮಾರ್



**ಬೆಂಗಳೂರು, ಜೂ.2:** ನಿಯೋಜಿತ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪದಗ್ರಹಣಕ್ಕೂ ಮೊದಲು ಗಾಂಧಿ ಕುಟುಂಬಕ್ಕೆ ಧನ್ಯವಾದ ಅರ್ಪಿಸಿದ್ದಾರೆ. ಮಂಗಳವಾರ ಎಕ್ಸ್ ಖಾತೆಯಲ್ಲಿ ಈ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಅವರು, ರಾಜ್ಯದ ಜನರ ಆಶೀರ್ವಾದದೊಂದಿಗೆ, ಮೌಲ್ಯಯುತ, ಪ್ರಗತಿಪರ ನಿಲುವು ಹೊಂದಿರುವ, ಎಲ್ಲರನ್ನೂ ಒಳಗೊಂಡ ಮತ್ತು ಸಮೃದ್ಧ ಕರ್ನಾಟಕವನ್ನು ನಿರ್ಮಿಸಲು ಪ್ರಾಮಾಣಿಕತೆ ಮತ್ತು ಬದ್ಧತೆಯೊಂದಿಗೆ ಕೆಲಸ ಮಾಡುವುದಾಗಿ ಹೇಳಿದ್ದಾರೆ.

ನನ್ನ ರಾಜಕೀಯ ಪಯಣದಲ್ಲಿ ಗಾಂಧಿ ಕುಟುಂಬ ನಿರ್ಣಾಯಕ ಪಾತ್ರವನ್ನು ವಹಿಸಿದೆ ಎಂದು ಮಾಹಿತಿ ಹಂಚಿಕೊಂಡಿದ್ದಾರೆ.

ನಾನು ಆಗಾಗ ರಾಜೀವ್ ಗಾಂಧಿಯವರ ಬಗ್ಗೆ ಯೋಚಿಸುತ್ತೇನೆ, ನಾನು ನನ್ನ ಸಾಮರ್ಥ್ಯವನ್ನು ಅರಿಯುವ ಮೊದಲೇ ಅವರು ನನ್ನಲ್ಲಿದ್ದ ಸಾಮರ್ಥ್ಯವನ್ನು ಕಂಡರು. ಅವರ ಪ್ರೋತ್ಸಾಹ ನನಗೆ ದೊಡ್ಡ ಕನಸು ಕಾಣಲು ಮತ್ತು ಸಾರ್ವಜನಿಕ ಸೇವೆಗೆ ನನ್ನನ್ನು ಅರ್ಪಿಸಿಕೊಳ್ಳಲು ಆತ್ಮವಿಶ್ವಾಸ ನೀಡಿತು. ಇತರರಲ್ಲಿನ ಸಾಧ್ಯತೆಗಳನ್ನು ಗುರುತಿಸುವವರು ಮತ್ತು ಅವರ ಸ್ವಂತ ನಿರೀಕ್ಷೆ ಮೀರಿ ಮೇಲೇರಲು ಪ್ರೇರೇಪಿಸುವವರು ಶ್ರೇಷ್ಠ ನಾಯಕರು. ರಾಜೀವ್ ಗಾಂಧಿ ನನ್ನ ವಿಷಯದಲ್ಲಿ ಅದನ್ನೇ ಮಾಡಿದರು ಎಂದಿದ್ದಾರೆ.

ಸೋನಿಯಾ ಗಾಂಧಿ ಅವರು ನಾಯಕತ್ವದ ಮತ್ತೊಂದು ಪ್ರಮುಖ ಪಾಠವನ್ನು ಕಲಿಸಿದರು. ನಿಜವಾದ ನಾಯಕರು ಯಶಸ್ಸಿನ ಕ್ಷಣಗಳಲ್ಲಿ ಮಾತ್ರ ನಿಮ್ಮೊಂದಿಗೆ ನಿಲ್ಲುವುದಿಲ್ಲ; ಅವರು ನಿಮ್ಮ ಅತ್ಯಂತ ಕಷ್ಟದ ಸಮಯದಲ್ಲೂ ನಿಮ್ಮೊಂದಿಗೆ ನಿಲ್ಲುತ್ತಾರೆ. ಶಕ್ತಿ, ಪ್ರೋತ್ಸಾಹ ಮತ್ತು ಅಚಲ ಬೆಂಬಲವನ್ನು ನೀಡುತ್ತಾರೆ ಎಂದು ಹೇಳಿದ್ದಾರೆ.

ರಾಹುಲ್‌ಗಾಂಧಿ ಮಾರ್ಗದರ್ಶನ ಮತ್ತು ಸ್ಫೂರ್ತಿಯ ನಿರಂತರ ಮೂಲವಾಗಿದ್ದರು ಎಂದು ಹೇಳಿರುವ ಡಿಕೆಶಿ, ನಿಯೋಜಿತ ಮುಖ್ಯಮಂತ್ರಿ, ಅವರು ಕೇಳುವ ಇಚ್ಛೆ, ಪ್ರಜಾಪ್ರಭುತ್ವ ಮೌಲ್ಯಗಳಲ್ಲಿ ದೃಢನಿಶ್ಚಯ ಹೊಂದಿದ್ದಾರೆ. ಸಮಗ್ರ ಮತ್ತು ಸಹಾನುಭೂತಿಯ ಭಾರತಕ್ಕಾಗಿ ಅವರ ದೃಷ್ಟಿಕೋನ ನನ್ನಂತಹ ನಾಯಕರನ್ನು ಪ್ರೇರೇಪಿಸುತ್ತಲೇ ಇರುತ್ತದೆ. ನನ್ನ ಸಾರ್ವಜನಿಕ ಜೀವನದುದ್ದಕ್ಕೂ ಅವರ ಬೆಂಬಲ ಬಲವಾದ ಆಧಾರಸ್ತಂಭವಾಗಿದೆ ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ.

ಪ್ರಿಯಾಂಕಾ ಗಾಂಧಿ ಯಾವಾಗಲೂ ಸುಲಭವಾಗಿ ಸಂಪರ್ಕಿಸಬಹುದಾದವರು, ಆತ್ಮೀಯರು ಮತ್ತು ಪ್ರೋತ್ಸಾಹಿಸುವವರಾಗಿದ್ದಾರೆ ಎಂದು ಶಿವಕುಮಾರ್ ಇದೇ ವೇಳೆ ಸ್ಮರಿಸಿದ್ದಾರೆ.

ತಳಮಟ್ಟದ ಕಾರ್ಯಕರ್ತನಾಗಿ ಪ್ರಾರಂಭವಾಗಿ ಇಂದು ಕರ್ನಾಟಕವನ್ನು ಮುನ್ನಡೆಸುವ ಜವಾಬ್ದಾರಿಯನ್ನು ವಹಿಸಿಕೊಂಡಿರುವ ವ್ಯಕ್ತಿಯಾಗಿ, ಅವರ ನಂಬಿಕೆ ಮತ್ತು ಪ್ರೋತ್ಸಾಹಕ್ಕಾಗಿ ಕೃತಜ್ಞನಾಗಿದ್ದೇನೆ ಎಂದು ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

## ಸುಪ್ರೀಂ ಕೋರ್ಟ್‌ನ ಐವರು ನ್ಯಾಯಾಧೀಶರಿಂದ ಪ್ರಮಾಣ ವಚನ

**ನವದೆಹಲಿ, ಜೂ.2:** ಸುಪ್ರೀಂ ಕೋರ್ಟ್‌ಗೆ ಹೊಸದಾಗಿ ನೇಮಕಗೊಂಡ ಐದು ನ್ಯಾಯಾಧೀಶರು ಮಂಗಳವಾರ ಪ್ರಮಾಣ ವಚನ ಸ್ವೀಕರಿಸಿದರು,



ಇದರಿಂದಾಗಿ ಸುಪ್ರೀಂ ಕೋರ್ಟ್ ತನ್ನ ಅನುಮೋದಿತ ಬಲದ 38 ನ್ಯಾಯಾಧೀಶರಿಗೆ ಹತ್ತಿರವಾಯಿತು. ಸುಪ್ರೀಂ ಕೋರ್ಟ್‌ನಲ್ಲಿ ನಡೆದ ಸಮಾರಂಭದಲ್ಲಿ ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಅವರು ನ್ಯಾಯಮೂರ್ತಿಗಳಾದ ಶೀಲ್ ನಾಗು, ಶ್ರೀ ಚಂದ್ರಶೇಖರ್, ಸಂಜೀವ್ ಸಚ್ದೇವ ಮತ್ತು ಅರುಣ್ ಪಲ್ಲಿ ಮತ್ತು ಹಿರಿಯ ವಕೀಲ ವಿ ಮೋಹನ ಅವರಿಗೆ ಪ್ರಮಾಣ ವಚನ ಬೋಧಿಸಿದರು. ಮೇ 22 ಮತ್ತು ಮೇ 27 ರಂದು ನಡೆದ ಸಭೆಗಳಲ್ಲಿ ಸುಪ್ರೀಂ ಕೋರ್ಟ್ ಕೊಲಿಜಿಯಂ ಮಾಡಿದ ಶಿಫಾರಸುಗಳನ್ನು ಅನುಸರಿಸಿ ಕೇಂದ್ರವು ಅವರ ನೇಮಕಾತಿಗಳನ್ನು ಒಂದು ದಿನ ಮುಂಚಿತವಾಗಿ ತಿಳಿಸಿತು.

...3ನೇ ಪುಟಕ್ಕೆ



## ನಿತ್ಯ ಪಂಚಾಂಗ 3.06.2026 ಬುಧವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ ಋತು, ಚಾಂದ್ರಮಾನ, ಚೈತ್ರ-ವೈಶಾಖ ಮಾಸ

ಸಂಕಷ್ಟ ಚತುರ್ಥಿ
ಕಂಚಿ ವರದರಾಜ ರಥ,
ಮಾರೇಹಳ್ಳಿ ನೃಸಿಂಹ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಸಮಯ ನೀಡದೆ ಅಹಿಂದ ನಾಯಕನಿಗೆ ಗೇಟ್‌ಪಾಸ್

## ಕಾಂಗ್ರೆಸ್ ಪಕ್ಷ ಇನ್ನುಮುಂದೆ ಹಿಂದುಳಿದವರ ಚಾಂಪಿಯನ್ ಎನ್ನುವಂತಿಲ್ಲ: ಪ್ರತಿಪಕ್ಷ ನಾಯಕ ಅಶೋಕ್ ಟೀಕೆ

**ಬೆಂಗಳೂರು, ಜೂ.2:** ನಾನು ಅಹಿಂದ ಪರ ಎಂದು ಮೋದಿಗೆ ಸವಾಲ್ ಹಾಕುತ್ತಿದ್ದ ರಾಹುಲ್ ಗಾಂಧಿ ಈಗ ಹಿಂದುಳಿದ ವರ್ಗದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ 3 ದಿನವೂ ಕಾಲಾವಕಾಶ ಕೊಡದೆ ಗೇಟ್‌ಪಾಸ್ ನೀಡಿದ್ದಾರೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಆರೋಪಿಸಿದ್ದಾರೆ.

ಸುದ್ದಿಗಾರರ ಜತೆ ಮಾತನಾಡಿ, ಕಾಂಗ್ರೆಸ್ ಪಕ್ಷ ಇನ್ನು ಮುಂದೆ ಹಿಂದುಳಿದವರ ಚಾಂಪಿಯನ್ ಎಂದು ಹೇಳುವಂತಿಲ್ಲ. ಇಂದಿರಾ ಗಾಂಧಿ ಕಾಲದಿಂದಲೂ ಕಾಂಗ್ರೆಸ್ ಹೈಕಮಾಂಡ್ ಅತಿ ಹೆಚ್ಚು ಹಿಂದುಳಿದ ವರ್ಗಗಳ ಮುಖ್ಯಮಂತ್ರಿಗಳನ್ನು ಕಿತ್ತು ಹಾಕಿದೆ.



ಕಾಂಗ್ರೆಸ್‌ನಲ್ಲಿ ಬ್ಯಾಕ್‌ವರ್ಡ್‌ಗಳಿಗೆ ಗೋಬ್ಯಾಕ್ ಮಾಡುವ ಸಂಸ್ಕೃತಿ ಪ್ರಾರಂಭವಾಗಿದೆ. ಹೈಕಮಾಂಡ್ ನಡೆಯಿಂದ ಕುರುಬ ಸಮುದಾಯ ಬೇಸರಗೊಂಡಿದೆ ಎಂದಿದ್ದಾರೆ. ಇಡೀ ದೇಶದಲ್ಲಿ ನಾನೊಬ್ಬನೇ ಹಿಂದುಳಿದ ಜಾತಿಯ ಮುಖ್ಯಮಂತ್ರಿ, ನಾನೊಬ್ಬನೇ ಅಹಿಂದ ನಾಯಕ, ನನ್ನನ್ನು ಬದಲಾಯಿಸುವುದಿಲ್ಲ ಎಂದುಕೊಂಡಿದ್ದ ಸಿದ್ದರಾಮಯ್ಯ, ರಾಹುಲ್ ಗಾಂಧಿಯ ಕಿತಾಪತಿಯಿಂದಾಗಿ ರಾಜೀನಾಮೆ ನೀಡಿದ್ದಾರೆ ಎಂದ್ದಾರೆ.

ಹೊಸ ಮುಖ್ಯಮಂತ್ರಿಯಿಂದ ಜನರಿಗೆ ಯಾವುದೇ ಲಾಭವಿಲ್ಲ. ಗೃಹಲಕ್ಷ್ಮಿ ಹಾಗೂ ಅನ್ನಭಾಗ್ಯದ ಬಾಕಿ ಹಣವನ್ನು ಮರಳಿ ಕೊಡಿಸುವುದು ಖಚಿತ. ಇದನ್ನು ಬಿಜೆಪಿ ಸವಾಲಾಗಿ ಸ್ವೀಕರಿಸಿದೆ ಎಂದಿದ್ದಾರೆ.

### ಪ್ರಮಾಣವಚನ ಸ್ವೀಕಾರ ನಂತರ ಮತ್ತೆ ಸಂಘರ್ಷ ಶುರು

ಸಿದ್ದರಾಮಯ್ಯ ಅವರು ಅಧಿಕಾರದಲ್ಲಿದ್ದಾಗ ಕೇಂದ್ರದ ಮೇಲೆ ಆರೋಪ ಮಾಡುವುದು ಬಿಟ್ಟು ಬೇರೇನೂ ಮಾಡಲಿಲ್ಲ. ಸಿದ್ದರಾಮಯ್ಯನವರ ಗ್ಯಾಂಗ್ ಹತ್ತಿಕ್ಕಲು ಕಾಂಗ್ರೆಸ್‌ನ ಒಂದು ತಂಡ ಪ್ರಯತ್ನ ಮಾಡುತ್ತಿದೆ. ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಹೊರತುಪಡಿಸಿ ಹೊಸ ತಂಡವೂ ಸೃಷ್ಟಿಯಾಗಲಿದೆ.

ಪ್ರಮಾಣವಚನ ಸ್ವೀಕಾರ ನಂತರ ಮತ್ತೆ ಗಲಾಟೆ ಶುರುವಾಗಲಿದೆ ಎಂದು ಅಶೋಕ್ ಭವಿಷ್ಯ ನುಡಿದರು. ಡಿಕೆಶಿ – ಸಿದ್ದರಾಮಯ್ಯ ನಡುವಿನ ಸಂಘರ್ಷ ಇನ್ನೂ ಇರುತ್ತದೆ. ನಾನೇನೂ ಇದರ ಬಗ್ಗೆ ಅಪೇಕ್ಷೆ ಇಟ್ಟುಕೊಂಡಿಲ್ಲ. ಬಿಜೆಪಿ ಅವಧಿಯಲ್ಲಿ ಪ್ರತಿಪಕ್ಷ ನಾಯಕರಿಗೆ ಮನೆ ಕೊಟ್ಟಿದ್ದೇವೆ. ಮುಂದೆ ಬಿಜೆಪಿ ಅಧಿಕಾರಕ್ಕೆ ಬಂದಾಗ ಅದೇ ದಾರಿಯನ್ನು ಪಾಲಿಸುತ್ತೇವೆ ಎಂದು ಹೇಳಿದರು.

### ಸದ್ಯಕ್ಕೆ ಬಿಜೆಪಿಯಲ್ಲಿ ಬದಲಾವಣೆಯಿಲ್ಲ

ಸದ್ಯಕ್ಕೆ ಬಿಜೆಪಿಯಲ್ಲಿ ಯಾವುದೇ ಬದಲಾವಣೆ ಇಲ್ಲ. ಯಾವುದೇ ಬದಲಾವಣೆ ಇದ್ದರೂ ಹೈಕಮಾಂಡ್ ತೀರ್ಮಾನ ಮಾಡಲಿದೆ ಎಂದು ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ್ ಹೇಳಿದ್ದಾರೆ. ರಾಜ್ಯ ಕಾಂಗ್ರೆಸ್‌ನಲ್ಲಿ ಬದಲಾವಣೆಯಾದ ಹಿನ್ನೆಲೆಯಲ್ಲಿ ಬಿಜೆಪಿಯಲ್ಲೂ ಜಾತಿ ಸಮೀಕರಣ ಬದಲಾಗಬಹುದೆಂಬ ಚರ್ಚೆಗಳು ಪ್ರಾರಂಭವಾಗಿದ್ದವು. ರಾಜ್ಯಾಧ್ಯಕ್ಷ ಹಾಗೂ ವಿಪಕ್ಷ ನಾಯಕ ಸ್ಥಾನವನ್ನು ದೃಷ್ಟಿಯಲ್ಲಿಟ್ಟುಕೊಂಡೇ ಇಂಥ ವ್ಯಾಖ್ಯಾನಗಳು ನಡೆದಿದ್ದವು. ಆದರೆ, ಸದ್ಯದ ಸ್ಥಿತಿಯಲ್ಲಿ ಅಂತಹ ಯಾವುದೇ ಬೆಳವಣಿಗೆಗಳಿಲ್ಲ ಎಂದಿದ್ದಾರೆ.

# ಜಿರಳೆ, ಹೆಗ್ಗಣ, ಸೊಳ್ಳೆಗಳಿಗೆ ಹೆದರುವ ಕಾಲ ಇದಲ್ಲ

■ ಕಾಕ್ರೋಚ್ ಜನತಾ ಪಾರ್ಟಿ ಹೆಸರಲ್ಲಿ ಬಿಜೆಪಿಯನ್ನು ಅಪರಾಧಿ ಸ್ಥಾನದಲ್ಲಿ ನಿಲ್ಲಿಸುವ ಯತ್ನ: ಸಂಸದ ಕೋಟ ಶ್ರೀನಿವಾಸ ಪೂಜಾರಿ

**ಮಂಗಳೂರು, ಜೂ.2:** ಕಾಕ್ರೋಚ್ ಜನತಾ ಪಾರ್ಟಿ ಹೆಸರಿನಲ್ಲಿ ಬಿಜೆಪಿಯನ್ನು ಅಪರಾಧಿ ಸ್ಥಾನದಲ್ಲಿ ನಿಲ್ಲಿಸುವ ಪ್ರಯತ್ನ ನಡೆದಿದೆ. ಜಿರಳೆ, ಹೆಗ್ಗಣ, ಸೊಳ್ಳೆಗಳಿಗೆ ಹೆದರುವ ಕಾಲ ಇದಲ್ಲ ಎಂದು ಬಿಜೆಪಿ ಸಂಸದ ಕೋಟ ಶ್ರೀನಿವಾಸ ಪೂಜಾರಿ ಹೇಳಿದರು.

ಬಿಜೆಪಿ ದಕ್ಷಿಣ ಕನ್ನಡ ಜಿಲ್ಲಾ ಘಟಕದಿಂದ ಆಯೋಜಿಸಿರುವ ಎರಡು ದಿನಗಳ ಜಿಲ್ಲಾಮಟ್ಟದ ಪ್ರಶಿಕ್ಷಣ ವರ್ಗ ಉದ್ಘಾಟಿಸಿದ ಅವರು, ಸಾಲ ತೀರಿಸಲಾಗದೆ ದೇಶದ ಚಿನ್ನವನ್ನು ಅಡವಿಟ್ಟ ಕಾಲವೊಂದಿತ್ತು. ಆದರೆ, ಇಂದು ಭಾರತ 60 ರಾಷ್ಟ್ರಗಳಿಗೆ ಸಾಲ ನೀಡುತ್ತಿದೆ ಎಂದು ಹೇಳಿದರು.

ರಾಜ್ಯದಲ್ಲಿ 1.5 ಲಕ್ಷ ದಲಿತ, ಹಿಂದುಗಳಿದ ವರ್ಗಗಳ ವಿದ್ಯಾರ್ಥಿಗಳು ಹಾಸ್ಟೆಲ್ ಇಲ್ಲದೆ ಸಮಸ್ಯೆ ಎದುರಿಸುತ್ತಿದ್ದಾರೆ. ಕೆಲವರು ಶಾಲೆ ತೊರೆದಿದ್ದಾರೆ. ಪರಿಶಿಷ್ಟರ ಆರೋಗ್ಯ, ಶಿಕ್ಷಣಕ್ಕಾಗಿ ಮೀಸಲಿಟ್ಟ 60 ಸಾವಿರ ಕೋಟಿಯನ್ನು ಬೇರೆ ಉದ್ದೇಶಕ್ಕೆ ಸರ್ಕಾರ ಬಳಸಿದೆ. ಕಡಲ ಮೀನುಗಾರಿಕೆ ಮತ್ತಿತರ ಅಭಿವೃದ್ಧಿ ಕಾರ್ಯಗಳಿಗೆ ಕೇಂದ್ರ 22 ಸಾವಿರ ಕೋಟಿ ಬಿಡುಗಡೆ ಮಾಡಿತ್ತು. ಕೇಂದ್ರದ ಅನುದಾನವನ್ನು ರಾಜ್ಯ ಸರ್ಕಾರ ತನ್ನದೇ ಎಂದು ಬಿಂಬಿಸಿದೆ. ಕಾರ್ಯಕರ್ತರು ಜನತೆಗೆ ಸತ್ಯ ತಿಳಿಸಬೇಕು ಎಂದು ಹೇಳಿದರು. ಸಂಸದ ಬ್ರಿಜೇಶ್ ಚೌಟ ಮಾತನಾಡಿ, 2014ರ ಬಳಿಕ ಭಾರತ ಬದಲಾಗಿದೆ. ಜನರ ಸಮಸ್ಯೆಗಳಿಗೆ ಉತ್ತರವಾಗಿ ಬಿಜೆಪಿ ದೇಶದಲ್ಲಿದೆ. ಗೆಲ್ಲಲು ಸಾಧ್ಯವೇ ಇಲ್ಲ ಎಂಬಂತಿದ್ದ ಪಶ್ಚಿಮ ಬಂಗಾಳದಲ್ಲೂ ಈಗ ಬಿಜೆಪಿ ಆಡಳಿತ ನಡೆಸುತ್ತಿದೆ. ರಾಜ್ಯದಲ್ಲಿ 2028ರಲ್ಲಿ ಬಿಜೆಪಿ ನೇತೃತ್ವದ ಸರ್ಕಾರ ರಚನೆಯಾಗಬೇಕು ಎಂದರು.

# ಸತೀಶ್ ಜಾರಕಿಹೊಳಿ ಜೊತೆ 21 ಸ್ವಾಮೀಜಿಗಳ ನಿಯೋಗ ಚರ್ಚೆ

**ಬೆಂಗಳೂರು, ಜೂ.2:** ಕೆಪಿಸಿಸಿ ಅಧ್ಯಕ್ಷರ ಆಯ್ಕೆ ಹಾಗೂ ಹೊಸ ಸಚಿವ ಸಂಪುಟ ರಚನೆ ಕುರಿತ ಚರ್ಚೆಗಳು ತೀವ್ರಗೊಂಡಿರುವ ನಡುವೆಯೇ ಸತೀಶ್ ಜಾರಕಿಹೊಳಿ ಅವರನ್ನು 21 ಸ್ವಾಮೀಜಿಗಳ ನಿಯೋಗ ಭೇಟಿ ಮಾಡಿ ಮಹತ್ವದ ಮಾತುಕತೆ ನಡೆಸಿದೆ.

ಈ ಭೇಟಿಯಲ್ಲಿ ಹಿಂದುಳಿದ ವರ್ಗಗಳು, ದಲಿತರು ಹಾಗೂ ಆದಿವಾಸಿ ಸಮುದಾಯಗಳಿಗೆ ಪಕ್ಷ ಸಂಘಟನೆ ಮತ್ತು ಸರ್ಕಾರದಲ್ಲಿ ಹೆಚ್ಚಿನ ಪ್ರಾತಿನಿಧ್ಯ ನೀಡುವ ವಿಷಯ ಕುರಿತು ಚರ್ಚೆಯಾಗಿದೆ ಎಂದು ತಿಳಿದುಬಂದಿದೆ.

ಬೆಂಗಳೂರಿನಲ್ಲಿರುವ ಸತೀಶ್ ಜಾರಕಿಹೊಳಿ ಅವರ ಅಧಿಕೃತ ನಿವಾಸದಲ್ಲಿ ಮಂಗಳವಾರ ನಡೆದ ಈ ಸಭೆ ರಾಜಕೀಯ ವಲಯದಲ್ಲಿ ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ರಾಜ್ಯದಲ್ಲಿ ನಾಯಕತ್ವ ಬದಲಾವಣೆಯ ನಂತರ ಹೊಸ ರಾಜಕೀಯ ಸಮೀಕರಣಗಳು ರೂಪುಗೊಳ್ಳುತ್ತಿರುವ ಸಂದರ್ಭದಲ್ಲಿ ಈ ಭೇಟಿ ವಿಶೇಷ ಮಹತ್ವ ಪಡೆದುಕೊಂಡಿದೆ. ನಿಯೋಗದಲ್ಲಿ ಬೋವಿ ಸಮುದಾಯ, ವಾಲ್ಮೀಕಿ ಪೀಠ, ಕುರುಬ, ಮಡಿವಾಳ ಸೇರಿದಂತೆ ವಿವಿಧ ಹಿಂದುಳಿದ ವರ್ಗಗಳು ಹಾಗೂ ಪರಿಶಿಷ್ಟ ಜಾತಿ–ಪಂಗಡಗಳಿಗೆ ಸೇರಿದ ಧಾರ್ಮಿಕ ಮುಖಂಡರು ಭಾಗವಹಿಸಿದ್ದರು.



ಹಿಂದುಳಿದ ವರ್ಗಗಳು, ದಲಿತರು ಮತ್ತು ಆದಿವಾಸಿಗಳಿಗೆ ಸಚಿವ ಸಂಪುಟ ಹಾಗೂ ಪಕ್ಷದ ಸಂಘಟನೆಯಲ್ಲಿ ಸೂಕ್ತ ಪ್ರಾತಿನಿಧ್ಯ ನೀಡಬೇಕೆಂಬ ಒತ್ತಾಯವನ್ನು ಸ್ವಾಮೀಜಿಗಳು ಮುಂದಿಟ್ಟಿದ್ದಾರೆ ಎನ್ನಲಾಗಿದೆ.ಮೂಲಗಳ ಪ್ರಕಾರ, ಕೆಪಿಸಿಸಿ ಅಧ್ಯಕ್ಷ ಸ್ಥಾನವನ್ನು ಹಿಂದುಳಿದ ವರ್ಗದ ನಾಯಕರಿಗೆ ನೀಡಬೇಕು ಎಂಬ ಅಭಿಪ್ರಾಯವನ್ನು ಸ್ವಾಮೀಜಿಗಳು ವ್ಯಕ್ತಪಡಿಸಿದ್ದು, ಕಾಂಗ್ರೆಸ್‌ನ ಪ್ರಭಾವಿ ಒಬಿಸಿ ನಾಯಕರಲ್ಲಿ ಒಬ್ಬರಾಗಿರುವ ಸತೀಶ್ ಜಾರಕಿಹೊಳಿ ಆ ಹುದ್ದೆಗೆ ಸೂಕ್ತ ಅಭ್ಯರ್ಥಿ ಎಂದು ತಮ್ಮ ಅಭಿಪ್ರಾಯವನ್ನು ತಿಳಿಸಿದ್ದಾರೆ.

ಇದೇ ವೇಳೆ ಹೊಸ ಸಚಿವ ಸಂಪುಟದಲ್ಲಿ ಹಿಂದುಳಿದ ವರ್ಗಗಳ ಶಾಸಕರಿಗೆ ಹೆಚ್ಚಿನ ಅವಕಾಶ ನೀಡಬೇಕು ಹಾಗೂ ಪ್ರಮುಖ ಖಾತೆಗಳ ಹಂಚಿಕೆಯಲ್ಲೂ ಅವರಿಗೆ ಆದ್ಯತೆ ನೀಡಬೇಕು ಎಂಬ ಬೇಡಿಕೆಯನ್ನೂ ನಿಯೋಗ ಮುಂದಿಟ್ಟಿದೆ ಎಂದು ತಿಳಿದುಬಂದಿದೆ.

# ಕಾವೇರಿ ನದಿ ನೀರು ಹಂಚಿಕೆ ತೀರ್ಪು: ಸುಪ್ರೀಂ ಕೋರ್ಟ್‌ನಲ್ಲಿ ಮರುಪರಿಶೀಲನಾ ಅರ್ಜಿ ಸಲ್ಲಿಕೆ



**ಬೆಂಗಳೂರು, ಜೂ.2:** ಕಾವೇರಿ ನದಿ ನೀರು ಹಂಚಿಕೆ ತೀರ್ಪಿನ ಬಗ್ಗೆ ಸುಪ್ರೀಂಕೋರ್ಟ್‌ನಲ್ಲಿ ಮರು ಪರಿಶೀಲನಾ ಅರ್ಜಿ ಸಲ್ಲಿಸುವ ಸಂಬಂಧ ಈ ಹಿಂದೆ ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶ ಎನ್. ಗೋಪಾಲಗೌಡರ ಬೆಂಗಳೂರಿನ ಕಚೇರಿಯಲ್ಲಿ ನಡೆದ ಸಭೆಯಲ್ಲಿ ನಿರ್ಣಯಿಸಿದಂತೆ ರಿಟ್ ಅರ್ಜಿ ಸಲ್ಲಿಸಲಾಯಿತು ಎಂದು ಕಾವೇರಿ ನದಿ ರಕ್ಷಣಾ ಸಮಿತಿ ಅಧ್ಯಕ್ಷ ಎಚ್.ಕೆ. ರಾಮು ತಿಳಿಸಿದ್ದಾರೆ.

ಡಾ. ನಿರ್ಮಲಾನಂದನಾಥ ಮಹಾ ಸ್ವಾಮೀಜಿ, ಮಹಾ ಪೋಷಕರು, ನಿವೃತ್ತ ನ್ಯಾಯಾಧೀಶ ಎನ್ ಗೋಪಾಲಗೌಡ, ಡಾ. ನಿಶ್ಚಲಾನಂದನಾಥ ಸ್ವಾಮೀಜಿ, ಬ್ರಿಜೇಶ್ ಕಾಳಪ್ಪ, ಸುಪ್ರೀಂಕೋರ್ಟಿನ ಹಿರಿಯ ನ್ಯಾಯವಾದಿ, ನೀರಾವರಿ ತಜ್ಞರು ಮಾಜಿ ಮುಖ್ಯಮಂತ್ರಿಗಳ ಸಲಹೆಗಾರರು ನಿವೃತ್ತ ಅಧೀನ ಕಾರ್ಯದರ್ಶಿ ವೆಂಕಟರಾಮು, ಹಿರಿಯ ಉಪಾಧ್ಯಕ್ಷ ಅಂದಾನಪ್ಪ ಲಗ್ಗೆರೆ, ಸಮಿತಿ ಅಧ್ಯಕ್ಷ ಎಚ್.ಕೆ. ರಾಮು ನೇತೃತ್ವದಲ್ಲಿ ಸುಪ್ರೀಂಕೋರ್ಟಿನ ಹಿರಿಯ ನ್ಯಾಯವಾದಿ ಗುರುದತ್ತ ಅಂಕೋಲ್ಕರ್ ಮೂಲಕ ರಿಟ್ ಅರ್ಜಿ ಸಲ್ಲಿಸಲಾಯಿತು.



ಹಿರಿಯ ಪತ್ರಕರ್ತ ಕೂಡ್ಲಿ ಗುರುರಾಜ್ ಜನಮಿತ್ರ ದಿನಪತ್ರಿಕೆಯಲ್ಲಿ ಬರೆದ ವ್ಯಕ್ತಿ–ವಿಶೇಷ ಅಂಕಣ ಬರಹಗಳ ಸಂಗ್ರಹ "ಸಾಧನೆಯ ಶಿಖರಗಳು" ಕೃತಿಯನ್ನು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮೈಸೂರಿನಲ್ಲಿ ಬಿಡುಗಡೆ ಮಾಡಿದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು, ಜನಮಿತ್ರ ಸಂಪಾದಕ ಮದನಗೌಡ ಮೊದಲಾದವರು ಇದ್ದರು.

# ದೆಹಲಿ ಕರ್ನಾಟಕ ಸಂಘದ ಪ್ರಧಾನ ಕಾರ್ಯದರ್ಶಿ ರಾಧಾಕೃಷ್ಣಗೆ ಡಾ.ಬಿ.ಆರ್.ಅಂಬೇಡ್ಕರ್ ಪ್ರಶಸ್ತಿ

**ಬೆಂಗಳೂರು, ಜೂ.2:** ಕರ್ನಾಟಕದ ಹಿರಿಯ ಸಾಂಸ್ಕೃತಿಕ ಸಂಘಟನೆಗಳಲ್ಲಿ ಒಂದಾದ ವಿ.ಕೆ.ಎಂ. ಕಲಾವಿದರು (ರಿ), ಬೆಂಗಳೂರು ಸಂಸ್ಥೆಯು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಆಯೋಜಿಸಿರುವ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಬಾಬು ಜಗಜೀವನ ರಾಮ್ ಸ್ಮಾರಕ ನಾಟಕೋತ್ಸವ, ಸಾಂಸ್ಕೃತಿಕ ಕಲಾ ಮೇಳ–ರಂಗೋತ್ಸವ ಹಾಗೂ ಸಂಸ್ಥೆಯ ನಿರಂತರ 45ನೇ ವರ್ಷದ ಕಾರ್ಯಕ್ರಮವು ಜೂನ್ 8ರಿಂದ 10ರವರೆಗೆ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ನಡೆಯಲಿದೆ.

ಈ ಕಾರ್ಯಕ್ರಮದ ಸಮಾರೋಪ ಸಮಾರಂಭವು 2026ರ ಜೂನ್ 10ರಂದು ರವೀಂದ್ರ ಕಲಾಕ್ಷೇತ್ರದಲ್ಲಿ ನಡೆಯಲಿದ್ದು, ಆ ಸಂದರ್ಭದಲ್ಲಿ ದೆಹಲಿ ಕರ್ನಾಟಕ ಸಂಘದ ಪ್ರಧಾನ ಕಾರ್ಯದರ್ಶಿ ಶ್ರೀ ರಾಧಾಕೃಷ್ಣ ಅವರಿಗೆ ಡಾ. ಬಿ.ಆರ್. ಅಂಬೇಡ್ಕರ್ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಗುವುದು.

35 ವರ್ಷಗಳಿಂದ ದೆಹಲಿಯಲ್ಲಿ ನೆಲೆಸಿರುವ ರಾಧಾಕೃಷ್ಣ ಅವರು ಕರ್ನಾಟಕ ಭವನದಲ್ಲಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ಸದಾ ಹಸನ್ಮುಖಿ ಹಾಗೂ ಜನಸ್ನೇಹಿಯಾಗಿರುವ ಅವರು ಮೂಲತಃ ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕಿನ ಪಂಚಗಂಗಾ ನದಿಯ ತಟದಲ್ಲಿರುವ ಕೋಡಿ ಗ್ರಾಮದವರು.

ದೆಹಲಿಯ ಹಾಗೂ ಎನ್.ಸಿ.ಆರ್. ಪ್ರದೇಶದ ಕನ್ನಡಿಗರ ನಡುವೆ ಅನ್ನದಾತ ಹಾಗೂ ಸಮಾಜಮುಖಿ ವ್ಯಕ್ತಿತ್ವವಾಗಿ ಗುರುತಿಸಿಕೊಂಡಿರುವ ಅವರು, 1996ರಿಂದ ದೆಹಲಿಯಲ್ಲಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿರುವ ಉಡುಪಿ ಎಂಟರ್‌ಪ್ರೈಸಸ್ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾಗಿದ್ದಾರೆ.

ಸಾಮಾಜಿಕ ಹಾಗೂ ಸಂಘಟನಾ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಅವರು ದೆಹಲಿ ಕರ್ನಾಟಕ ಸಂಘದ ಕಾರ್ಯಕಾರಿ ಸಮಿತಿಯ ಸದಸ್ಯರಾಗಿ, ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯರಾಗಿ ಹಾಗೂ ಸಂಘದ ಜಂಟಿ ಕಾರ್ಯದರ್ಶಿಯಾಗಿ ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದಾರೆ. ಪ್ರಸ್ತುತ ಅವರು ದೆಹಲಿ ಕರ್ನಾಟಕ ಸಂಘದ ಪ್ರಧಾನ ಕಾರ್ಯದರ್ಶಿಯಾಗಿ ಎರಡನೇ ಅವಧಿಗೆ ಆಯ್ಕೆಯಾಗಿದ್ದು, ಸಮರ್ಥ ನಾಯಕತ್ವದೊಂದಿಗೆ ಸಂಘದ ಬೆಳವಣಿಗೆಗೆ ಶ್ರಮಿಸುತ್ತಿದ್ದಾರೆ.

ಅವರ ಸಮಾಜಮುಖಿ ಸೇವೆ, ಸಂಘಟನಾ ಕೌಶಲ್ಯ ಹಾಗೂ ಕನ್ನಡ ನಾಡು–ನುಡಿಯ ಮೇಲಿನ ಅಪಾರ ಪ್ರೀತಿಯನ್ನು ಗುರುತಿಸಿ ನೀಡಲಾಗುತ್ತಿರುವ ಈ ಪ್ರತಿಷ್ಠಿತ ಡಾ. ಬಿ.ಆರ್. ಅಂಬೇಡ್ಕರ್ ಪ್ರಶಸ್ತಿ ಕನ್ನಡಿಗರಿಗೆ ಹೆಮ್ಮೆಯ ವಿಷಯವಾಗಿದೆ. ರಾಧಾಕೃಷ್ಣ ಅವರಿಗೆ ಈ ಗೌರವ ದೊರೆತಿರುವ ಹಿನ್ನೆಲೆಯಲ್ಲಿ ದೆಹಲಿ ಕರ್ನಾಟಕ ಸಂಘದ ಪದಾಧಿಕಾರಿಗಳು, ಸದಸ್ಯರು ಹಾಗೂ ಕನ್ನಡಿಗರು ಹರ್ಷ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ

# ಗ್ರಾಮೀಣ ಪತ್ರಕರ್ತರ ಬಸ್‌ಪಾಸ್ ಷರತ್ತು ಸರಳೀಕರಣದ ಆದೇಶ: ಕೆಯುಡಬ್ಲ್ಯುಜೆ ಸ್ವಾಗತ

**ಬೆಂಗಳೂರು, ಜೂ.2:** ಗ್ರಾಮೀಣ ಪತ್ರಕರ್ತರ ಉಚಿತ ಬಸ್ ಪಾಸ್ ಯೋಜನೆ ಜಾರಿಗೆ ಅಡ್ಡಿಯಾಗಿದ್ದ ಕಠಿಣ ಷರತ್ತುಗಳನ್ನು ತೆಗೆದು, ನಿಯಮಾವಳಿ ಸರಳೀಕರಣ ಮಾಡಿ ಸರ್ಕಾರ ಆದೇಶ ಹೊರಡಿಸಿದ್ದು, ಕೆಯುಡಬ್ಲ್ಯುಜೆ ಸ್ವಾಗತಿಸಿದೆ. ಬೀದರ್‌ನಲ್ಲಿ ನಡೆದ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯುಜೆ) ಒತ್ತಾಯಕ್ಕೆ ಸ್ಪಂದಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅದೇ ವೇದಿಕೆಯಲ್ಲಿ ಕಠಿಣ ಷರತ್ತುಗಳನ್ನು ಕೈಬಿಡುವುದಾಗಿ ಭರವಸೆ ನೀಡಿದ್ದರು.

ಸರ್ಕಾರಕ್ಕೆ ಮೂರು ವರ್ಷ ತುಂಬಿದಾಗ ಕೆಯುಡಬ್ಲ್ಯುಜೆ ಏರ್ಪಡಿಸಿದ್ದ ಸಂವಾದದಲ್ಲಿ ಭಾಗವಹಿಸಿದ್ದ ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರು ಈ ಬಗ್ಗೆ ವಾರದೊಳಗೆ ಕ್ರಮ ವಹಿಸುವುದಾಗಿ ತಿಳಿಸಿದ್ದರು. ಸಿಎಂ ಸೂಚನೆ ಮೇರೆಗೆ ಹೊಸ ಆದೇಶ ಹೊರಬಿದ್ದಿದೆ. ಪೂರ್ಣಾವಧಿಗೆ ಸೀಮಿತವಾಗಿದ್ದನ್ನು ಬದಲಿಸಿ, ಅರೆಕಾಲಿಕ ವರದಿಗಾರರಿಗೂ ಯೋಜನೆ ವಿಸ್ತರಿಸಲಾಗಿದೆ. ಸೌಲಭ್ಯ ಪಡೆಯಲು 11 ತಿಂಗಳ ಲೈನೇಜ್ ಪಡೆದಿರುವ ಬ್ಯಾಂಕ್ ಸ್ಟೇಟ್‌ಮೆಂಟ್ ಕಡ್ಡಾಯವಾಗಿದ್ದನ್ನು ಷರತ್ತಿನಲ್ಲಿ ಕೈಬಿಡಲಾಗಿದೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯುಜೆ) ಸತತ ಹೋರಾಟಕ್ಕೆ ಸ್ಪಂದಿಸಿ ಬೇಡಿಕೆ ಈಡೇರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ (ಭಾವಿ ಸಿಎಂ) ಡಿ.ಕೆ.ಶಿವಕುಮಾರ್ ಅವರು ಈ ನಿಟ್ಟಿನಲ್ಲಿ ಸತತವಾಗಿ ಸ್ಪಂದಿಸಿದ ಸಿಎಂ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರಿಗೆ ಸಂಘದ ಅಧ್ಯಕ್ಷ ಶಿವಾನಂದ ತಗಡೂರು ಅಭಿನಂದನೆ ಸಲ್ಲಿಸಿದ್ದಾರೆ.

# ಕಾಂಗ್ರೆಸ್ ನಿಂದ ಜಮೀರ್ ಉಚ್ಚಾಟನೆಗೆ ಆಗ್ರಹ

**ದಾವಣಗೆರೆ, ಜೂ.2:** ಮಾಜಿ ಸಚಿವ ಜಮೀರ್ ಅಹ್ಮದ್ ಹಾಗೂ ಮೊಹಮ್ಮದ್ ಸಿರಾಜ್ ಮಾತನಾಡಿದ್ದಾರೆ ಎನ್ನಲಾದ ಆಡಿಯೋ ವೈರಲ್ ವಿಚಾರವಾಗಿ ದಾವಣಗೆರೆ ಕಾಂಗ್ರೆಸ್‌ನಲ್ಲಿ ಆಕ್ರೋಶ ಭುಗಿಲೆದ್ದಿದೆ. ಆಡಿಯೋದಲ್ಲಿ ಸಂಭಾಷಣೆ ನಡೆಸಿದವರ ವಿರುದ್ಧ ಸೂಕ್ತ ಕ್ರಮಕ್ಕೆ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಡಿ.ಬಸವರಾಜ್, ಪಾಲಿಕೆ ಮಾಜಿ ಮೇಯರ್ ಚಮನ್ ಸಾಬ್ ಆಗ್ರಹಿಸಿದರು.

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಡಿ.ಬಸವರಾಜ್ ಮಾತನಾಡಿ, ಜಮೀರ್ ಅಹ್ಮದ್‌ರನ್ನು ಪಕ್ಷದಿಂದ ಉಚ್ಚಾಟಿಸಬೇಕು. ಮಡಿಕೇರಿಯಿಂದ ಬಂದ ಎಸ್‌ಡಿಪಿಐ ಅಭ್ಯರ್ಥಿ ಮನೆ ಮನೆಗೆ ಹಣ ಹಂಚಿದ್ದ. ದಾವಣಗೆರೆಗೆ ಬರಲು ದುಡ್ಡೇ ಇಲ್ಲದವನ ಬಳಿ ಕೋಟ್ಯಂತರ ರೂ. ಹೇಗೆ ಬಂತು ಎಸ್‌ಡಿಪಿಐ ಅಭ್ಯರ್ಥಿ ಎರಡು ಸಾವಿರ ರೂ. ಹಂಚಿಕೆ ಮಾಡಿದ ಬಗ್ಗೆ ನಮ್ಮ ಕಾರ್ಯಕರ್ತರಿಗೆ ಗೊತ್ತಾಗಿದೆ ಎಂದು ವಾಗ್ದಾಳಿ ನಡೆಸಿದರು.

**ಪಕ್ಷದ್ರೋಹ ಸಹಿಸಲಾಗದು:** ನಮಗೆ ಹೆತ್ತ ತಾಯಿಯೂ ಒಂದೇ, ಕಾಂಗ್ರೆಸ್ ಪಕ್ಷವೂ ಒಂದೇ. ಇಂತಹ ಪಕ್ಷಕ್ಕೆ ದ್ರೋಹ ಮಾಡಿದ ವ್ಯಕ್ತಿ ಯಾರು ಇಂದು ಕಳ್ಳತನ ಮಾಡಿ ಎಐ ಸೃಷ್ಟಿ ಅಂತಿದ್ದಾರೆ. ಉಪ್ಪು ತಿಂದವರು ನೀರು ಕುಡಿಯಲೇಬೇಕು. ತಪ್ಪು ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳಲು ಆಗ್ರಹಿಸಿದ್ದೇವೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೇರಿ ಪಕ್ಷದ ಹಿರಿಯ ನಾಯಕರಿಗೆ ಇ–ಮೇಲ್ ಹಾಗೂ ಸ್ಪೀಡ್ ಪೋಸ್ಟ್ ಮೂಲಕ ದೂರು ಸಲ್ಲಿಸಿದ್ದೇವೆ ಎಂದರು.

# ದೆಹಲಿಯಲ್ಲಿ ಸಿದ್ದರಾಮಯ್ಯ ಬೆನ್ನುಹತ್ತಿದ ಸಚಿವ ಸ್ಥಾನದ ಆಕಾಂಕ್ಷಿಗಳು

**ನವದೆಹಲಿ, ಜೂ.2:** ರಾಜಕೀಯ ಬೆಳವಣಿಗೆಗಳ ಹಿನ್ನೆಲೆಯಲ್ಲಿ ದೆಹಲಿಯಲ್ಲಿ ತಂಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸುತ್ತಮುತ್ತ ಸಂಪುಟ ಸೇರುವ ಆಕಾಂಕ್ಷಿಗಳು ಸುತ್ತುವರೆದಿದ್ದರು.

ಇದೇ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಸಿದ್ದರಾಮಯ್ಯ, ಈವರೆಗೂ ಹೈಕಮಾಂಡ್ ನಾಯಕರ ಜೊತೆ ಸಭೆ ನಡೆದಿಲ್ಲ. ಸಭೆಯಲ್ಲಿ ಯಾವೆಲ್ಲಾ ವಿಚಾರಗಳು ಚರ್ಚೆಯಾಗುತ್ತವೆ ಎಂಬುದು ಗೊತ್ತಿಲ್ಲ ಎಂದಿದ್ದಾರೆ.

ಸಿದ್ದರಾಮಯ್ಯ ಅವರು ರಾಜ್ಯ ರಾಜಕಾರಣದಲ್ಲಿ ಎರಡನೇ ಶಕ್ತಿ ಕೇಂದ್ರವಾಗಿದ್ದು, ಅವಕಾಶಕ್ಕಾಗಿ ಅವರ ಹಿಂದೆ ಆಕಾಂಕ್ಷಿಗಳು ಗಿರಕಿ ಹೊಡೆಯುತ್ತಿದ್ದಾರೆ. ಮಾಜಿ ಸಚಿವರು, ಹಾಲಿ ಶಾಸಕರು, ಪ್ರಮುಖ ನಾಯಕರು ಎಡಬಿಡದೆ ಸಿದ್ದರಾಮಯ್ಯ ಅವರ ಬೆಂಬಿಡದೇ ಅವಕಾಶಕ್ಕಾಗಿ ಅಂಗಲಾಚುತ್ತಿದ್ದುದ್ದು ಕಂಡು ಬಂತು. ಮಂಗಳವಾರ ಬೆಳಗ್ಗೆ ಸಿದ್ದರಾಮಯ್ಯ ಅವರು ದೆಹಲಿಯ ಸರವಣ ಭವನದಲ್ಲಿ ಉಪಾಹಾರ ಸೇವಿಸಲು ತೆರಳಿದ್ದ ಸಂದರ್ಭದಲ್ಲಿ ಅವರ ಜೊತೆ ಮಾಜಿ ಸಚಿವರಾದ ಡಾ.ಎಚ್.ಸಿ.ಮಹದೇವಪ್ಪ, ಕೆ.ಜೆ.ಜಾರ್ಜ್, ಸತೀಶ್ ಜಾರಕಿಹೊಳಿ, ಭೈರತಿ ಸುರೇಶ್, ಆರ್.ಬಿ.ತಿಮ್ಮಾಪೂರ್, ಡಾ.ಎಂ.ಸಿ. ಸುಧಾಕರ್, ಪುಟ್ಟರಂಗಶೆಟ್ಟಿ, ಶಾಸಕರಾದ ಅಪ್ಪಾಜಿ ನಾಡಗೌಡ, ಕೋನರೆಡ್ಡಿ, ಪಿ.ಎಂ.ಅಶೋಕ್, ಎ.ಆರ್.ಕೃಷ್ಣಮೂರ್ತಿ ವಿಧಾನ ಪರಿಷತ್ ಸದಸ್ಯರಾದ ಎಂ.ಆರ್.ಸೀತಾರಾಮ್, ಐವಾನ್ ಡಿಸೋಜ ಸೇರಿದಂತೆ ಹಲವಾರು ಮಂದಿ ಇದ್ದರು.

ಉಪಾಹಾರ ಸೇವಿಸಲು ಹೋಟೆಲ್‌ಗೆ ತೆರಳಿದ ಸಿದ್ದರಾಮಯ್ಯ ಅವರಿಗೆ ವಿದೇಶಾಂಗ ಸಚಿವ ಎಸ್.ಜೈಶಂಕರ್ ಎದುರಾದರು. ಈ ವೇಳೆ ಅವರನ್ನು ಹೇಗಿದ್ದೀರಾ ಎಂದು ಸಿದ್ದರಾಮಯ್ಯ ಕುಶಲೋಪರಿ ವಿಚಾರಿಸಿದರು.



ಬುಧವಾರ ನಡೆಯುವ ಡಿ.ಕೆ ಶಿವಕುಮಾರ್ ಮುಖ್ಯಮಂತ್ರಿ ಪದಗ್ರಹಣ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಬ್ರಹ್ಮಶ್ರೀ ನಾರಾಯಣಗುರು ಶಕ್ತಿಪೀಠದ ಪೀಠಾಧಿಪತಿ ಹಾಗೂ ಅತಿ ಹಿಂದುಳಿದ ಮಠಾಧೀಶರ ಮಹಾಸಭಾ ರಾಜ್ಯಾಧ್ಯಕ್ಷ ಡಾ.ಪ್ರಣವಾನಂದ ಸ್ವಾಮೀಜಿ ಯವರಿಗೆ ಮುಖ್ಯಮಂತ್ರಿ ಕಚೇರಿಯಿಂದ ಆಹ್ವಾನ ನೀಡಲಾಗಿದೆ.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಪ್ರಮಾಣವಚನ ಸ್ವೀಕಾರ ವೇದಿಕೆ ದಿಕ್ಕು ಬದಲು



ಡಿ.ಕೆ.ಶಿವಕುಮಾರ್ ಪ್ರಮಾಣವಚನ ಸಮಾರಂಭಕ್ಕಾಗಿ ಲೋಕಭವನದ ಎದುರು ಮಂಗಳವಾರ ತಯಾರಿ ಭರದಿಂದ ಸಾಗಿದೆ.

**ಬೆಂಗಳೂರು, ಜೂ.2:** ಜ್ಯೋತಿಷಿಗಳ ಸಲಹೆಯಂತೆ ಕಾರ್ಯಕ್ರಮ ರಾಜ್ಯದ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ಡಿ.ಕೆ. ಶಿವಕುಮಾರ್ ಅವರು, ಸ್ವಾಮೀಜಿ, ಫಾದರ್ ಹಾಗೂ ಮೌಲ್ವಿ ಸೇರಿದಂತೆ ಸರ್ವಧರ್ಮಗಳ ಸ್ವಾಮೀಜಿಗಳ ಸಮ್ಮುಖದಲ್ಲಿ ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ.

ಸಂಬಂಧ ಈಗಾಗಲೇ ಎಲ್ಲಾ ಧರ್ಮ, ಜಾತಿಗಳ ಸುಮಾರು 55 ಸ್ವಾಮೀಜಿಗಳಿಗೆ ಆಹ್ವಾನ ನೀಡಿದ್ದಾರೆ. ಈ ಮೂಲಕ ಸರ್ವ ಧರ್ಮ ಸಹಿಷ್ಣುತೆ, ಪರಸ್ಪರ ಸಹಬಾಳ್ವೆ, ಶಾಂತಿ ಸೌಹಾರ್ದತೆಯ ಸಂದೇಶ ಸಾರಲು ಡಿಕೆಶಿ ಮುಂದಾಗಿದ್ದಾರೆ ಎನ್ನಲಾಗಿದೆ. ಪ್ರಮಾಣವಚನ ಸ್ವೀಕಾರ ಸಮಾರಂಭ ಲೋಕಭವನದಲ್ಲಿ ನಡೆಯಲಿದ್ದು, ಇದೇ ಮೊದಲ ಬಾರಿಗೆ ಡಿ.ಕೆ. ಶಿವಕುಮಾರ್ ಉತ್ತರ ಭಾಗದಲ್ಲಿ ನಿಂತು ಪ್ರಮಾಣವಚನ ಸ್ವೀಕಾರ ಮಾಡಲಿದ್ದಾರೆ. ಕಾಂಕ್ರಿಟ್‌ನಲ್ಲಿ ನಿರ್ಮಿಸಿರುವ ಲೋಕಭವನದ ಗಾಜಿನ ಮನೆಯ ವೇದಿಕೆ ಪೂರ್ವ ಭಾಗದಲ್ಲಿದೆ. ಡಿ.ಕೆ. ಶಿವಕುಮಾರ್ ಅವರ ಜ್ಯೋತಿಷಿ ಬೆಳ್ಳೂರು ದ್ವಾರಕಾನಾಥ್ ಅವರ ಸೂಚನೆಯಂತೆ ಪ್ರಮಾಣ ವಚನ ಸ್ವೀಕಾರ ಸಮಾರಂಭದ ವೇದಿಕೆಯನ್ನು ಬದಲಿಸಲಾಗಿದೆ. ಡಿ.ಕೆ.ಸುರೇಶ್ ನೇತೃತ್ವದಲ್ಲಿ ರಾಜಭವನದಲ್ಲಿ ಪದಗ್ರಹಣ ಸಮಾರಂಭಕ್ಕೆ ವೇದಿಕೆ ಸಿದ್ಧವಾಗಿದ್ದು, ಹೊಸ ದಿಕ್ಕಿನಲ್ಲಿ ನಿಂತು ಪ್ರಮಾಣ ವಚನ ಸ್ವೀಕರಿಸಲಿದ್ದಾರೆ ಎಂದು ತಿಳಿದು ಬಂದಿದೆ. ಪದಗ್ರಹಣದ ನಂತರ ಡಿ.ಕೆ. ಶಿವಕುಮಾರ್ ಅವರು ನೇರವಾಗಿ ಉತ್ತರ ದಿಕ್ಕಿನಿಂದಲೇ ರಾಜಭವನದ ಗೇಟ್‌ನಿಂದ ಲೋಕಭವನ ರಸ್ತೆಯಲ್ಲಿ ಬಂದು ಏಕಮುಖ ಸಂಚಾರದಲ್ಲಿ ಸಾಗಿ, ಜಿ.ಪಿ.ಓಗೆ ಬಂದು ನಂತರ ಉತ್ತರ ದಿಕ್ಕಿನ ಮೂಲಕ ವಿಧಾನಸೌಧ ಪ್ರವೇಶಿಸಲಿದ್ದಾರೆ. ವಿಧಾನಸೌಧದ ತಮ್ಮ ಕೊಠಡಿಗೆ ತೆರಳಿ, ನಂತರ ಸಂಪುಟ ಸಭೆ ನಡೆಸಿ ಡಿ.ಕೆ. ಶಿವಕುಮಾರ್ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಲಿದ್ದಾರೆ ಎನ್ನಲಾಗಿದೆ.

## ಕೆಪಿಸಿಸಿ ಅಧ್ಯಕ್ಷರು ಯಾರು?

ಸತೀಶ್ ಜಾರಕಿಹೋಳಿ ಮತ್ತು ಈಶ್ವರ್ ಖಂಡ್ರೆ ಅವರನ್ನು ಮೊದಲ ಪಟ್ಟಿಯಿಂದ ಹೊರಗಿಡಲಾಗಿದೆ ಎನ್ನಲಾಗಿದೆ. ಇಬ್ಬರ ನಾಯಕರ ಪೈಕಿ ಒಬ್ಬರನ್ನು ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಪರಿಗಣಿಸಬಹುದು ಎಂದು ನಿರೀಕ್ಷೆ ಮಾಡಲಾಗುತ್ತಿದೆ. ಇಬ್ಬರು ನಾಯಕರು ಸಚಿವ ಸ್ಥಾನದ ಜೊತೆಗೆ ಕೆಪಿಸಿಸಿ ಅಧ್ಯಕ್ಷ ಸ್ಥಾನ ನೀಡುವಂತೆ ಮನವಿ ಮಾಡಿದ್ದು, ಈ ಬಗ್ಗೆ ಹೈಕಮಾಂಡ್ ಪರಿಶೀಲಿಸುತ್ತಿದೆ.

## ಜೂ.5ರ ಬಳಿಕ ಪರಿಷತ್, ರಾಜ್ಯಸಭೆ ಅಭ್ಯರ್ಥಿಗಳ ಘೋಷಣೆ ಸಾಧ್ಯತೆ

ಹೈಕಮಾಂಡ್ ನಾಯಕರ ಸಮ್ಮುಖದಲ್ಲಿ ಪರಿಷತ್ ಮತ್ತು ರಾಜ್ಯಸಭಾ ಸ್ಥಾನ ಅಭ್ಯರ್ಥಿಗಳ ಬಗ್ಗೆಯೂ ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಅವರು ಚರ್ಚೆ ನಡೆಸಿದ್ದಾರೆ. ಜೂನ್ ಐದರ ಬಳಿಕ ಅಭ್ಯರ್ಥಿಗಳ ಹೆಸರನ್ನು ಘೋಷಣೆ ಮಾಡುವ ಸಾಧ್ಯತೆ ಇದೆ.

## ಪ್ರಮಾಣವಚನ ಸಮಾರಂಭಕ್ಕೆ ಮಾಧ್ಯಮಗಳಿಗೆ ನಿಯಂತ್ರಣ?

ಲೋಕಭವನಕ್ಕೆ ಇದೇ ಮೊದಲ ಬಾರಿಗೆ ಮಾಧ್ಯಮಗಳನ್ನು ನಿಯಂತ್ರಿಸಲಾಗುತ್ತಿದೆ. ಸಾಮಾನ್ಯವಾಗಿ ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೂ ಮುನ್ನ ಮಾಧ್ಯಮಗಳಿಗೆ ವಾರ್ತಾ ಇಲಾಖೆ ಮೂಲಕ ಪಾಸುಗಳನ್ನು ವಿತರಿಸಲಾಗುತ್ತಿತ್ತು. ಆದರೆ ಈ ಬಾರಿ ಇನ್ನೂ ವಿತರಣೆ ಆರಂಭಿಸಿಲ್ಲ. ವಾರ್ತಾ ಇಲಾಖೆಗೆ ಕೇವಲ 50 ಪಾಸುಗಳನ್ನು ಮಾತ್ರ ವಿತರಿಸಲಾಗಿದ್ದು, ಈ ಪೈಕಿ ಹತ್ತು ಪಾಸುಗಳನ್ನು ದೂರದರ್ಶನ ಚಂದನ ವಾಹಿನಿಗೆ ವಿತರಿಸಲಾಗಿದೆ. ಹತ್ತು ಪಾಸುಗಳನ್ನು ವಾರ್ತಾ ಇಲಾಖೆ ಸಿಬ್ಬಂದಿಗಾಗಿ ಮೀಸಲಿರಿಸಲಾಗಿದೆ. ಉಳಿದ 20 ಪಾಸುಗಳಲ್ಲಿ ಒಂದೊಂದು ಮಾಧ್ಯಮಕ್ಕೆ ಒಂದೊಂದು ಪಾಸ್ ಗಳನ್ನು ವಿತರಿಸುವ ನಿರೀಕ್ಷೆಯಿದ್ದು, ಛಾಯಾಗ್ರಾಹಕರಿಗೆ ಅವಕಾಶ ನೀಡುತ್ತಿಲ್ಲ. ಮಾಧ್ಯಮಗಳನ್ನು ನಿಯಂತ್ರಣ ಮಾಡುತ್ತಿರುವುದು ಕೂಡ ಇದೇ ಮೊದಲು ಎನ್ನಲಾಗಿದೆ.


ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಲಿರುವ ಡಿ.ಕೆ. ಶಿವಕುಮಾರ್ ಅವರನ್ನು ನವದೆಹಲಿಯಲ್ಲಿ ಮಂಗಳವಾರ ಭೇಟಿಮಾಡಿ ಶುಭಕೋರಿದ ಮಾಜಿ ಸಂಸದ ಮಂಜುನಾಥ ಕುನ್ನೂರ್.

# ಕಾಗದದ ಕಡತ ಬದಲಿಗೆ ಶಾಸಕರಿಗೆ ಐ-ಪ್ಯಾಡ್: ಸ್ಪೀಕರ್ ಯು.ಟಿ. ಖಾದರ್



**ಮಂಗಳೂರು, ಜೂ.2:** ಕರ್ನಾಟಕ ವಿಧಾನಮಂಡಲವು ಮುಂದಿನ ಆರು ತಿಂಗಳಲ್ಲಿ ಸಂಪೂರ್ಣವಾಗಿ ಡಿಜಿಟಲೀಕರಣಗೊಂಡು ಕಾಗದ ರಹಿತವಾಗಿ ಬದಲಾಗಲಿದೆ ಎಂದು ವಿಧಾನಸಭೆ ಸ್ಪೀಕರ್ ಯುಟಿ ಖಾದರ್ ತಿಳಿಸಿದ್ದಾರೆ. ಇನ್ಮುಂದೆ ಅಧಿವೇಶನದ ಅವಧಿಯಲ್ಲಿ ವಿಧಾನಸಭೆ ಹಾಗೂ ವಿಧಾನಪರಿಷತ್ ಸದಸ್ಯರು ಕಾಗದದ ಕಡತಗಳ ಬದಲಿಗೆ ಇನ್‌ಬಿಲ್ಟ್ ಅಪ್ಲಿಕೇಶನ್ ಒಳಗೊಂಡಿರುವ ಐಪ್ಯಾಡ್‌ಗಳನ್ನು ಬಳಸಲಿದ್ದಾರೆ. ಈ ಮಹತ್ವಾಕಾಂಕ್ಷಿ ನಿರ್ಧಾರದಿಂದಾಗಿ ಮುದ್ರಣ ಮತ್ತು ಸಾಗಣೆಗೆ ತಗಲುತ್ತಿದ್ದ ಕೋಟ್ಯಂತರ ರೂ. ವೆಚ್ಚ ಹಾಗೂ ಕಾಗದದ ಬಳಕೆಯನ್ನು ಗಣನೀಯವಾಗಿ ಕಡಿಮೆ ಮಾಡಬಹುದು ಎಂದು ಹೇಳಿದ್ದಾರೆ.

ಬೆಂಗಳೂರು, ಬೆಳಗಾವಿ ಸದನಗಳ ಡಿಜಿಟಲೀಕರಣಕ್ಕೆ ಒಟ್ಟು 130 ಕೋಟಿ ರೂ. ಅಂದಾಜು ವೆಚ್ಚವಾಗಲಿದ್ದು, ಶೇ.60ರಷ್ಟು ಹಣ ಭರಿಸಲಿರುವ ಕೇಂದ್ರ ಸರ್ಕಾರ. ಈ ಡಿಜಿಟಲ್ ಕ್ರಾಂತಿಗಾಗಿ ಕರ್ನಾಟಕ ವಿಧಾನಸಭೆ ಮತ್ತು ವಿಧಾನಪರಿಷತ್ ಜಂಟಿಯಾಗಿ 'ರಾಷ್ಟ್ರೀಯ ಇ-ವಿಧಾನ ಅಪ್ಲಿಕೇಶನ್ ಯೋಜನೆಯೊಂದಿಗೆ ಒಪ್ಪಂದಕ್ಕೆ ಸಹಿ ಹಾಕಿವೆ. ಈ ಪ್ರಕ್ರಿಯೆಯ ಸಂಪೂರ್ಣ ಮೇಲ್ವಿಚಾರಣೆಯನ್ನು 'ನೆವಾ' ಮತ್ತು ರಾಜ್ಯ ಉಸ್ತುವಾರಿ ಸಮಿತಿಯ ಅಧಿಕಾರಿಗಳು ನೋಡಿಕೊಳ್ಳಲಿದ್ದಾರೆ. ಬೆಂಗಳೂರು ಮತ್ತು ಬೆಳಗಾವಿಯ ಸುವರ್ಣಸೌಧದ ವಿಧಾನಸಭೆ ಕಲಾಪಗಳ ಡಿಜಿಟಲೀಕರಣಕ್ಕೆ 78 ಕೋಟಿ ರೂ. ಹಾಗೂ ವಿಧಾನಪರಿಷತ್ ಡಿಜಿಟಲೀಕರಣಕ್ಕೆ 52 ಕೋಟಿ ರೂ. ಸೇರಿ ಒಟ್ಟು 130 ಕೋಟಿ ರೂ. ವೆಚ್ಚವಾಗಲಿದ್ದು, ಇದರಲ್ಲಿ ಕೇಂದ್ರ ಸರ್ಕಾರ ಶೇ.60ರಷ್ಟು ಪಾಲನ್ನು ನೀಡಲಿದೆ.

**ಶಾಸಕರಿಗೆ ತರಬೇತಿ:** ಅಧಿವೇಶನದ ದಿನದ ಕಾರ್ಯಸೂಚಿ ಪ್ರಶ್ನೋತ್ತರಗಳು ಹಾಗೂ ಮಂಡನೆಯಾಗುವ ಎಲ್ಲಾ ವಿಧೇಯಕಗಳನ್ನು) ಶಾಸಕರಿಗೆ ಇ-ಫಾರ್ಮ್ಯಾಟ್ (ಡಿಜಿಟಲ್) ಮೂಲಕವೇ ಸುಲಭವಾಗಿ ಸಿಗುವಂತೆ ಕಳುಹಿಸಲಾಗುತ್ತದೆ. ಇದರಿಂದಾಗಿ ಕಡತಗಳು ಕಾಣೆಯಾಗುವ ಭೀತಿ ಇರುವುದಿಲ್ಲ. ಅಧಿವೇಶನದ ಸಮಯದಲ್ಲಿ ಶಾಸಕರ ಮೇಜುಗಳಿಗೆ ಐಪ್ಯಾಡ್‌ಗಳನ್ನು ಅಳವಡಿಸಲಾಗುತ್ತದೆಯಲ್ಲದೆ, ಕಲಾಪ ಮುಗಿದ ನಂತರ ಅವುಗಳನ್ನು ಸುರಕ್ಷಿತವಾಗಿ ತೆಗೆದಿಡಲಾಗುತ್ತದೆ. ಈ ವ್ಯವಸ್ಥೆಯನ್ನು ಬಳಸಲು ಎಲ್ಲಾ ಶಾಸಕರಿಗೂ ವಿಶೇಷ ತರಬೇತಿ ನೀಡಲಾಗುವುದು ಎಂದು ಸ್ಪೀಕರ್ ಯು.ಟಿ. ಖಾದರ್ ತಿಳಿಸಿದ್ದಾರೆ. ಕೇವಲ ಕಲಾಪ ಮಾತ್ರವಲ್ಲದೆ ಶಾಸಕರ ಹಾಜರಾತಿ ವ್ಯವಸ್ಥೆಯನ್ನು ಕೂಡ ಸಂಪೂರ್ಣವಾಗಿ ಡಿಜಿಟಲೀಕರಣಗೊಳಿಸಲಾಗುತ್ತಿದೆ.

# ಸುಪ್ರೀಂ ಕೋರ್ಟ್‌ನ ಐವರು ನ್ಯಾಯಾಧೀಶರಿಗೆ ಪ್ರತಿಜ್ಞಾವಿಧಿ

■ ಒಂದನೇ ಪುಟದಿಂದ...

ಹೊಸದಾಗಿ ನೇಮಕಗೊಂಡ ನ್ಯಾಯಾಧೀಶರಲ್ಲಿ ನಾಲ್ವರು ಹೈಕೋರ್ಟ್‌ಗಳ ಮುಖ್ಯ ನ್ಯಾಯಮೂರ್ತಿಗಳು ಸೇರಿದ್ದಾರೆ. ನ್ಯಾಯಮೂರ್ತಿ ಶೀಲ್ ನಾಗು ಅವರು ಮಧ್ಯಪ್ರದೇಶ ಹೈಕೋರ್ಟ್‌ನಿಂದ ಬಡ್ತಿ ಪಡೆದ ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿದ್ದರು.

ನ್ಯಾಯಮೂರ್ತಿ ಚಂದ್ರಶೇಖರ್ ಅವರು ಬಾಂಬೆ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿ ಸೇವೆ ಸಲ್ಲಿಸಿದರು ಮತ್ತು ಜಾರ್ಖಂಡ್ ಹೈಕೋರ್ಟ್‌ನಿಂದ ಬಂದವರು. ನ್ಯಾಯಮೂರ್ತಿ ಸಂಜೀವ್ ಸಚ್‌ದೇವ ಅವರು ಮಧ್ಯಪ್ರದೇಶ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಗಳಾಗಿದ್ದು, ದೆಹಲಿ ಹೈಕೋರ್ಟ್ ಅವರ ಮಾತೃ ನ್ಯಾಯಾಲಯವಾಗಿತ್ತು, ಆದರೆ ನ್ಯಾಯಮೂರ್ತಿ ಅರುಣ್ ಪಲ್ಲಿ ಅವರು ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್‌ನಿಂದ ಬಡ್ತಿ ಪಡೆದು ಜಮ್ಮು ಮತ್ತು ಕಾಶ್ಮೀರ ಮತ್ತು ಲಡಾಖ್ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಗಳಾಗಿ ಸೇವೆ ಸಲ್ಲಿಸುತ್ತಿದ್ದರು.

ಐದನೇ ನೇಮಕಗೊಂಡ ಹಿರಿಯ ವಕೀಲ ವಿ ಮೋಹನ ಅವರು ಸುಪ್ರೀಂ ಕೋರ್ಟ್‌ನಲ್ಲಿ ಪ್ರಾಕ್ಟೀಸ್ ಮಾಡುತ್ತಿದ್ದರು ಮತ್ತು ಸುಪ್ರೀಂ ಕೋರ್ಟ್ ಪೀಠಕ್ಕೆ ನೇರವಾಗಿ ಬಡ್ತಿ ಪಡೆದ ಕೆಲವೇ ಕೆಲವು ಬಾರ್ ಸದಸ್ಯರಲ್ಲಿ ಒಬ್ಬರು.

# 174 ಕೋಟಿ ರೂ. ಖರ್ಚಾದರೂ ಹರಿಯಲಿಲ್ಲ ನೀರು: ಅಶೋಕ್



■ ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರದ ಫಲವಾಗಿ ರೈತರಿಗೆ ತಲುಪದ ವೆಂಕಟೇಶ್ವರ ಏತನೀರಾವರಿ ಯೋಜನೆ

**ಬೆಂಗಳೂರು, ಜೂ.2:** ಬಾಗಲಕೋಟೆ ಜಿಲ್ಲೆಯ ರಬಕವಿ-ಬನಹಟ್ಟಿ ತಾಲೂಕಿನ ರೈತರ ಪಾಲಿಗೆ ವರದಾನವಾಗಬೇಕಿದ್ದ ವೆಂಕಟೇಶ್ವರ ಏತನೀರಾವರಿ ಯೋಜನೆ ಇಂದು ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರ ಮತ್ತು ಬೇಜವಾಬ್ದಾರಿತನ ದಿಂದಾಗಿ ರೈತರ ಪಾಲಿಗೆ ಶಾಪವಾಗಿ ಪರಿಣಮಿಸಿದೆ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್ .ಅಶೋಕ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. ತಮ್ಮ ಎಕ್ಸ್ ಖಾತೆಯಲ್ಲಿ ಸರ್ಕಾರದ ವಿರುದ್ಧ ಪೋಸ್ಟ್ ಮಾಡಿರುವ ಅವರು, 174 ಕೋಟಿ ರೂ. ಲೂಟಿಯಾದರೂ ಹರಿಯಲಿಲ್ಲ ಒಂದು ಹನಿ ನೀರು. ಬರೊಬ್ಬರಿ 174.42 ಕೋಟಿ ರೂಪಾಯಿ ಸಾರ್ವಜನಿಕರ ಹಣ ನೀರಾವರಿ ಹೆಸರಿನಲ್ಲಿ ವೆಚ್ಚವಾಗಿ ಎರಡೂವರೆ ವರ್ಷಗಳೇ ಕಳೆದರೂ ರೈತರ ಜಮೀನಿಗೆ ಹರಿದಿದ್ದು ಮಾತ್ರ ಶೂನ್ಯ ಎಂದುಕಿಡಿಕಾರಿದ್ದಾರೆ.

ಕಾಂಗ್ರೆಸ್ ನಾಯಕರೇ, ಎಲ್ಲಿಗೆ ಹೋಯಿತು 174 ಕೋಟಿ ರೂಪಾಯಿ , ಕೃಷ್ಣಾನದಿಯಿಂದ 0.75 ಟಿಎಂಸಿಯಷ್ಟು ನೀರನ್ನು ಬಳಸಿಕೊಂಡು ಸುಮಾರು 17,991 ಎಕರೆ (7,200 ಹೆಕ್ಟೇರ್) ಒಣಭೂಮಿಗೆ ನೀರುಣಿಸುವ ಭವ್ಯ ಆಶ್ವಾಸನೆ ನೀಡಿದ್ದರಲ್ಲ, ಆ ನೀರೆಲ್ಲಾ ನಿಮ್ಮ ಭ್ರಷ್ಟಾಚಾರದ ಜೇಬಿಗೆ ಹರಿದುಹೋಯಿತೇ, ಕುಲಹಳ್ಳಿ, ಪ್ರಸಿದ್ಧ ಜಾಕ್‌ವೆಲ್ ಬಳಿ ನೀರು ಪೂರೈಕೆ ಮಾಡುವ ನಾಟಕವಾಡಿದ ಈ ಸರ್ಕಾರ, ಜಮೀನು ಕಳೆದುಕೊಂಡ ಬಡ ರೈತರಿಗೆ ಇನ್ನೂ ಸೂಕ್ತ ಪರಿಹಾರ ಧನವನ್ನೇ ಒದಗಿಸಿಲ್ಲ ಎಂದು ಆರೋಪಿಸಿದ್ದಾರೆ.

# ಸಚಿವ ಸ್ಥಾನ ನೀಡುವುದಾಗಿ ರಾಹುಲ್‌ಗಾಂಧಿ ಭರವಸೆ: ಯತೀಂದ್ರ



**ನವದೆಹಲಿ, ಜೂ.2:** ಡಿಕೆ ಶಿವಕುಮಾರ್ ನೇತೃತ್ವದಲ್ಲಿ ರಚನೆಯಾಗಲಿರುವ ನೂತನ ಕಾಂಗ್ರೆಸ್ ಸರ್ಕಾರದ ಸಚಿವ ಸಂಪುಟಕ್ಕೆ ಯಾರನ್ನೆಲ್ಲಾ ಸೇರಿಸಿಕೊಳ್ಳಬೇಕು ಎಂದು ಹೈಕಮಾಂಡ್ ನಿರ್ಧರಿಸುತ್ತಿದ್ದು ಈ ಮಧ್ಯೆ ನಿರ್ಗಮಿತ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ ಯತೀಂದ್ರ ಸಿದ್ದರಾಮಯ್ಯ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ತಮ್ಮನ್ನು ಸಂಪುಟಕ್ಕೆ ಸೇರಿಸಿಕೊಳ್ಳುವುದಾಗಿ ಮಾತು ಕೊಟ್ಟಿದ್ದಾರೆ ಎಂದು ಹೇಳಿದ್ದಾರೆ.

ಉಪಮುಖ್ಯಮಂತ್ರಿಯಾಗಲು ಬಯಸುತ್ತೀರಾ ಎಂಬ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಯತೀಂದ್ರ, ನಾನು ಯಾವುದೇ ನಿರ್ದಿಷ್ಟ ಖಾತೆಗಾಗಿ ಬೇಡಿಕೆ ಇಟ್ಟಿಲ್ಲ ಎಂದರು.

ಕಳೆದ ಬಾರಿ ನಾನು ಹೈಕಮಾಂಡ್ ಭೇಟಿಯಾದಾಗ ರಾಹುಲ್ ಗಾಂಧಿ ಅವರು ನನ್ನನ್ನು ಸಂಪುಟಕ್ಕೆ ಸೇರಿಸಿಕೊಳ್ಳುವುದಾಗಿ ಮಾತು ಕೊಟ್ಟಿದ್ದರು. ಆದ್ದರಿಂದ ನಾನು ಆಶಾವಾದಿಯಾಗಿದ್ದೇನೆ. ಯಾವುದೇ ಖಾತೆ ಇರಲಿ, ನಾನು ಸಂತೋಷವಾಗಿರುತ್ತೇನೆ ಎಂದು ಯತೀಂದ್ರ ಸಿದ್ದರಾಮಯ್ಯ ಹೇಳಿದರು.

ಕರ್ನಾಟಕದ ನಿಯೋಜಿತ ಮುಖ್ಯಮಂತ್ರಿಯಾಗಿರುವ ಶಿವಕುಮಾರ್, ಜೂನ್ 3ರಂದು ನಡೆಯಲಿರುವ ಪ್ರಮಾಣವಚನ ಸ್ವೀಕಾರ ಸಮಾರಂಭಕ್ಕೂ ಮುನ್ನ ಇಂದು ಕಾಂಗ್ರೆಸ್ ಹೈಕಮಾಂಡ್ ಭೇಟಿ ಮಾಡಲು ರಾಷ್ಟ್ರ ರಾಜಧಾನಿಗೆ ತೆರಳಿದ್ದಾರೆ.

ಡಿ.ಕೆ. ಶಿವಕುಮಾರ್ ಜೊತೆ 10 ರಿಂದ 12 ಶಾಸಕರು ಸಚಿವರಾಗಿ ಪ್ರಮಾಣವಚನ ಸ್ವೀಕರಿಸುವ ಸಾಧ್ಯತೆ ಇದೆ.

# ವಾಲ್ಮೀಕಿ ನಿಗಮ ಹಗರಣ: ಮಾಜಿ ಸಚಿವ ಸೇರಿ ಹಲವರ ವಿರುದ್ಧ ಆರೋಪಪಟ್ಟಿ ಸಲ್ಲಿಕೆ

**ನವದೆಹಲಿ, ಜೂ.2:** ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಲಿಮಿಟೆಡ್ (ಕೆಎಂವಿಎಸ್ಟಿಡಿಸಿಎಲ್) ಗೆ ಸೇರಿದ ಹಣವನ್ನು ದುರುಪಯೋಗಪಡಿಸಿಕೊಂಡ ಆರೋಪಕ್ಕೆ ಸಂಬಂಧಿಸಿದಂತೆ ಕೇಂದ್ರ ತನಿಖಾ ದಳ (ಸಿಬಿಐ) ಮಂಗಳವಾರ ಮೂರು ಆರೋಪಪಟ್ಟಿಗಳನ್ನು ಸಲ್ಲಿಸಿದೆ ಎಂದು ತಿಳಿಸಿದೆ.

ಸಂಸ್ಥೆಯ ಪ್ರಕಾರ, ತನಿಖೆ ಪೂರ್ಣಗೊಂಡಿದ್ದು, ಕೆಎಂವಿಎಸ್‌ಟಿಡಿಸಿಎಲ್, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಮತ್ತು ಕರ್ನಾಟಕ ಜರ್ಮನ್ ತಾಂತ್ರಿಕ ತರಬೇತಿ ಸಂಸ್ಥೆ (ಕೆಜಿಟಿಟಿಐ) ಒಳಗೊಂಡ ವಂಚನೆಗೆ ಸಂಬಂಧಿಸಿದಂತೆ ಮೂರು ಪ್ರತ್ಯೇಕ ಆರೋಪಪಟ್ಟಿಗಳನ್ನು ಸಮರ್ಥ ನ್ಯಾಯಾಲಯದ ಮುಂದೆ ಸಲ್ಲಿಸಲಾಗಿದೆ. ಕರ್ನಾಟಕದ ಮಾಜಿ ಸಚಿವ ಬಿ. ನಾಗೇಂದ್ರ ಅವರನ್ನು ಮೂರು ಆರೋಪಪಟ್ಟಿಗಳಲ್ಲಿ ಆರೋಪಿಯನ್ನಾಗಿ ಹೆಸರಿಸಲಾಗಿದೆ ಎಂದು ಸಿಬಿಐ ಹೇಳಿದೆ. ಬಹು ಘಟಕಗಳನ್ನು ವ್ಯಾಪಿಸಿರುವ ಪಿತೂರಿಯಲ್ಲಿ ಅವರು ಮುಖ್ಯ ಪಾತ್ರ ವಹಿಸಿದ್ದಾರೆ ಎಂದು ಸಂಸ್ಥೆ ಆರೋಪಿಸಿದೆ.

ತನಿಖೆಯನ್ನು ಕರ್ನಾಟಕ ಹೈಕೋರ್ಟ್ ನಿಯತಕಾಲಿಕ ಸ್ಥಿತಿ ವರದಿಗಳ ಮೂಲಕ ಮೇಲ್ವಿಚಾರಣೆ ಮಾಡಿತು. ತನಿಖೆಯ ಸಮಯದಲ್ಲಿ, ಸಿಬಿಐ ಎರಡು ಇತರ ರಾಜ್ಯ ಸರ್ಕಾರಿ ಸಂಸ್ಥೆಗಳನ್ನು ಒಳಗೊಂಡ ವಂಚನೆಯನ್ನು ಬಹಿರಂಗಪಡಿಸಿತು. ಏಜೆನ್ಸಿಯ ಪ್ರಕಾರ, ತನಿಖೆಯು ನಾಗೇಂದ್ರ, ಅವರ ಆಪ್ತ ಸಹಚರ ನೆಕ್ಕಂಟಿ ನಾಗರಾಜ್, ಕೆಎಂವಿಎಸ್‌ಟಿಡಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಪದ್ಮನಾಭ ಜೆ.ಜಿ. ಮತ್ತು ಹೈದರಾಬಾದ್ ಮೂಲದ ಉದ್ಯಮಿ ಸತ್ಯನಾರಾಯಣ ವರ್ಮಾ ಒಳಗೊಂಡ ಪಿತೂರಿಯನ್ನು ಬಹಿರಂಗಪಡಿಸಿದೆ. ನಕಲಿ ವ್ಯವಹಾರ ಸಂಸ್ಥೆಗಳ ಹೆಸರಿನಲ್ಲಿ 18 ಬ್ಯಾಂಕ್ ಖಾತೆಗಳನ್ನು ತೆರೆಯಲು ನಕಲಿ ದಾಖಲೆಗಳನ್ನು ಬಳಸಲಾಗಿದೆ ಮತ್ತು ನಕಲಿ ಸಹಿಗಳು ಮತ್ತು ನಕಲಿ ಅಧಿಕೃತ ಮುದ್ರೆಗಳನ್ನು ಬಳಸಿ ವಂಚನೆಯ ವ್ಯವಹಾರ ನಡೆಸಲಾಗಿದೆ ಎಂದು ಸಿಬಿಐ ಆರೋಪಿಸಿದೆ.

**ಸಿಬಿಐ ತನಿಖೆ ಪೂರ್ಣ**

**ಪರಿಶಿಷ್ಟರ ಹಣ ದುರುಪಯೋಗ ಮಾಡಿದ ಆರೋಪ**

ಕೆಎಂವಿಎಸ್‌ಟಿಡಿಸಿಎಲ್‌ನ ಯೂನಿಯನ್ ಬ್ಯಾಂಕ್ ಖಾತೆಗೆ ಸುಮಾರು 187 ಕೋಟಿ ರೂ.ಗಳನ್ನು ಸಂಗ್ರಹಿಸಲಾಗಿದೆ, ಅದರಲ್ಲಿ 89.63 ಕೋಟಿ ರೂ.ಗಳನ್ನು ನಕಲಿ ಚೆಕ್ ಮತ್ತು ಆರ್‌ಟಿಜಿಎಸ್ ವ್ಯವಹಾರಗಳ ಮೂಲಕ ವಂಚನೆಯಿಂದ ತಿರುಗಿಸಲಾಗಿದೆ ಎಂದು ಸಂಸ್ಥೆ ಆರೋಪಿಸಿದೆ. ಹಣವನ್ನು ನಗದು, ಬೆಳ್ಳಿ ಮತ್ತು ಐಷಾರಾಮಿ ವಾಹನಗಳಾಗಿ ಪರಿವರ್ತಿಸುವ ಮೊದಲು ಸುಮಾರು 600 ಬ್ಯಾಂಕ್ ಖಾತೆಗಳ ಮೂಲಕ ವರ್ಗಾಯಿಸಲಾಗಿದೆ ಎಂದು ಆರೋಪಿಸಲಾಗಿದೆ.

ಮಾಜಿ ಸಚಿವರು, ಸರ್ಕಾರಿ ಅಧಿಕಾರಿಗಳು, ಬ್ಯಾಂಕ್ ಅಧಿಕಾರಿಗಳು, ಖಾಸಗಿ ಉದ್ಯಮಿಗಳು ಮತ್ತು ಮಧ್ಯವರ್ತಿಗಳು ಸೇರಿದಂತೆ 30 ವ್ಯಕ್ತಿಗಳು ಭಾಗಿಯಾಗಿದ್ದಾರೆ ಎಂದು ಸಿಬಿಐ ತನ್ನ ತನಿಖೆಯಿಂದ ತಿಳಿದುಬಂದಿದೆ ಎಂದು ಹೇಳಿದೆ. ಆರೋಪಪಟ್ಟಿಗಳನ್ನು ಸಲ್ಲಿಸಿದ ನಂತರ ಈ ವಿಷಯವು ಈಗ ಸಮರ್ಥ ನ್ಯಾಯಾಲಯದ ಮುಂದಿದೆ. ಆರೋಪಗಳು ಸಿಬಿಐನ ಆರೋಪಪಟ್ಟಿಗಳ ಭಾಗವಾಗಿದ್ದು, ಆರೋಪಿಗಳ ಅಪರಾಧ ಅಥವಾ ಮುಗ್ಧತೆಯನ್ನು ನ್ಯಾಯಾಂಗ ಪ್ರಕ್ರಿಯೆಯ ಸಮಯದಲ್ಲಿ ನಿರ್ಧರಿಸಲಾಗುತ್ತದೆ.

# ಪ್ರಮಾಣವಚನ: ವಿಧಾನಸೌಧ, ವಿಕಾಸಸೌಧ ಸಿಬ್ಬಂದಿಗೆ ಇಂದು ಅರ್ಧದಿನ ರಜೆ



**ಬೆಂಗಳೂರು, ಜೂ.2:** ರಾಜ್ಯದ ನೂತನ ಮುಖ್ಯಮಂತ್ರಿಯವರ ಪ್ರಮಾಣ ವಚನ ಸ್ವೀಕಾರ ಸಮಾರಂಭ ಬುಧವಾರ (ಜೂ.3) ಸಂಜೆ 4 ಗಂಟೆಗೆ ಲೋಕಭವನದಲ್ಲಿ ನಡೆಯಲಿರುವ ಹಿನ್ನೆಲೆಯಲ್ಲಿ ವಿಧಾನಸೌಧ, ವಿಕಾಸಸೌಧ ಸಿಬ್ಬಂದಿಗೆ ಅರ್ಧದಿನ ರಜೆ ನೀಡಲಾಗಿದೆ.

ವಿಧಾನಸೌಧ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಜನಸಂದಣಿ ಮತ್ತು ವಾಹನ ದಟ್ಟಣೆ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.ಭದ್ರತೆ ಮತ್ತು ಸುರಕ್ಷತೆಯ ದೃಷ್ಟಿಯಿಂದ ವಿಧಾನಸೌಧ, ವಿಕಾಸಸೌಧ ಹಾಗೂ ಬಹುಮಹಡಿ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಜೂನ್ 3ರಂದು ಅಪರಾಹ್ನ ಅರ್ಧ ದಿನ ರಜೆ ಘೋಷಿಸಲಾಗಿದೆ.

ಈ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಅಧಿಸೂಚನೆ ಹೊರಡಿಸಿದ್ದು, ಪ್ರಮಾಣವಚನ ಸಮಾರಂಭದ ಸಂದರ್ಭದಲ್ಲಿ ಸಾರ್ವಜನಿಕರ ಆಗಮನ ಹೆಚ್ಚಾಗುವ ಹಿನ್ನೆಲೆಯಲ್ಲಿ ಆಡಳಿತಾತ್ಮಕ ಹಾಗೂ ಭದ್ರತಾ ಕ್ರಮಗಳನ್ನು ಸುಗಮಗೊಳಿಸುವ ಉದ್ದೇಶದಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ತಿಳಿಸಿದೆ.ರಾಜ್ಯ ಸರ್ಕಾರದ ಅಧೀನ ಕಾರ್ಯದರ್ಶಿ ಆರ್. ಯದುಕುಮಾರ್ ಅವರು ಈ ಸಂಬಂಧ ಆದೇಶ ಹೊರಡಿಸಿದ್ದಾರೆ.

# ಗಂಭೀರ ಪ್ರಕರಣ ಹಿಂಪಡೆದ ಸರ್ಕಾರದ ಆದೇಶ ರದ್ದುಗೊಳಿಸಿ: ರಾಜ್ಯಪಾಲರಿಗೆ ಬಿಜೆಪಿ ಮನವಿ


**ಬೆಂಗಳೂರು, ಜೂ.2:** ಓಟ್‌ಬ್ಯಾಂಕ್ ರಾಜಕಾರಣಕ್ಕಾಗಿ ಮತ್ತು ಅಲ್ಪಸಂಖ್ಯಾತರನ್ನು ಓಲೈಸಲು ಆಳಂದದ ಶ್ರೀ ರಾಘವ ಚೈತನ್ಯ ಮಂದಿರದ ಮೇಲೆ ದಾಳಿ ಮಾಡಿದವರ ವಿರುದ್ಧ ದಾಖಲಾಗಿದ್ದ ಪ್ರಕರಣವನ್ನು ಕಾಂಗ್ರೆಸ್ ಸರ್ಕಾರ ವಾಪಸ್ ಪಡೆದಿದೆ ಎಂದು ವಿಧಾನಪರಿಷತ್ತಿನ ವಿರೋಧಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದ್ದಾರೆ.

ಕಲಬುರ್ಗಿಯ ಆಳಂದದಲ್ಲಿ ಪವಿತ್ರ ರಾಘವ ಚೈತನ್ಯ ಶಿವಲಿಂಗಕ್ಕೆ ಅಪಮಾನ ಎಸಗಿ, ಕೋಮು ಉದ್ವಿಗ್ನತೆ ಸೃಷ್ಟಿಸಿದ, ಸಾರ್ವಜನಿಕ ಆಸ್ತಿಪಾಸ್ತಿಗೆ ಹಾನಿ ಉಂಟುಮಾಡಿದ ಹಾಗೂ ಪೊಲೀಸ್ ಅಧಿಕಾರಿಗಳ ಮೇಲೆಯೇ ಹಲ್ಲೆ ನಡೆಸಿದ ಗಂಭೀರ ಪ್ರಕರಣಗಳ ಹಲವು ಕೇಸ್‌ಗಳನ್ನು ಹಿಂಪಡೆಯಲು ರಾಜ್ಯ ಸರ್ಕಾರ ಮುಂದಾಗಿರುವುದು ಅತ್ಯಂತ ಆಘಾತಕಾರಿ ಮತ್ತು ಖಂಡನೀಯ. ಇಂತಹ ಸಮಾಜವಿರೋಧಿ ಹಾಗೂ ಕ್ರಿಮಿನಲ್ ತತ್ವಗಳ ಬೆನ್ನಿಗೆ ನಿಲ್ಲುವ ಮೂಲಕ ಕಾಂಗ್ರೆಸ್ ಸರ್ಕಾರ ತಾನು ಜನವಿರೋಧಿ ಎಂಬುದನ್ನು ಮತ್ತೊಮ್ಮೆ ಸಾಬೀತುಪಡಿಸಿದೆ. ಈ ಹಿನ್ನೆಲೆಯಲ್ಲಿ, ಸಂವಿಧಾನವಿರೋಧಿ ಹಾಗೂ ಜನವಿರೋಧಿಯಾದ ಈ ಆದೇಶವನ್ನು ತಕ್ಷಣವೇ ರದ್ದುಪಡಿಸುವಂತೆ ರಾಜ್ಯಪಾಲರಿಗೆ ಇಂದು ಮನವಿ ಸಲ್ಲಿಸಲಾಗಿದೆ ಎಂದರು.

**ಸರ್ಕಾರದ ನಡೆ ಆಘಾತಕಾರಿ, ಕಾಂಗ್ರೆಸ್ ಜನವಿರೋಧಿ ಎನ್ನುವುದು ಸಾಬೀತು: ಛಲವಾದಿ ನಾರಾಯಣಸ್ವಾಮಿ**

ಸುದ್ದಿಗಾರರೊಂದಿಗೆ ಮಾತನಾಡಿದ ಛಲವಾದಿ ನಾರಾಯಣಸ್ವಾಮಿ ಅವರು, ಘಟನೆಯ ವಿಚಾರಣೆ ಕೋರ್ಟ್‌ನಲ್ಲಿ ಬಾಕಿ ಇರುವಾಗಲೇ ಸರ್ಕಾರ ದಾಳಿಕೋರರ ಮೇಲಿನ ಪ್ರಕರಣವನ್ನು ವಾಪಸ್ ಪಡೆದಿದೆ. ಇದನ್ನು ವಾಪಸ್ ಪಡೆಯಬಾರದು ಎಂದು ಆಗ್ರಹಿಸಿ ರಾಜ್ಯಪಾಲರಿಗೆ ಮನವಿ ಸಲ್ಲಿಸಿದ್ದೇವೆ ಎಂದು ಹೇಳಿದರು. ರಾಘವ ಚೈತನ್ಯ ಮಂದಿರದಲ್ಲಿನ ಶಿವಲಿಂಗಕ್ಕೆ ಆರು ನೂರು ವರ್ಷಗಳ ಇತಿಹಾಸವಿದೆ. ಇಲ್ಲಿ ಪದೇ ಪದೇ ಗಲಭೆಗಳು ಆಗಿವೆ. ಜನರು ಪ್ರಾಣ ಕಳೆದುಕೊಂಡಿದ್ದಾರೆ ಎಂದು ವಿವರಿಸಿದರು.

ಶಿವಲಿಂಗದ ಮೇಲೆ ಮಲಮೂತ್ರ ಮಾಡಿದ್ದನ್ನು



ಸ್ವಚ್ಛಗೊಳಿಸುತ್ತಿದ್ದವರ ಮೇಲೆ, ಪೂಜೆ ಮಾಡಲು ಸೇರಿದ್ದ ಹಿಂದೂಗಳ ಮೇಲೆ ಸಾವಿರಾರು ಸಂಖ್ಯೆಯಲ್ಲಿ ಜನರು ತಲವಾರು ಮಚ್ಚಿನಿಂದ ದಾಳಿ ಮಾಡಿದ್ದಾರೆ.

ಸ್ಥಳಕ್ಕೆ ಬಂದ ಪೊಲೀಸರಿಗೂ ರಕ್ತ ಬರುವಂತೆ ಹಲ್ಲೆ ಮಾಡಿದ್ದಾರೆ. ಪೊಲೀಸ್ ವಾಹನಗಳನ್ನು ಜಖಂ ಮಾಡಿದ್ದಾರೆ. ಜಿಲ್ಲಾಧಿಕಾರಿ ಮೇಲೂ ದಾಳಿ ನಡೆದಿದೆ. ಇದೊಂದು ದೊಡ್ಡ ಘಟನೆ. ಆದರೆ ರಾಜ್ಯ ಸರ್ಕಾರ ಇಷ್ಟೆಲ್ಲಾ ಆದರೂ ಏನೂ ಆಗಿಲ್ಲವೆಂಬಂತೆ ಪ್ರಕರಣವನ್ನು ಹಿಂದಕ್ಕೆ ಪಡೆದಿದೆ ಎಂದು ದೂರಿದರು. ದಾಳಿಕೋರರಿಗೆ ಶಿಕ್ಷೆ ಕೊಡಿಸುವ ಬದಲು ಸರ್ಕಾರ ಪ್ರೋತ್ಸಾಹ ನೀಡಿದೆ. ಇದು ಜನರಿಗೆ ಮತ್ತು ಹಿಂದೂತ್ವಕ್ಕೆ ಮಾಡಿದ ಅವಮಾನ. ಹಿಂದೂ, ಮುಸ್ಲಿಂ ಎನ್ನುವುದಕ್ಕಿಂತ ಜನರು ನೆಮ್ಮದಿಯಿಂದ ಬದುಕಬೇಕು. ಎಲ್ಲರಿಗೂ ನ್ಯಾಯಕೊಡುವ ಬದಲು ವಿಧಾನಸಭೆ ಸ್ಪೀಕರ್ ಯು.ಟಿ ಖಾದರ್ ಮೂಲಕ ಪತ್ರ ಕೊಡಿಸಿ ಪ್ರಕರಣ ವಾಪಸ್ ಪಡೆದಿದ್ದಾರೆ.

ಇದು ಖಂಡನೀಯ ಕ್ರಮ ಎಂದರು.

ವಿಧಾನ ಪರಿಷತ್ ವಿರೋಧ ಪಕ್ಷದ ಉಪನಾಯಕ ಸುನಿಲ್ ವಲ್ಯಾಪುರೆ, ವಿಧಾನ ಪರಿಷತ್ ಸದಸ್ಯರಾದ ಶಶಿಲ್ ಜಿ. ನಮೋಶಿ ಮತ್ತು ಬಿ.ಜಿ. ಪಾಟೀಲ್, ಶಾಸಕ ಅವಿನಾಶ್ ಜಾಧವ್, ಮಾಜಿ ಸಂಸದ ಡಾ. ಉಮೇಶ್ ಜಾಧವ್, ವಿಧಾನ ಪರಿಷತ್ ಮಾಜಿ ಸದಸ್ಯ ಅಮರನಾಥ್ ಪಾಟೀಲ್, ಕಲ್ಬುರ್ಗಿ ಗ್ರಾಮಾಂತರ ಜಿಲ್ಲಾಧ್ಯಕ್ಷ ಅಶೋಕ್ ಬಗಲಿ, ಮುಖಂಡರಾದ ಶರಣಪ್ಪ ತಳವಾರ, ಶಿವರಾಜ ಪಾಟೀಲ್ ರದ್ದೇವಾಡಗಿ, ಸಂಜಯ್ ಮಿಸ್ಕಿನ್, ನಿತಿನ್ ಗುತ್ತೇದಾರ್, ಹರ್ಷಾನಂದ ಗುತ್ತೇದಾರ್, ಲಿಂಗರಾಜ ಬಿರಾದಾರ, ಆನಂದ ಪಾಟೀಲ್, ಬಸವರಾಜ ಬೆಣ್ಣೂರ ಸೇರಿದಂತೆ ಪಕ್ಷದ ಮುಖಂಡರು, ಪ್ರಮುಖರು ಇದ್ದರು.

**ಓಲೈಕೆ ರಾಜಕಾರಣಕ್ಕೆ ಖಂಡನೆ**

ದಲಿತರು ತಮ್ಮ ಹಕ್ಕುಗಳಿಗಾಗಿ ಹೋರಾಟ ಮಾಡಿದರೆ ಅವರ ಮೇಲೆ ಕ್ರಿಮಿನಲ್ ಕೇಸ್ ಹಾಕುತ್ತಾರೆ. ಕನ್ನಡ ಪರ ಸಂಘಟನೆಗಳ ಮುಖಂಡರು ಕನ್ನಡದ ಪರ ಹೋರಾಟ ಮಾಡಿದರೆ ಕ್ರಿಮಿನಲ್ ಪ್ರಕರಣ ದಾಖಲಿಸುತ್ತಾರೆ. ಕರ್ನಾಟಕ ರಕ್ಷಣಾ ವೇದಿಕೆಯ ನಾರಾಯಣಗೌಡರನ್ನು ಜೈಲಿಗೆ ಕಳಿಸಿದ್ದರು. ಆದರೆ ಬಾಂಬ್ ಹಾಕಿದವರ ಮೇಲೆ, ತಲವಾರುಗಳಿಂದ ಹಲ್ಲೆ ಮಾಡಿದವರ ಮೇಲೆ ದೂರು ದಾಖಲಿಸಿ ಶಿಕ್ಷೆ ಕೊಡಿಸುವುದು ಬಿಟ್ಟು ಪ್ರಕರಣ ವಾಪಸ್ ಪಡೆಯುತ್ತಾರೆ. ರಾಜ್ಯ ಸರ್ಕಾರದ ಇಂತಹ ನೀಚ ಓಲೈಕೆ ರಾಜಕಾರಣವನ್ನು ಖಂಡಿಸಲಾಗುವುದು. ರಾಜ್ಯ ಸಚಿವ ಸಂಪುಟ ಕೈಗೊಂಡ ತೀರ್ಮಾನವನ್ನು ಪಾಪಸ್ ಪಡೆಯಬೇಕು ಎಂದು ರಾಜ್ಯಪಾಲರಲ್ಲಿ ಮನವಿ ಮಾಡಿದ್ದೇವೆ ಎಂದು ಛಲವಾದಿ ನಾರಾಯಣಸ್ವಾಮಿ ವಿವರಿಸಿದರು.



ದಕ್ಷಿಣ ಆಫ್ರಿಕಾದ ಉಪಾಧ್ಯಕ್ಷ ಶಿಪೋಕೋಸಾ ಪೌಲ್ಸ್ ಮಶಾಟೈಲ್ ಅವರು ಮಂಗಳವಾರ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿದ್ದರು.

# ರಾಜೀನಾಮೆ ನೀಡಿದ ಬೆನ್ನಲ್ಲೇ ಅಮಿತ್ ಶಾ ಭೇಟಿಯಾದ ಅಣ್ಣಾಮಲೈ

**ನವದೆಹಲಿ, ಜೂ. 2:** ತಮಿಳುನಾಡು ರಾಜಕೀಯದಲ್ಲಿ ಭಾರಿ ಬಿರುಗಾಳಿ ಎಬ್ಬಿಸಿರುವ ಬಿಜೆಪಿ ಮಾಜಿ ರಾಜ್ಯಾಧ್ಯಕ್ಷ ಕೆ. ಅಣ್ಣಾಮಲೈ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನವೀನ್ ಅವರಿಗೆ ತಮ್ಮ ರಾಜೀನಾಮೆ ಪತ್ರ ಸಲ್ಲಿಸಿದ ಬೆನ್ನಲ್ಲೇ, ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ. ಅಣ್ಣಾಮಲೈ ಹೊಸ ರಾಜಕೀಯ ಪಕ್ಷ ಕಟ್ಟಲಿದ್ದಾರೆ ಎಂಬ ವದಂತಿಗಳು ದಟ್ಟವಾಗಿರುವ ಹೊತ್ತಿನಲ್ಲೇ ನಡೆದಿರುವ ಈ ಹೈ-ಪ್ರೊಫೈಲ್ ಭೇಟಿ, ಅವರ ಮುಂದಿನ ರಾಜಕೀಯ ಭವಿಷ್ಯದ ಕುರಿತಾದ ಚರ್ಚೆಗಳನ್ನು ರಾಷ್ಟ್ರ ಮಟ್ಟದಲ್ಲಿ ಮತ್ತಷ್ಟು ತೀವ್ರಗೊಳಿಸಿದೆ. ಕಳೆದ ಕೆಲವು ದಿನಗಳಿಂದ ಹರಿದಾಡುತ್ತಿದ್ದ ವದಂತಿಗಳಿಗೆ ಪುಷ್ಟಿ ನೀಡುವಂತೆ ಅಣ್ಣಾಮಲೈ ಬಿಜೆಪಿಗೆ ಗುಡ್‌ಬೈ ಹೇಳಿದ್ದು, ಶೀಘ್ರದಲ್ಲೇ ನೂತನವಾಗಿ ರಾಜಕೀಯ ಪಕ್ಷವನ್ನು ಸ್ಥಾಪಿಸಲಿದ್ದಾರೆ ಎಂಬ ವರದಿಗಳು ಕೇಳಿಬರುತ್ತಿವೆ. ಆದರೆ, ಹೊಸ ಪಕ್ಷದ ಘೋಷಣೆಯ ಕುರಿತು ಈವರೆಗೆ ಯಾವುದೇ ಅಧಿಕೃತ ಪ್ರಕಟಣೆ ಹೊರಬಿದ್ದಿಲ್ಲ.



ತಾವು ಹೊಸ ರಾಜಕೀಯ ಪಕ್ಷವನ್ನು ಅಸ್ತಿತ್ವಕ್ಕೆ ತರಲಿದ್ದಾರೆಯೇ ಎಂಬ ಮಾಧ್ಯಮಗಳ ತೀವ್ರ ಪ್ರಶ್ನೆಗಳಿಗೆ ಸೋಮವಾರವಷ್ಟೇ ಪ್ರತಿಕ್ರಿಯಿಸಿದ್ದ ಅಣ್ಣಾಮಲೈ, ದಯವಿಟ್ಟು ಇನ್ನು ಎರಡು ದಿನ ಕಾಯಿರಿ. ನಾವು ಒಟ್ಟಿಗೆ ಕುಳಿತು ಈ ಬಗ್ಗೆ ಸುದೀರ್ಘವಾಗಿ ಮಾತನಾಡೋಣ ಎಂದು ಹೇಳುವ ಮೂಲಕ ತಮ್ಮ ಮುಂದಿನ ನಿಲುವನ್ನು ಸಸ್ಪೆನ್ಸ್ ಆಗಿ ಇಟ್ಟಿದ್ದರು. ತಾವು ದೆಹಲಿಗೆ ತೆರಳಿ ಪಕ್ಷದ ಅಧ್ಯಕ್ಷರನ್ನು ಭೇಟಿಯಾಗಿ ರಾಜೀನಾಮೆ ನೀಡಲಿದ್ದಾರೆ ಎಂಬ ಸುದ್ದಿಗಳ ನಡುವೆಯೇ ಈ ಹೇಳಿಕೆ ನೀಡಿದ್ದರು. ಇತ್ತೀಚೆಗೆ 9ನೇ ತರಗತಿ ವಿದ್ಯಾರ್ಥಿಗಳಿಗೆ ತ್ರಿಭಾಷಾ ನೀತಿಯನ್ನು ಕಡ್ಡಾಯವಾಗಿ ಜಾರಿಗೊಳಿಸಬೇಕು ಎಂಬ ಸಿಬಿಎಸ್‌ಇ ಆದೇಶವನ್ನು ಅಣ್ಣಾಮಲೈ ಅವರು ಬಹಿರಂಗವಾಗಿ ವಿರೋಧಿಸಿದ್ದರು. ಅಲ್ಲದೆ ಈ ಅಧಿಸೂಚನೆಯನ್ನು ತಕ್ಷಣವೇ ಹಿಂಪಡೆಯಬೇಕು ಎಂದು ಒತ್ತಾಯಿಸಿದ್ದರು. ಕೇಂದ್ರ ಸರ್ಕಾರದ ನೀತಿಯನ್ನು ನೇರವಾಗಿ ಪ್ರಶ್ನಿಸಿದ್ದನ್ನು ಕಂಡ ರಾಜಕೀಯ ವಿಶ್ಲೇಷಕರು, ಅಣ್ಣಾಮಲೈ ಬಿಜೆಪಿಯಿಂದ ಹೊರಬಂದು ಸ್ವಂತ ಪಕ್ಷ ಕಟ್ಟಲು ಸಂಪೂರ್ಣ ಸಿದ್ಧತೆ ಮಾಡಿಕೊಂಡಿದ್ದಾರೆ ಎಂದು ಅಭಿಪ್ರಾಯಪಟ್ಟಿದ್ದರು.

ಕಳೆದ 2021ರ ವಿಧಾನಸಭಾ ಚುನಾವಣೆಯ ಸಂದರ್ಭದಲ್ಲಿ ಟಿಟಿವಿ ದಿನಕರನ್ ಮತ್ತು ಮಾಜಿ ಮುಖ್ಯಮಂತ್ರಿ ಓ. ಪನ್ನೀರಸೆಲ್ವಂರನ್ನು ಎನ್‌ಡಿಎ ಮೈತ್ರಿಕೂಟಕ್ಕೆ ಕರೆತರುವಲ್ಲಿ ಅಣ್ಣಾಮಲೈ ಪ್ರಮುಖ ಪಾತ್ರ ವಹಿಸಿದ್ದರು.

ಆದರೆ, ಇತ್ತೀಚಿನ ವಿಧಾನಸಭಾ ಚುನಾವಣೆಯ ಮುನ್ನ ಬಿಜೆಪಿ ಹೈಕಮಾಂಡ್ ಅಣ್ಣಾಮಲೈ ಸ್ಥಾನಕ್ಕೆ ನಯಿನಾರ್ ನಾಗೇಂದ್ರನ್‌ರನ್ನು ತಮಿಳುನಾಡು ಬಿಜೆಪಿ ಸಾರಥಿಯನ್ನಾಗಿ ನೇಮಿಸಿತ್ತು. ಅಲ್ಲದೆ, ತಮಿಳುನಾಡಿನಲ್ಲಿ ಎಐಎಡಿಎಂಕೆ ಜೊತೆ ಮೈತ್ರಿಯನ್ನು ಪುನರಾರಂಭಿಸಿತ್ತು. ಈ ಬೆಳವಣಿಗೆಗಳ ನಂತರ ಅಣ್ಣಾಮಲೈ ರಾಜಕೀಯ ಚಟುವಟಿಕೆಗಳಿಂದ ಸಂಪೂರ್ಣ ದೂರ ಉಳಿದಿದ್ದರು. ಇದೀಗ ಕಮಲ ಪಾಳೆಯದಿಂದ ಒಂದು ಹೆಜ್ಜೆ ಹೊರಗಿಟ್ಟಿದ್ದಾರೆ.

# ಆರ್‌ಬಿಐನಿಂದ 1.14 ಲಕ್ಷ ಕೋಟಿ ರೂ. ಮೌಲ್ಯದ ಚಿನ್ನ ಮಾರಾಟ?

**ನವದೆಹಲಿ, ಜೂ. 2:** ಮಧ್ಯಪ್ರಾಚ್ಯದಲ್ಲಿ ತೀವ್ರಗೊಂಡಿರುವ ಅಮೆರಿಕ ಮತ್ತು ಇರಾನ್ ನಡುವಿನ ಯುದ್ಧದ ಆರ್ಥಿಕ ದುಷ್ಪರಿಣಾಮಗಳಿಂದ ದೇಶದ ವಿದೇಶಿ ವಿನಿಮಯ ಮೀಸಲನ್ನು ರಕ್ಷಿಸುವ ನಿಟ್ಟಿನಲ್ಲಿ, ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಬೃಹತ್ ಪ್ರಮಾಣದ ಚಿನ್ನವನ್ನು ಮಾರಾಟ ಮಾಡಿರುವ ಸಾಧ್ಯತೆಯಿದೆ. ಟೈಮ್ಸ್ ಆಫ್ ಇಂಡಿಯಾ ಪ್ರಕಟಿಸಿರುವ ಹಾಗೂ ಬ್ಲೂಮ್‌ಬರ್ಗ್ ಎಕನಾಮಿಕ್ಸ್‌ನ ವಿಶ್ಲೇಷಣಾ ವರದಿಯ ಪ್ರಕಾರ, ಬಾಹ್ಯ ಆರ್ಥಿಕ ಆಘಾತಗಳನ್ನು ತಡೆಯುವ ಮುನ್ನೆಚ್ಚರಿಕಾ ಕ್ರಮವಾಗಿ ಕೇಂದ್ರ ಬ್ಯಾಂಕ್ ಅಂದಾಜು 12 ಶತಕೋಟಿ ಡಾಲರ್ ಮೌಲ್ಯದ(1.14 ಲಕ್ಷ ಕೋಟಿ ರೂ) ಚಿನ್ನದ ನಿಧಿಯನ್ನು ಮಾರುಕಟ್ಟೆಯಲ್ಲಿ ಮಾರಾಟ ಮಾಡಿದೆ ಎಂದು ಅಂದಾಜಿಸಲಾಗಿದೆ.

ಇಷ್ಟು ಮೊತ್ತದ ಚಿನ್ನದ ಹಣವು ಉತ್ತರಾಖಂಡ, ಜಮ್ಮು ಕಾಶ್ಮೀರ, ದೆಹಲಿ, ಹಿಮಾಚಲ ಪ್ರದೇಶ ರಾಜ್ಯಗಳ ಒಂದು ವರ್ಷದ ವಾರ್ಷಿಕ ಬಜೆಟ್‌ಗೆ ಸಮನಾಗುತ್ತದೆ.

ಬ್ಲೂಮ್‌ಬರ್ಗ್ ಎಕನಾಮಿಕ್ಸ್‌ನ ಹಿರಿಯ ಭಾರತೀಯ ಅರ್ಥಶಾಸ್ತ್ರಜ್ಞ ಅಭಿಷೇಕ್ ಗುಪ್ತಾ ಅವರ ಮೌಲ್ಯಮಾಪನದ ಪ್ರಕಾರ, ಸಾರ್ವಜನಿಕವಾಗಿ ಲಭ್ಯವಿರುವ ದತ್ತಾಂಶಗಳನ್ನು ಆಧರಿಸಿ ನೋಡಿದಾಗ ಮೇ 22ಕ್ಕೆ ಅಂತ್ಯಗೊಂಡ ಎರಡು ವಾರಗಳ ಅವಧಿಯಲ್ಲಿ ಈ ಮಾರಾಟ ಪ್ರಕ್ರಿಯೆ ನಡೆದಿದೆ. ಇದೇ ಅವಧಿಯಲ್ಲಿ ಆರ್.ಬಿ.ಐ ತನ್ನ ವಿದೇಶಿ ಕರೆನ್ಸಿ ಸ್ವತ್ತುಗಳಿಗೆ ಅಂದಾಜು 7.5 ಶತಕೋಟಿ ಡಾಲರ್(71,250 ಕೋಟಿ ರೂಪಾಯಿ) ಮೊತ್ತವನ್ನು ಸೇರ್ಪಡೆ ಮಾಡಿದೆ. ದೇಶದಲ್ಲಿ ಬೆಲೆಬಾಳುವ ಲೋಹಗಳ ಮೇಲಿನ ಆಮದು ಸುಂಕವನ್ನು ಹೆಚ್ಚಿಸಿದ್ದರೂ ಸಹ, ಆರ್.ಬಿ.ಐ ಬಳಿ ಇರುವ ಚಿನ್ನದ ಮೌಲ್ಯದಲ್ಲಿ ಏರಿಕೆಯಾಗುವ ಬದಲು ಇಳಿಕೆ ಕಂಡುಬಂದಿರುವುದು, ಕೇಂದ್ರ ಬ್ಯಾಂಕ್ ಚಿನ್ನ ಮಾರಾಟ ಮಾಡಿರುವ ಸಾಧ್ಯತೆಯನ್ನು ಬಲವಾಗಿ ದೃಢಪಡಿಸುವಂತಿದೆ. ವಿಶ್ವದ ಮೂರನೇ ಅತಿದೊಡ್ಡ ಕಚ್ಚಾ ತೈಲ ಆಮದುದಾರ ದೇಶವಾಗಿರುವ ಭಾರತಕ್ಕೆ, ಇರಾನ್ ಸಂಘರ್ಷ ಹಾಗೂ ಹಾರ್ಮುಜ್ ಜಲಸಂಧಿಯ ಕಾರ್ಯಾಚರಣೆ ವ್ಯತ್ಯಯವು ಭಾರೀ ಹೊಡೆತ ನೀಡಿದೆ. ಇದರಿಂದಾಗಿ ಇಂಧನ ವೆಚ್ಚ ಗಣನೀಯವಾಗಿ ಹೆಚ್ಚಾಗಿದ್ದು, ದೇಶೀಯ ಕರೆನ್ಸಿಯ ಮೇಲೆ ತೀವ್ರ ಒತ್ತಡ ಬಿದ್ದಿದೆ. ಮೇ 20ರಂದು ಸಾರ್ವಕಾಲಿಕ ಕುಸಿತ ಕಂಡಿದ್ದ ರೂಪಾಯಿ, ವಹಿವಾಟಿನಲ್ಲಿ ಅಮೆರಿಕನ್ ಡಾಲರ್ ಎದುರು ಶೇಕಡಾ 0.2ರಷ್ಟು ಇಳಿಕೆಯಾಗಿ 95.17ಕ್ಕೆ ತಲುಪಿತ್ತು. ಈ ಬಿಕ್ಕಟ್ಟಿನಿಂದ ಹೊರಬರಲು ಇಂಧನ ಬೆಲೆ ಏರಿಕೆ ಹಾಗೂ ಆಮದು ಸುಂಕ ಹೆಚ್ಚಳದಂತಹ ಕ್ರಮಗಳ ಜೊತೆಗೆ, ಆರ್.ಬಿ.ಐ ಡಾಲರ್ ಸಂಗ್ರಹವನ್ನು ಬಲಪಡಿಸಿಕೊಳ್ಳುವ ತಂತ್ರಗಾರಿಕೆ ಅನುಸರಿಸುತ್ತಿದೆ.



ಅಧಿಕೃತ ಅಂಕಿ-ಅಂಶಗಳ ಪ್ರಕಾರ, ಮಾರ್ಚ್ ಅಂತ್ಯದ ವೇಳೆಗೆ ಆರ್.ಬಿ.ಐ ಒಟ್ಟು 880.52 ಮೆಟ್ರಿಕ್ ಟನ್ ಚಿನ್ನವನ್ನು ಹೊಂದಿತ್ತು. ಈ ಪೈಕಿ ಶೇ 77ರಷ್ಟು ಚಿನ್ನವನ್ನು ದ ೕ ಶ ದ ೊ ಳ ಗ ೕ ಸುರಕ್ಷಿತವಾಗಿಡಲಾಗಿದೆ (ಆರು ತಿಂಗಳ ಹಿಂದೆ ಇದು ಶೇ 66ರಷ್ಟಿತ್ತು). ಬ್ಯಾಂಕ್ ಆಫ್ ಇಂಗ್ಲೆಂಡ್ ಹಾಗೂ ಬ್ಯಾಂಕ್ ಫಾರ್ ಇಂಟರ್ನ್ಯಾಷನಲ್ ಸೆಟಲ್ಮೆಂಟ್ಸ್ (ಃಖಿಖ) ಬಳಿಯಿದ್ದ ಬಹುಪಾಲು ಚಿನ್ನವನ್ನು ಆರ್.ಬಿ.ಐ ಇತ್ತೀಚಿನ ವರ್ಷಗಳಲ್ಲಿ ಭಾರತಕ್ಕೆ ವಾಪಸ್ ತಂದಿದೆ. ಉಕ್ರೇನ್ ಯುದ್ಧದ ಬಳಿಕ ಪಾಶ್ಚಿಮಾತ್ಯ ರಾಷ್ಟ್ರಗಳು ರಷ್ಯಾದ ಮೀಸಲು ನಿಧಿಯನ್ನು ಮುಟ್ಟುಗೋಲು ಹಾಕಿಕೊಂಡ ಹಿನ್ನೆಲೆಯಲ್ಲಿ, ಸುರಕ್ಷತೆಯ ದೃಷ್ಟಿಯಿಂದ ಈ ಮಹತ್ವದ ತೀರ್ಮಾನ ಕೈಗೊಳ್ಳಲಾಗಿತ್ತು.

ರೂಪಾಯಿ ಮೌಲ್ಯದ ಕುಸಿತವನ್ನು ತಡೆಯಲು ಆರ್.ಬಿ.ಐ ಗವರ್ನರ್ ಸಂಜಯ್ ಮಲ್ಹೋತ್ರಾ ಅವರು ಹಲವು ಕಠಿಣ ಆರ್ಥಿಕ ಕ್ರಮಗಳನ್ನು ಕೈಗೊಳ್ಳಲು ಪರಿಶೀಲನೆ ನಡೆಸುತ್ತಿದ್ದಾರೆ. ಬಡ್ಡಿ ದರಗಳನ್ನು ಹೆಚ್ಚಿಸುವುದು ಮತ್ತು ವಿದೇಶಿ ಹೂಡಿಕೆದಾರರಿಂದ ಹೆಚ್ಚಿನ ಡಾಲರ್ ಹರಿವನ್ನು ಆಕರ್ಷಿಸುವ ನಿಟ್ಟಿನಲ್ಲಿ ಬ್ಯಾಂಕ್ ಹೆಜ್ಜೆ ಇಡುತ್ತಿದೆ ಎಂದು ವರದಿಗಳು ತಿಳಿಸಿವೆ. ಮಾರುಕಟ್ಟೆ ಪರಿಸ್ಥಿತಿಗಳು ಅನುಕೂಲಕರವಾದಾಗ (ಡಾಲರ್ ಮೌಲ್ಯ ಕಡಿಮೆಯಾದಾಗ ಅಥವಾ ಕಚ್ಚಾ ತೈಲ ಬೆಲೆ ಇಳಿದಾಗ) ಕೇಂದ್ರ ಬ್ಯಾಂಕ್ ತನ್ನ ವಿದೇಶಿ ವಿನಿಮಯ ಮೀಸಲನ್ನು ಬಲಪಡಿಸುವ ಕಾ ಂ ರ್ಯ ಾ ಚ ರ ಣ ೆ ಂ ರ ು ನ್ನು ಮುಂದುವರಿಸುವ ನಿರೀಕ್ಷೆಯಿದೆ.

ತೀವ್ರ ಆರ್ಥಿಕ ಬಿಕ್ಕಟ್ಟಿನ ಸಂದರ್ಭದಲ್ಲಿ ರೂಪಾಯಿ ರಕ್ಷಣೆಗಾಗಿ ಆರ್.ಬಿ.ಐ ಚಿನ್ನವನ್ನು ಬಳಸಿಕೊಂಡಿರುವುದು ಇದೇ ಮೊದಲಲ್ಲ. 1991ರಲ್ಲಿ ಭಾರತವು ತೀವ್ರ ವಿದೇಶಿ ವಿನಿಮಯದ ಕೊರತೆಯನ್ನು ಎದುರಿಸಿದಾಗ, ಕೇವಲ ಕೆಲವೇ ವಾರಗಳ ಆಮದಿಗೆ ಮಾತ್ರ ಡಾಲರ್ ಮೀಸಲು ಉಳಿದಿತ್ತು. ಆ ಸಂದರ್ಭದಲ್ಲಿ ದೇಶವನ್ನು ಆರ್ಥಿಕ ದಿವಾಳಿತನದಿಂದ ಪಾರು ಮಾಡಲು, ಆರ್.ಬಿ.ಐ ತನ್ನ ಬಳಿಯಿದ್ದ 67 ಟನ್ ಚಿನ್ನವನ್ನು ಬ್ಯಾಂಕ್ ಆಫ್ ಇಂಗ್ಲೆಂಡ್ ಮತ್ತು ಜಪಾನ್ ಬ್ಯಾಂಕ್‌ಗಳಿಗೆ ಕಳುಹಿಸಿ (ಮಾರಾಟ ಹಾಗೂ ಮರುಖರೀದಿ ಒಪ್ಪಂದದೊಂದಿಗೆ) ಸಾಲ ಪಡೆದಿತ್ತು. ಆದರೆ, ಅಂದಿನ ಆರ್ಥಿಕ ದುರ್ಬಲತೆಗೆ ಹೋಲಿಸಿದರೆ, ಇದು ಹಲವು ಪಟ್ಟು ಚಿನ್ನ ಮಾರಾಟವಾಗಿರುವ ಸಾಧ್ಯತೆಯಿದೆ.

# ಅಮೆರಿಕ-ಇರಾನ್ ಮಾತುಕತೆ ನಡುವೆ ಲೆಬನಾನ್ ಮೇಲೆ ಇಸ್ರೇಲ್ ದಾಳಿ: ಪ್ರಧಾನಿ ಮೋದಿ ಮೌನ ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ವಾಗ್ದಾಳಿ

**ನವದೆಹಲಿ, ಜೂನ್ 2:** ಲೆಬನಾನ್‌ನಲ್ಲಿ ಇಸ್ರೇಲ್ ನಡೆಸುತ್ತಿರುವ ಮಿಲಿಟರಿ ಕಾರ್ಯಾಚರಣೆಗಳ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಮೌನ ವಹಿಸಿದ್ದಾರೆ ಎಂದು ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ಮಂಗಳವಾರ ಟೀಕಿಸಿದ್ದಾರೆ, ಪಶ್ಚಿಮ ಏಷ್ಯಾದಲ್ಲಿ ಉದ್ವಿಗ್ನತೆಯನ್ನು ಕಡಿಮೆ ಮಾಡಲು ಅಮೆರಿಕ ಮತ್ತು ಇರಾನ್ ನಡುವಿನ ನಿರ್ಣಾಯಕ ಮಾತುಕತೆಗಳು ನಡೆಯುತ್ತಿರುವ ಸಮಯದಲ್ಲಿ ನವದೆಹಲಿಯ ನಿಲುವು ಭಾರತದ ಹಿತಾಸಕ್ತಿಗಳನ್ನು ಹಾಳುಮಾಡಬಹುದು ಎಂದು ಆರೋಪಿಸಿದ್ದಾರೆ.



ವಾಷಿಂಗ್ಟನ್ ಮತ್ತು ಟೆಹ್ರಾನ್ ನಡುವಿನ ನಿರಂತರ ಮಾತುಕತೆಗಳು ಭಾರತಕ್ಕೆ, ವಿಶೇಷವಾಗಿ ಇಂಧನ ಭದ್ರತೆ ಮತ್ತು ಜಾಗತಿಕ ವ್ಯಾಪಾರ ಮಾರ್ಗಗಳಿಗೆ ಸಂಬಂಧಿಸಿದಂತೆ ಗಮನಾರ್ಹ ಪರಿಣಾಮಗಳನ್ನು ಬೀರುತ್ತವೆ ಎಂದು ರಮೇಶ್ ಹೇಳಿದರು. "ಪಶ್ಚಿಮ ಏಷ್ಯಾದಲ್ಲಿ ಯುದ್ಧವನ್ನು ನಿಲ್ಲಿಸಲು ಅಮೆರಿಕ ಮತ್ತು ಇರಾನ್ ನಡುವೆ ಮಾತುಕತೆಗಳು ಮುಂದುವರೆದಿವೆ. ಅಂತಹ ಒಪ್ಪಂದದ ತಕ್ಷಣದ ಪರಿಣಾಮವೆಂದರೆ ಹಾರ್ಮುಜ್ ಜಲಸಂಧಿಯನ್ನು ಪುನಃ ತೆರೆಯುವುದು ಮತ್ತು ತೈಲ ಬೆಲೆಗಳಲ್ಲಿ ಇಳಿಕೆಯ ಒತ್ತಡ - ಇವೆರಡರಲ್ಲೂ ಭಾರತವು ಅಗಾಧ ಪಾಲನ್ನು ಹೊಂದಿದೆ" ಎಂದು ಕಾಂಗ್ರೆಸ್ ನಾಯಕಿ ಹೇಳಿದರು. ಉಲ್ಬಣಗೊಳ್ಳುತ್ತಿರುವ ಪರಿಸ್ಥಿತಿಯ ಹೊರತಾಗಿಯೂ ಪ್ರಧಾನಿ ಮೋದಿ ಮೌನವಾಗಿದ್ದಾರೆ ಎಂದು ಕಾಂಗ್ರೆಸ್ ನಾಯಕಿ ಆರೋಪಿಸಿದರು. "ಲೆಬನಾನ್‌ನಲ್ಲಿ ಇಸ್ರೇಲ್ ನಡೆಸಿದ ಆಕ್ರಮಣವನ್ನು ಇತರ ಹಲವು ದೇಶಗಳು ಖಂಡಿಸುತ್ತಿವೆ. ಇಸ್ರೇಲ್ ಲೆಬನಾನ್ ಅನ್ನು ವಿನಾಶಕಾರಿಯಾಗಿ ಮತ್ತು ಅಮೆರಿಕ-ಇರಾನ್

ಒಪ್ಪಂದವನ್ನು ಹಾಳುಮಾಡುತ್ತಿರುವಾಗ ಸಂಪೂರ್ಣವಾಗಿ ಮೌನವಾಗಿರುವ ಏಕೈಕ ಸರ್ಕಾರಿ ಮುಖ್ಯಸ್ಥ ಪ್ರಧಾನಿ ನರೇಂದ್ರ ಮೋದಿ ಎಂಬುದು ಆಶ್ಚರ್ಯವೇನಿಲ್ಲ" ಎಂದು ಅವರು ಹೇಳಿದರು. ತೀಕ್ಷ್ಣವಾದ ರಾಜಕೀಯ ದಾಳಿಯಲ್ಲಿ, ರಮೇಶ್ ಪ್ರಧಾನಿಯವರ ಆದ್ಯತೆಗಳನ್ನು ಪ್ರಶ್ನಿಸಿದರು.

# ಓಎಸ್‌ಎಂ ವಿವಾದ: ಸಿಬಿಎಸ್‌ಸಿ ಅಧ್ಯಕ್ಷ, ಕಾರ್ಯದರ್ಶಿಗೆ ಕೇಂದ್ರದಿಂದ ವರ್ಗಾವಣೆ ಶಿಕ್ಷೆ

**ನವದೆಹಲಿ, ಜೂನ್ 2 :** 12 ನೇ ತರಗತಿಯ ಪರೀಕ್ಷಾ ಪ್ರಕ್ರಿಯೆಯ ಡಿಜಿಟಲ್ ಮೌಲ್ಯಮಾಪನ ವ್ಯವಸ್ಥೆಯಲ್ಲಿ ಅಕ್ರಮಗಳ ಆರೋಪದ ಹಿನ್ನೆಲೆಯಲ್ಲಿ, ಕೇಂದ್ರವು ಮಂಗಳವಾರ ಕೇಂದ್ರ ಮಾಧ್ಯಮಿಕ ಶಿಕ್ಷಣ ಮಂಡಳಿಯ ಅಧ್ಯಕ್ಷ ರಾಹುಲ್ ಸಿಂಗ್ ಮತ್ತು ಕಾರ್ಯದರ್ಶಿ ಹಿಮಾಂಶು ಗುಪ್ತಾ ಅವರನ್ನು ವರ್ಗಾವಣೆ ಮಾಡಿದೆ ಮತ್ತು ರಾಷ್ಟ್ರೀಯ ಮಂಡಳಿಯಿಂದ ಹೊಸದಾಗಿ ಪರಿಚಯಿಸಲಾದ ಆನ್‌ಸ್ಕ್ರೀನ್ ಮಾರ್ಕಿಂಗ್ ವ್ಯವಸ್ಥೆಯ "ಸಂಗ್ರಹಣೆ"ಯ ಬಗ್ಗೆ ತನಿಖೆ ನಡೆಸಲು ಏಕಸದಸ್ಯ ಸಮಿತಿಯನ್ನು ರಚಿಸಿದೆ. ಜೂನ್ 2 ರ ಅಧಿಕೃತ ಸುತ್ತೋಲೆಯಲ್ಲಿ, ಹೆಚ್ಚುವರಿ ಕ್ಯಾಬಿನೆಟ್ ಕಾರ್ಯದರ್ಶಿ ಸತೇಂದ್ರ ಸಿಂಗ್, ಸಾಮರ್ಥ್ಯ ನಿರ್ಮಾಣ ಆಯೋಗದ ಅಧ್ಯಕ್ಷೆ ಎಸ್. ರಾಧಾ ಚೌಹಾಣ್ ಅವರ ಅಧ್ಯಕ್ಷತೆಯಲ್ಲಿ ಏಕಸದಸ್ಯ ಸಮಿತಿಯನ್ನು ರಚಿಸಲಾಗಿದೆ ಎಂದು ಹೇಳಿದ್ದಾರೆ. "ಸಮಿತಿಯು ಒಂದು ತಿಂಗಳೊಳಗೆ ತನ್ನ ವರದಿಯನ್ನು ಸಿಬ್ಬಂದಿ ಮತ್ತು ತರಬೇತಿ ಇಲಾಖೆಗೆ ಸಲ್ಲಿಸುತ್ತದೆ" ಎಂದು ಅಧಿಕೃತ ಆದೇಶದಲ್ಲಿ ಸೇರಿಸಲಾಗಿದೆ. ಈ ತಿಂಗಳ ಆರಂಭದಲ್ಲಿ, ಸಾಮಾಜಿಕ ಮಾಧ್ಯಮ ಬಳಕೆದಾರರು ಫೆಬ್ರವರಿ 25, 2026 ರಂದು ಸಿಬಿಎಸ್‌ಸಿ ಓಎಸ್‌ಎಂ ಪೋರ್ಟಲ್ ಅನ್ನು ಉಲ್ಲಂಘಿಸಲಾಗಿದೆ ಎಂದು ಹೇಳಿಕೊಂಡಿದ್ದಾರೆ, ಇದು ತರುವಾಯ ಹಲವಾರು ಮಾಧ್ಯಮ ವರದಿಗಳ ಆಧಾರವಾಗಿದೆ. ಮೇ 26 ರಂದು ಬಿಡುಗಡೆ ಮಾಡಿದ ಹೇಳಿಕೆಯಲ್ಲಿ, ಉತ್ತರ ಪುಸ್ತಕಗಳ ಮೌಲ್ಯಮಾಪನಕ್ಕಾಗಿ ಬಳಸಲಾಗುವ ಆನ್ ಸ್ಕ್ರೀನ್ ಮಾರ್ಕಿಂಗ್ ಪೋರ್ಟಲ್‌ನಲ್ಲಿ ಯಾವುದೇ ಭದ್ರತಾ ಉಲ್ಲಂಘನೆ ಸಂಭವಿಸಿಲ್ಲ ಎಂದು ಸಾಮಾಜಿಕ ಮಾಧ್ಯಮದಲ್ಲಿ ಹರಡಿದ್ದ ಆರೋಪಗಳನ್ನು ಮಂಡಳಿಯು ಆರಂಭದಲ್ಲಿ ತಳ್ಳಿಹಾಕಿತು, ನಿಜವಾದ ಮೌಲ್ಯಮಾಪನ ಕಾರ್ಯಕ್ಕಾಗಿ ಬಳಸುವ ವ್ಯವಸ್ಥೆಯಲ್ಲಿ ಯಾವುದೇ ಭದ್ರತಾ ಉಲ್ಲಂಘನೆ ಸಂಭವಿಸಿಲ್ಲ ಎಂದು ಪ್ರತಿಪಾದಿಸಿತು.

ಏತನ್ಮಧ್ಯೆ, ಭಾನುವಾರ, ಮಂಡಳಿಯು ವ್ಯವಸ್ಥೆಯಲ್ಲಿ ಹೊಂದಾಣಿಕೆ ಮಾಡಿಕೊಳ್ಳಲಾಗಿದೆ ಎಂದು ಒಪ್ಪಿಕೊಂಡಿತು, ತನ್ನ ಸೇವಾ ಪೂರೈಕೆದಾರರ ಆನ್‌ಲೈನ್ ಮಾರ್ಕಿಂಗ್ ಪೋರ್ಟಲ್‌ನಲ್ಲಿ ಗುರುತಿಸಲಾದ ದೋಷಗಳನ್ನು ಅದು ಹೊಂದಿದೆ ಮತ್ತು ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲು ಸೈಬರ್ ಭದ್ರತಾ ತಜ್ಞರೊಂದಿಗೆ ಕೆಲಸ ಮಾಡುತ್ತಿದೆ ಎಂದು ಹೇಳಿದೆ.

# ಎಬೋಲಾ ರೋಗ ನಿರ್ವಹಣೆ: ಉಗಾಂಡಾಗೆ ಭಾರತದಿಂದ 43 ಟನ್ ಎರಡನೇ ಕಂತಿನ ವೈದ್ಯಕೀಯ ಸಾಮಗ್ರಿ ರವಾನೆ

**ನವದೆಹಲಿ, ಜೂನ್ 2 :** ಎಬೋಲಾ ಏಕಾಏಕಿ ನಿಭಾಯಿಸಲು ಉಗಾಂಡಾದ ಕಂಪಾಲಾಕ್ಕೆ ಸುಮಾರು 2.5 ಟನ್‌ಗಳ ತುರ್ತು ವೈದ್ಯಕೀಯ ಸಾಮಗ್ರಿಗಳ ಮೊದಲ ಕಂತನ್ನು ಕಳುಹಿಸಿದ ನಂತರ, ಭಾರತವು ರಕ್ಷಣಾತ್ಮಕ ಸಾಧನಗಳು, ರೋಗನಿರ್ಣಯ/ಮೇಲ್ವಿಚಾರಣಾ ಸಾಧನಗಳು ಮತ್ತು ಇತರ ಸರಬರಾಜುಗಳನ್ನು ಒಳಗೊಂಡ 43 ಟನ್‌ಗಳ ದೊಡ್ಡ ಎರಡನೇ ಕಂತನ್ನು ಆಫ್ರಿಕನ್ ರಾಷ್ಟ್ರಕ್ಕೆ ರವಾನಿಸಿದೆ. ಆಫ್ರಿಕನ್ ಯೂನಿಯನ್ ಆಯೋಗದಿಂದ ಸ್ವೀಕರಿಸಿದ ಮನವಿಗೆ ಪ್ರತಿಕ್ರಿಯೆಯಾಗಿ, ಭಾರತವು ತಮ್ಮ ಎಬೋಲಾ ಪ್ರತಿಕ್ರಿಯೆ ಪ್ರಯತ್ನಗಳನ್ನು ಬೆಂಬಲಿಸಲು ಆಫ್ರಿಕಾ ರೋಗ ನಿಯಂತ್ರಣ ಮತ್ತು ತಡೆಗಟ್ಟುವಿಕೆ ಕೇಂದ್ರಗಳಿಗೆ (ಆಫ್ರಿಕಾ ಸಿಡಿಸಿ) ತುರ್ತು ವೈದ್ಯಕೀಯ ಸಹಾಯವನ್ನು ವಿಸ್ತರಿಸಿದೆ.

ಆಫ್ರಿಕಾದ ಕೆಲವು ಭಾಗಗಳಲ್ಲಿ ಎಬೋಲಾ ಏಕಾಏಕಿ ನಿಯಂತ್ರಿಸಲು ಮತ್ತು ಸಾರ್ವಜನಿಕ ಆರೋಗ್ಯ ಸನ್ನದ್ಧತೆ ಮತ್ತು ಪ್ರಾದೇಶಿಕ ಪ್ರತಿಕ್ರಿಯೆ ಸಾಮರ್ಥ್ಯಗಳನ್ನು ಬಲಪಡಿಸಲು ಆಫ್ರಿಕಾ ಸಿಡಿಸಿಯ ಅಗತ್ಯಗಳನ್ನು ಪೂರೈಸಲು ಭಾರತದ ಬೆಂಬಲವನ್ನು ವಿನ್ಯಾಸಗೊಳಿಸಲಾಗಿದೆ. ತುರ್ತು ಪ್ರತಿಕ್ರಿಯೆಯಾಗಿ, ಸುಮಾರು 2.5 ಟನ್‌ಗಳ ತುರ್ತು ವೈದ್ಯಕೀಯ ಸಾಮಗ್ರಿಗಳ ಮೊದಲ ಕಂತನ್ನು ಮೇ 24, 2026 ರಂದು ಉಗಾಂಡಾದ ಕಂಪಾಲಾಕ್ಕೆ ರವಾನಿಸಲಾಯಿತು, ಇದರಲ್ಲಿ ರಕ್ಷಣಾತ್ಮಕ ಸಾಧನಗಳು, ವೈದ್ಯಕೀಯ ಮೇಲ್ವಿಚಾರಣಾ ಉಪಕರಣಗಳು, ಅಗತ್ಯ ಔಷಧಿಗಳು ಮತ್ತು ಪೂರಕಗಳು ಸೇರಿವೆ ಎಂದು ಹೇಳಿಕೆ ತಿಳಿಸಿದೆ. ಆಫ್ರಿಕಾ ಸಿಡಿಸಿಯಿಂದ ಅಗತ್ಯಗಳ ಹೆಚ್ಚು ವಿವರವಾದ ಪಟ್ಟಿಯನ್ನು ಪಡೆದ ನಂತರ, ವಿದೇಶಾಂಗ ಸಚಿವಾಲಯವು ಈಗ 43 ಟನ್‌ಗಳ ದೊಡ್ಡ ಎರಡನೇ ಕಂತನ್ನು ಸಜ್ಜುಗೊಳಿಸಿದೆ, ಇದರಲ್ಲಿ ರಕ್ಷಣಾತ್ಮಕ ಸಾಧನಗಳು, ರೋಗನಿರ್ಣಯ/ಮೇಲ್ವಿಚಾರಣಾ ಸಾಧನಗಳು, ಮಾದರಿ ಸಾರಿಗೆ ಕಿಟ್‌ಗಳು, ಸೋಂಕು ತಡೆಗಟ್ಟುವ ಸರಬರಾಜುಗಳು, ಔಷಧಿಗಳು ಮತ್ತು ಪೂರಕಗಳು ಸೇರಿವೆ. ಎರಡನೇ ಕಂತು ಜೂನ್ 2, 2026 ರಂದು ಕಂಪಾಲಾವನ್ನು ತಲುಪಲಿದ್ದು, ಆಫ್ರಿಕಾ ಸಿಡಿಸಿಗೆ ಹಸ್ತಾಂತರಿಸಲಾಗುವುದು. ಭಾರತದ ಬೆಂಬಲವು ಖಂಡದಲ್ಲಿನ ಸಾರ್ವಜನಿಕ ಆರೋಗ್ಯ ಪರಿಸ್ಥಿತಿಗಳಿಗೆ ಪ್ರತಿಕ್ರಿಯಿಸಲು ಬೆಂಬಲ ನೀಡುವುದು ಸೇರಿದಂತೆ ಆಫ್ರಿಕನ್ ದೇಶಗಳೊಂದಿಗೆ ಪಾಲುದಾರಿಕೆಗೆ ಅದರ ನಿರಂತರ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಅಡಿಸ್ ಅಬಾಬಾ ಮತ್ತು ಕಂಪಾಲಾದಲ್ಲಿರುವ ಭಾರತೀಯ ಮಿಷನ್‌ಗಳು ತಮ್ಮ ಎಬೋಲಾ ಪ್ರತಿಕ್ರಿಯೆ ಪ್ರಯತ್ನಗಳನ್ನು ಬೆಂಬಲಿಸಲು ಆಫ್ರಿಕನ್ ಯೂನಿಯನ್ ಕಮಿಷನ್ ಮತ್ತು ಆಫ್ರಿಕಾ ಸಿಡಿಸಿಯೊಂದಿಗೆ ನಿಕಟವಾಗಿ ತೊಡಗಿಸಿಕೊಂಡಿವೆ. ಉಗಾಂಡಾ ಪ್ರಸ್ತುತ ರಾಜಧಾನಿ ಕಂಪಾಲಾಗೆ ಹರಡಿರುವ ಎಬೋಲಾ ವೈರಸ್‌ನ ಅಪರೂಪದ ಬುಂಡಿಬುಗ್ಯೊ ತಳಿಯ ಹೊಸದಾಗಿ ಘೋಷಿಸಲಾದ ಏಕಾಏಕಿ ಪ್ರತಿಕ್ರಿಯಿಸುತ್ತಿದೆ. ಜೂನ್ 2 ರ ಹೊತ್ತಿಗೆ, ಉಗಾಂಡಾ ಒಂಬತ್ತು ದೃಢಪಡಿಸಿದ ಪ್ರಕರಣಗಳು ಮತ್ತು ಒಂದು ಸಾವನ್ನು ದಾಖಲಿಸಿದೆ. ಇವುಗಳಲ್ಲಿ ಎಂಟು ಪ್ರಕರಣಗಳು ಕಂಪಾಲಾದಲ್ಲಿ ಮತ್ತು ಒಂದು ನೆರೆಯ ವಾಕಿಸೊ ಜಿಲ್ಲೆಯಲ್ಲಿ ಕೇಂದ್ರೀಕೃತವಾಗಿವೆ.



# ಫಾಜಿಲ್ ನಗರಕ್ಕೆ ಪಾವಗಢ್ ಎಂದು ಮರುನಾಮಕರಣ

**ಲಖನೌ, ಜೂ. 2:** ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ಅವರು ರಾಜ್ಯದಲ್ಲಿ ಮತ್ತೊಂದು ಐತಿಹಾಸಿಕ ಮತ್ತು ಸಾಂಸ್ಕೃತಿಕ ನಗರದ ಹೆಸರು ಬದಲಾವಣೆಯನ್ನು ಅಧಿಕೃತವಾಗಿ ಪ್ರಕಟಿಸಿದ್ದಾರೆ. ಜಾಗತಿಕ ಪ್ರಸಿದ್ಧ ಬೌದ್ಧ ಪ್ರವಾಸೋದ್ಯಮ ವಲಯದ ಪ್ರಮುಖ ಭಾಗವಾಗಿರುವ ಕುಶಿನಗರ ಜಿಲ್ಲೆಯ ಫಾಜಿಲ್ ನಗರದ ಹೆಸರನ್ನು ಇನ್ಮುಂದೆ ಪಾವಗಢ್ ಎಂದು ಮರುನಾಮಕರಣ ಮಾಡಲಾಗುವುದು ಎಂದು ಯೋಗಿ ಘೋಷಿಸಿದ್ದಾರೆ. ಈ ಮಹತ್ವದ ನಿರ್ಧಾರದ ಬೆನ್ನಲ್ಲೇ ವಿಪಕ್ಷಗಳ ವಿರುದ್ಧ ಭೀಕರ ವಾಗ್ದಾಳಿ ನಡೆಸಿರುವ ಯೋಗಿ, ಯುಪಿಯಿಂದ ಕ್ರಿಮಿನಲ್ ಮಾಫಿಯಾಗಳನ್ನು ಹಾಗೂ ರೋಗ ಹರಡುವ ಸೊಳ್ಳೆಗಳನ್ನು ಒಟ್ಟಿಗೇ ನಿರ್ಮೂಲನೆ ಮಾಡಲಾಗಿದೆ ಎಂದು ಸಿಂಹಘರ್ಜನೆ ಮಾಡಿದ್ದಾರೆ.



ಕುಶಿನಗರದಲ್ಲಿ ನಡೆದ ಬೃಹತ್ ಸಾರ್ವಜನಿಕ ಕಾರ್ಯಕ್ರಮವೊಂದನ್ನು ಉದ್ದೇಶಿಸಿ ಮಾತನಾಡಿದ ಸಿಎಂ ಯೋಗಿ ಆದಿತ್ಯನಾಥ, ಫಾಜಿಲ್ ನಗರದ ಶಾಸಕರ ಸುದೀರ್ಘ ಬೇಡಿಕೆಯನ್ನು ತಾವು ಮನ್ನಿಸಿರುವುದಾಗಿ ತಿಳಿಸಿದ್ದಾರೆ. ನಾವು ಈ ಪ್ರದೇಶದ ಹೆಸರನ್ನು ಬದಲಾಯಿಸಲು ಪ್ರಸ್ತಾಪಿಸಿದ್ದೇವೆ. ಇನ್ಮುಂದೆ ಇದನ್ನು ಯಾರೂ ಫಾಜಿಲ್ ನಗರ ಎಂದು ಕರೆಯುವ ಅಗತ್ಯವಿಲ್ಲ. ನಾವು ಇದಕ್ಕೆ ಪಾವಗಢ್ ಎಂಬ ಹೊಸ ಮತ್ತು ಭವ್ಯವಾದ ಗೌರವವನ್ನು ನೀಡಲಿದ್ದೇವೆ. ಈ ಪುಣ್ಯಭೂಮಿ ಭಗವಾನ್ ಮಹಾವೀರರ ಪವಿತ್ರ ಇತಿಹಾಸಕ್ಕೆ ಸಾಕ್ಷಿಯಾಗಿದೆ. ಹಾಗಿರುವಾಗ ನಾವು ಇದಕ್ಕೆ ಫಾಜಿಲ್ ಎಂದು ಏಕೆ ಕರೆಯಬೇಕು ಎಂದಿದ್ದಾರೆ. ಇಡೀ ದೇಶ ಮತ್ತು ಪ್ರಪಂಚದಾದ್ಯಂತದ ಪ್ರವಾಸಿಗರು ಇನ್ಮುಂದೆ ಭಗವಾನ್ ಮಹಾವೀರರ ಸಂಸ್ಕೃತಿಯೊಂದಿಗೆ ಬೆಸೆದುಕೊಂಡಿರುವ ಪಾವಗಢ್ ಹೆಸರನ್ನು ಕೇಳಿ ಇಲ್ಲಿಗೆ ಬರಲಿದ್ದಾರೆ ಎಂದು ಯೋಗಿ ಸ್ಪಷ್ಟಪಡಿಸಿದ್ದಾರೆ.

ಈ ಪ್ರದೇಶದ ಐತಿಹಾಸಿಕ ಮತ್ತು ಸಾಂಸ್ಕೃತಿಕ ಮಹತ್ವವನ್ನು ಪರಿಗಣಿಸಿ, ಅದನ್ನು ಅದರ ಮೂಲ ಅಸ್ಮಿತೆಯೊಂದಿಗೆ ಮರುಸಂಪರ್ಕಿಸುವುದು ಇಂದಿನ ತುರ್ತು ಅಗತ್ಯವಾಗಿತ್ತು ಎಂದು ಯೋಗಿ ಸರ್ಕಾರದ ಕ್ರಮವನ್ನು ಸಮರ್ಥಿಸಿಕೊಂಡಿದ್ದಾರೆ. ಹೆಸರು ಬದಲಾವಣೆಯ ಪ್ರಕಟಣೆಯ ಬೆನ್ನಲ್ಲೇ ಯುಪಿಯ ಕಾನೂನು ಸುವ್ಯವಸ್ಥೆ ಮತ್ತು ಅಭಿವೃದ್ಧಿಯ ಕುರಿತು ಮಾತನಾಡಿದ ಸಿಎಂ ಯೋಗಿ, ತಮ್ಮ ಸರ್ಕಾರದ ಬುಲ್ಡೋಜರ್ ನೀತಿಯನ್ನು ಕೊಂಡಾಡಿದ್ದಾರೆ. ಉತ್ತರ ಪ್ರದೇಶದಲ್ಲಿ ನಾವು ಮಾಫಿಯಾಗಳನ್ನು ಹೇಗೆ ಬೇರುಸಹಿತ ಕಿತ್ತೊಗೆದಿದ್ದೇವೆಯೋ, ಅದೇ ರೀತಿ ಮೆದುಳು ಜ್ವರದಂತಹ ಭೀಕರ ಸಾಂಕ್ರಾಮಿಕ ರೋಗವನ್ನೂ ಕಂಪ್ಲೀಟ್ ಆಗಿ ತೊಡೆದುಹಾಕಿದ್ದೇವೆ. ನಾವು ರಾಜ್ಯದಿಂದ ಸೊಳ್ಳೆ ಮತ್ತು ಮಾಫಿಯಾ ಎರಡನ್ನೂ ಒಟ್ಟಿಗೇ ಮುಗಿಸಿದ್ದೇವೆ ಎಂದಿದ್ದಾರೆ. ಈ ಹಿಂದೆ ಸೊಳ್ಳೆಗಳು ತಲೆಮಾರುಗಳಿಗೆ ಭೀಕರ ರೋಗಗಳನ್ನು ತರುತ್ತಿದ್ದವು, ಇತ್ತ ರಾಜಕೀಯ ಪ್ರಾಯೋಜಿತ ಮಾಫಿಯಾಗಳು ರಾಜ್ಯದ ಯುವಕರಿಗೆ ನಿರುದ್ಯೋಗದ ಶಾಪ ತರುತ್ತಿದ್ದರು. ನಾವು ಈ ಎರಡೂ ಮಾರಕ ಕಾಯಿಲೆಗಳಿಗೆ ಶಾಶ್ವತ ಚಿಕಿತ್ಸೆ ನೀಡಿದ್ದೇವೆ ಎಂದು ಗುಡುಗಿದ್ದಾರೆ.

ಫಾಜಿಲ್ ನಗರವನ್ನು ಪಾವಗಢ್ ಎಂದು ಬದಲಾಯಿಸುವ ಯೋಗಿ ಅವರ ಹೇಳಿಕೆಯ ನಂತರ ರಾಜಕೀಯ ಮತ್ತು ಸಾಮಾಜಿಕ ವಲಯಗಳಲ್ಲಿ ಚರ್ಚೆಗಳು ತೀವ್ರಗೊಂಡಿವೆ. ಬೌದ್ಧ ಪ್ರವಾಸೋದ್ಯಮ ಸರ್ಕ್ಯೂಟ್‌ನಲ್ಲಿ ಮಹತ್ವದ ಸ್ಥಾನ ಪಡೆದಿರುವ ಈ ಪಟ್ಟಣದ ಹೆಸರು ಬದಲಾವಣೆಗೆ ಅಗತ್ಯವಿರುವ ಎಲ್ಲಾ ಆಡಳಿತಾತ್ಮಕ ಮತ್ತು ಕಾನೂನುಬಾಹಿರ ಪ್ರಕ್ರಿಯೆಗಳನ್ನು ಶೀಘ್ರವೇ ಪೂರ್ಣಗೊಳಿಸಲಾಗುವುದು ಮತ್ತು ಅದಾದ ನಂತರ ಅಧಿಕೃತ ಗಜೆಟ್ ಬಿಡುಗಡೆ ಮಾಡಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಡಿ.ಕೆ. ಸುರೇಶ್ ಜೊತೆ ಜಮೀರ್ ರಹಸ್ಯ ಮಾತುಕತೆ



**ಬೆಂಗಳೂರು, ಜೂ. 2:** ಮಹತ್ವದ ಬೆಳವಣಿಗೆಯಲ್ಲಿ ಮಾಜಿ ಸಂಸದ ಡಿ.ಕೆ.ಸುರೇಶ್, ಮಾಜಿ ಸಚಿವ ಜಮೀರ್ ಅಹಮದ್ ಖಾನ್ ಅವರ ಮನೆಗೆ ತೆರಳಿ ಮಾತುಕತೆ ನಡೆಸಿದ್ದಾರೆ.

ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಬುಧವಾರ ಪ್ರಮಾಣವಚನ ಸ್ವೀಕರಿಸುತ್ತಿದ್ದಾರೆ. ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಮಾಜಿ ಸಚಿವರು ಹಾಗೂ ಗಣ್ಯರನ್ನು ಡಿ.ಕೆ.ಸುರೇಶ್ ಆಹ್ವಾನಿಸುತ್ತಿದ್ದಾರೆ. ಅದರ ಭಾಗವಾಗಿ ಜಮೀರ್ ಅವರ ಮನೆಗೂ ಭೇಟಿ ಮಾಡಿ ಆಹ್ವಾನ ನೀಡಲಾಗಿದೆ ಎಂದು ಹೇಳಲಾಗಿದೆ.

ದಾವಣಗೆರೆ ದಕ್ಷಿಣ ವಿಧಾನಸಭೆಯ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯ ವಿರುದ್ಧವಾಗಿ ಮತ ಹಾಕಿಸುವಂತೆ ಜಮೀರ್ ಅಹಮದ್ ಖಾನ್ ಕಾಂಗ್ರೆಸ್‌ನ ಉಚ್ಚಾಟಿತ ನಾಯಕನ ಜೊತೆ ಸಂಭಾಷಣೆ ನಡೆಸಿದ್ದಾರೆ ಎನ್ನಲಾದ ಆಡಿಯೋ ಸಾಮಾಜಿಕ ಜಾಲತಾಣದಲ್ಲಿ ಭಾರಿ ವೈರಲ್ ಆಗಿತ್ತು.

ಮಾಜಿ ಮುಖ್ಯಮಂತ್ರಿ ಸಿದ್ದ ರಾಮಯ್ಯ ಅವರ ಜೊತೆ ದೆಹಲಿಗೆ ಪ್ರಯಾಣಿಸುತ್ತಿದ್ದ ಜಮೀರ್ ಅಹಮದ್ಖಾನ್ ಆಡಿಯೋ ವೈರಲ್ ಅಗುತ್ತಿದ್ದಂತೆ ಅರ್ಧಕ್ಕೆ ವಾಪಸ್ಸಾದರು. ಇಂತಹ ಸಂದರ್ಭದಲ್ಲಿ ತಾವು ತಮೊಂದಿಗೆ ದೆಹಲಿಗೆ ಬರುವುದು ಸೂಕ್ತ ಅಲ್ಲ ಎಂದು ಸಿದ್ದರಾಮಯ್ಯ ಸಲಹೆ ನೀಡಿದ್ದರು ಎನ್ನಲಾಗಿದೆ.

ಹೀಗಾಗಿ ಜಮೀರ್ ಪಯಣ ಮೊಟಕುಗೊಳಿಸಿ ಬೆಂಗಳೂರಿನಲ್ಲೇ ಉಳಿದಿದ್ದರು. ಡಿ.ಕೆ.ಸುರೇಶ್ ಮಂಗಳವಾರ ಬೆಳಗ್ಗೆ ಅವರ ಮನೆಗೆ ತೆರಳಿ ಚರ್ಚೆ ನಡೆಸಿ, ಕಾರ್ಯಕ್ರಮಕ್ಕೆ ಆಹ್ವಾನಿಸಿದ್ದಾರೆ.

ಆಡಿಯೊ ವೈರಲ್ ಆದ ಬೆನ್ನಲ್ಲೇ ಜಮೀರ್, ಸಚಿವ ಸಂಪುಟ ಸೇರ್ಪಡೆ ಬಗ್ಗೆ ಗೊಂದಲಗಳು ಏರ್ಪಟ್ಟಿವೆ. ಸಿದ್ದರಾಮಯ್ಯ ಅವರ ಪರಮಾಪ್ತ ಬಣದಲ್ಲಿ ಗುರುತಿಸಿಕೊಂಡಿದ್ದ ಜಮೀರ್ಗೆ, ದಾವಣಗೆರೆ ದಕ್ಷಿಣ ಉಪಚುನಾವಣೆ ಮತ್ತು ಆಡಿಯೊ ಪ್ರಕರಣ ಸಾಕಷ್ಟು ಹಿನ್ನಡೆ ಉಂಟುಮಾಡಿದೆ.

**ಉಚ್ಚಾಟನೆಗೆ ಆಗ್ರಹ:** ಈ ನಡುವೆ ಜಮೀರ್ ಅವರನ್ನು ಕಾಂಗ್ರೆಸ್‌ನಿಂದ ಉಚ್ಚಾಟಿಸಬೇಕೆಂಬ ಒತ್ತಾಯ ಕೇಳಿ ಬಂದಿದೆ. ಬೆಂಗಳೂರು ಪಶ್ಚಿಮ ಜಿಲ್ಲಾ ಕಾಂಗ್ರೆಸ್‌ನ ಉಪಾಧ್ಯಕ್ಷ ಕುಶಾಲ್ ಹರುವೆಗೌಡ ಅವರು ಕಾಂಗ್ರೆಸ್ ಹೈಕಮಾಂಡ್‌ಗೆ ದೂರು ನೀಡಿದ್ದು, ಚುನಾವಣೆಯಲ್ಲಿ ಪಕ್ಷದ ವಿರುದ್ಧ ಜಮೀರ್ ಅಹಮದ್ ಕೆಲಸ ಮಾಡಿದ್ದಾದರೆ ಅವರನ್ನು ಪಕ್ಷದಿಂದ ಉಚ್ಚಾಟಿಸುವ ಕಠಿಣಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ.

ಪಕ್ಷದಲ್ಲಿ ನಾಯಕರು ಮತ್ತು ಕಾರ್ಯಕರ್ತರಿಗೂ ಸಮಾನ ಹಕ್ಕುಗಳಿರುತ್ತವೆ. ಯಾರೇ ತಪ್ಪು ಮಾಡಿದ್ದರೂ ಪ್ರಶ್ನಿಸುವುದನ್ನು ನಮಗೆ ಹೇಳಿ ಕೊಟ್ಟಿದ್ದಾರೆ. ರಾಹುಲ್ ಗಾಂಧಿ, ಸಿದ್ದರಾಮಯ್ಯ ಅವರು ತಪ್ಪು ಮಾಡಿದರೂ ನಾವು ಕೇಳುತ್ತೇವೆ. ಇದು ಕಾಂಗ್ರೆಸ್‌ನಲ್ಲಿರುವ ಪ್ರಜಾಪ್ರಭುತ್ವ ಎಂದು ಹೇಳಿದ್ದಾರೆ.

ಬಿಜೆಪಿ ವಿರುದ್ಧ ಕಾಂಗ್ರೆಸ್ ನಿರ್ಣಾಯಕ ಹೋರಾಟ ನಡೆಸುತ್ತಿದೆ. ಅಂತಹ ಸಂದರ್ಭದಲ್ಲಿ ನಮ ಪಕ್ಷದ ನಾಯಕರೇ ಬಿಜೆಪಿಯ ಅಭ್ಯರ್ಥಿಯ ಪರವಾಗಿ ಮತ ಹಾಕಿಸುವಂತೆ ಹೇಳುವುದಾದರೆ ನಮಗೆ ನೈತಿಕತೆ ಇರುವುದಿಲ್ಲ. ಜಮೀರ್ ಅವರು ಮಾತನಾಡಿದ್ದಾರೆ ಎನ್ನಲಾದ ಆಡಿಯೋ ವೈರಲ್ ಆಗಿದೆ.

ಈ ಬಗ್ಗೆ ಸತ್ಯಾಂಶ ವನ್ನು ವಿಚಾರಣೆ ನಡೆಸಿ ತಪ್ಪು ಕಂಡುಬಂದರೆ ಪಕ್ಷದಿಂದ ಉಚ್ಚಾಟನೆಯಂ ತಹ ಕಠಿಣ ನಿರ್ಧಾರ ತೆಗೆದುಕೊಳ್ಳಬೇಕೆಂದು ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಅವರಿಗೆ ಬರೆದಿರುವ ಪತ್ರದಲ್ಲಿ ಮನವಿ ಮಾಡಿದ್ದಾರೆ.



ಬೆಂಗಳೂರಿನ ವಿಧಾನಸೌಧದಲ್ಲಿ ಮಂಗಳವಾರ ನಡೆದ ನೂತನ ಸಚಿವ ಸಂಪುಟದ ಸಿದ್ಧತೆ.

### ಬುಧವಾರ ಮುಂಜಾನೆ 4 ಗಂಟೆಗೆ ಬಿಟ್ಟು ಕಳಿಸಿದ ದುಷ್ಕರ್ಮಿಗಳು

# ಮಾಜಿ ಎಂಎಲ್‌ಸಿ ದಯಾನಂದರೆಡ್ಡಿ ಅಪಹರಣ, 3 ಕೋಟಿ ರೂ.ಗೆ ಬೇಡಿಕೆ



**ಬೆಂಗಳೂರು, ಜೂ.2:** ಮಾಜಿ ಎಂಎಲ್‌ಸಿ ದಯಾನಂದ್ ರೆಡ್ಡಿ ಅವರನ್ನು ಅಪಹರಿಸಿ 3 ಕೋಟಿ ರೂಪಾಯಿಗೆ ಬೇಡಿಕೆಯಿಟ್ಟಿರುವ ಘಟನೆ ಮಂಗಳವಾರ ತಡರಾತ್ರಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಅನೇಕಲ್ ತಾಲೂಕಿನ ಹುಸ್ಕೂರು ಬಳಿ ನಡೆದಿದೆ.

ಆನೇಕಲ್ ಸಮೀಪ ನಿನ್ನೆ ಮಧ್ಯರಾತ್ರಿ 2 ಗಂಟೆ ವೇಳೆ ಗೋಲ್ಡ್ ಕಾಯಿನ್ ಕ್ಲಬ್‌ನಿಂದ ಹೊರಬಂದಿದ್ದ ಮಾಜಿ ಎಂಎಲ್‌ಸಿ ದಯಾನಂದ್ ರೆಡ್ಡಿ ಅವರು ತಮ್ಮ ಕಾರಿನಲ್ಲಿ ತೆರಳಲು ಸಿದ್ಧರಾಗಿದ್ದರು. ಈ ಸಂದರ್ಭದಲ್ಲಿ ಅವರನ್ನು ತಡೆದ ದುಷ್ಕರ್ಮಿಗಳು, ಅವರ ಗಮನ ಸೆಳೆಯಲು ನಿಮಗೆ ಗಿಫ್ಟ್ ಬಂದಿದೆ ಎಂದು ಸುಳ್ಳು ಹೇಳಿ, ಯಾವುದೋ ಬಾಕ್ಸ್ ತೋರಿಸಿದ್ದಾರೆ. ಇದನ್ನು ನಂಬಿ ಕಾರಿನ ಲಾಕ್ ತೆಗೆಯುತ್ತಿದ್ದಂತೆಯೇ, ಆರೋಪಿಗಳು ಬಲವಂತವಾಗಿ ಕಾರಿನೊಳಗೆ ನುಗ್ಗಿದ್ದಾರೆ. ನಂತರ ಗನ್ ತೋರಿಸಿ ಬೆದರಿಸಿದ ದುಷ್ಕರ್ಮಿಗಳು, ದಯಾನಂದ್ ಅವರನ್ನು ಕಾರಿನಲ್ಲೇ ಒತ್ತೆಯಾಳಾಗಿ ಇರಿಸಿಕೊಂಡು, ವಾಹನವನ್ನು ತಮಗೆ ಬೇಕಾದ ಕಡೆಗೆ ಚಲಾಯಿಸುವಂತೆ ಸೂಚನೆ ನೀಡಿದ್ದಾರೆ. ಈ ವೇಳೆ ಅಲ್ಲಿಗೆ ಮತ್ತೊಂದು ಕೆಂಪು ಕಾರೊಂದು ಬಂದಿದ್ದು, ಅವರನ್ನು ಹಿಂಬಾಲಿಸಿದೆ. ನಂತರ ಅತ್ತಿಬೆಲೆಯ ಕೆಎಚ್‌ಬಿ ಬಡಾವಣೆ ಬಳಿ ಕರೆದೊಯ್ದು ಪ್ರಾಣ ಬೆದರಿಕೆ ಹಾಕಿದ್ದಾರೆ. ನಿನ್ನ ಕೊಲ್ಲಲು 10 ಕೋಟಿ ಸುಫಾರಿ ಕೊಟ್ಟಿದ್ದಾರೆ ಎಂದು ಕುತ್ತಿಗೆಗೆ ಗನ್ ಬೆದರಿಕೆ ಹಾಕಿದ್ದಾರೆ. ಆರೋಪಿಗಳು 3 ಕೋಟಿ ರೂಪಾಯಿ ಹಣಕ್ಕೆ ಬೇಡಿಕೆಯಿಟ್ಟಿದ್ದಾರೆ. ಕೂಡಲೇ ದಯಾನಂದ ರೆಡ್ಡಿಯವರು ಆ ಹಣವನ್ನು ನಾನೇ ಕೊಡುತ್ತೇನೆ, ನನಗೆ ಏನೂ ಮಾಡಬೇಡಿ ಎಂದು ಮನವಿ ಮಾಡಿದ್ದಾರೆ.

ಅಂತೆಯೇ ಮೊದಲು ಮೂರು ಕೋಟಿಗೆ ಬೇಡಿಕೆ ಇಟ್ಟ ಅಪಹರಣಕಾರರು ನಂತರ ಎರಡು ಕೋಟಿಗೆ ಒಪ್ಪಿಕೊಂಡಿದ್ದಾರೆ.

ಆದರೆ, ಈಗ ಹಣ ಇಲ್ಲ ಬೆಳಗ್ಗೆ ಬ್ಯಾಂಕ್‌ನಲ್ಲಿ ಡ್ರಾ ಮಾಡಿ ಕೊಡುವುದಾಗಿ ಮನವಿ ಮಾಡಿದ್ದಾರೆ. ಹಣ ಡ್ರಾ ಮಾಡಿದ ಬಳಿಕ ಫೋನ್ ಮಾಡುವಂತೆ ತಿಳಿಸಿ, ಫೋನ್ ನಂಬರ್ ನೀಡಿ ಮುಂಜಾನೆ 4 ಗಂಟೆರಿಗೆ ಬಿಟ್ಟು ಕಳುಹಿಸಿದ್ದಾರೆ. ಈ ಸಂಬಂಧ ಅತ್ತಿಬೆಲೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಆರೋಪಿ ಗಳಿಗಾಗಿ ಪೊಲೀಸರಿಂದ ಶೋಧ ಕಾರ್ಯ ಮುಂದುವರೆದಿದೆ.

## ಹೊಸ ಸಿಎಂ ಪ್ರಮಾಣವಚನ: ವಿಧಾನಸೌಧ, ವಿಕಾಸಸೌಧ ಸಿಬ್ಬಂದಿಗೆ ಇಂದು ಅರ್ಧದಿನ ರಜೆ



**ಬೆಂಗಳೂರು, ಜೂ.2:** ರಾಜ್ಯದ ನೂತನ ಮುಖ್ಯಮಂತ್ರಿಯವರ ಪ್ರಮಾಣ ವಚನ ಸ್ವೀಕಾರ ಸಮಾರಂಭ ಬುಧವಾರ (ಜೂ.3) ಸಂಜೆ 4 ಗಂಟೆಗೆ ಲೋಕಭವನದಲ್ಲಿ ನಡೆಯಲಿರುವ ಹಿನ್ನೆಲೆಯಲ್ಲಿ ವಿಧಾನಸೌಧ, ವಿಕಾಸಸೌಧ ಸಿಬ್ಬಂದಿಗೆ ಅರ್ಧ ದಿನ ರಜೆ ನೀಡಿ ಆದೇಶ ಹೊರಡಿಸಲಾಗಿದೆ.

ವಿಧಾನಸೌಧ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಜನಸಂದಣಿ ಮತ್ತು ವಾಹನ ದಟ್ಟಣೆ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಭದ್ರತೆ ಮತ್ತು ಸುರಕ್ಷತೆಯ ದೃಷ್ಟಿಯಿಂದ ವಿಧಾನಸೌಧ, ವಿಕಾಸ ಸೌಧ ಹಾಗೂ ಬಹುಮಹಡಿ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಜೂನ್ 3ರಂದು ಅಪರಾಹ್ನ ಅರ್ಧ ದಿನ ರಜೆ ಘೋಷಿಸಲಾಗಿದೆ.

ಈ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಅಧಿಸೂಚನೆ ಹೊರಡಿಸಿದ್ದು, ಪ್ರಮಾಣ ವಚನ ಸಮಾರಂಭದ ಸಂದರ್ಭದಲ್ಲಿ ಸಾರ್ವಜನಿಕರ ಆಗಮನ ಹೆಚ್ಚಾಗುವ ಹಿನ್ನೆಲೆಯಲ್ಲಿ ಆಡಳಿತಾತ್ಮಕ ಹಾಗೂ ಭದ್ರತಾ ಕ್ರಮಗಳನ್ನು ಸುಗಮಗೊಳಿಸುವ ಉದ್ದೇಶದಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ತಿಳಿಸಿದೆ.

ರಾಜ್ಯ ಸರ್ಕಾರದ ಅಧೀನ ಕಾರ್ಯದರ್ಶಿ ಆರ್.ಯದು ಕುಮಾರ್ ಅವರು ಈ ಸಂಬಂಧ ಆದೇಶ ಹೊರಡಿಸಿದ್ದಾರೆ.

## ಪ್ರಮಾಣವಚನ ಸಮಾರಂಭಕ್ಕೆ ಬಂದೋಬಸ್ತ್: ಅಧಿಕಾರಿಗಳ ಜತೆ ಪೋಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ಸಭೆ




**ಬೆಂಗಳೂರು, ಜೂ.2:** ಲೋಕಭವನದಲ್ಲಿ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಅವರು ಹಾಗೂ ಹಿರಿಯ ಕೆಲ ಶಾಸಕರು ಸಚಿವರಾಗಿ ಬುಧವಾರ ಪ್ರಮಾಣ ವಚನ ಸ್ವೀಕರಿಸಲಿರುವ ಹಿನ್ನೆಲೆಯಲ್ಲಿ ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ಮಂಗಳ ವಾರ ಅಧಿಕಾರಿಗಳ ಜೊತೆ ಸಭೆ ನಡೆಸಿ ಸೂಕ್ತ ಬಂದೋಬಸ್ತ್ ಬಗ್ಗೆ ಸಲಹೆ, ಸೂಚನೆ ನೀಡಿದರು.

ಆಯುಕ್ತರ ಕಛೇರಿಯ ಸಭಾಂಗಣ ದಲ್ಲಿ ನಡೆದ ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ಆಯುಕ್ತರು, ಜಂಟಿ ಪೊಲೀಸ್ ಆಯುಕ್ತರು ಹಾಗೂ ಎಲ್ಲಾ ವಿಭಾಗಗಳ ಡಿಸಿಪಿಗಳು ಪಾಲ್ಗೊಂಡಿದ್ದರು.

ಲೋಕಭವನದಲ್ಲಿ ಬುಧವಾರ ಸಂಜೆ ನಡೆಯುವ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮದಲ್ಲಿ ಯಾವುದೇ ರೀತಿಯ ಸಣ್ಣ ಘಟನೆಗಳು ಆಗದಂತೆ ಮುನ್ನೆಚ್ಚರಿಕೆ ವಹಿಸಬೇಕೆಂದು ಅಧಿಕಾರಿಗಳಿಗೆ ಆಯುಕ್ತರು ಸೂಚಿಸಿದ್ದಾರೆ.

ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೆ ಡಿ.ಕೆ.ಶಿವಕುಮಾರ್ ಹಾಗೂ ಮಂತ್ರಿಯಾಗಲಿರುವ ಶಾಸಕರ ಬೆಂಬಲಿಗರು ಆಗಮಿಸುವ ಹಿನ್ನೆಲೆಯಲ್ಲಿ ಅವರುಗಳ ವಾಹನ ಗಳನ್ನು ನಿಲುಗಡೆ ಮಾಡಲು ಯಾವ ಸ್ಥಳಗಳಲ್ಲಿ ಅವಕಾಶ ಕಲ್ಪಿಸಬೇಕು ಎಂಬುವುದರ ಬಗ್ಗೆಯೂ ಸಹ ಸಲಹೆ ನೀಡಲಾಯಿತು.

ವಿಧಾನಸೌಧ ಹಾಗೂ ಲೋಕ ಭವನ ಸುತ್ತ ಯಾವುದೇ ರೀತಿ ಸಂಚಾರ ದಟ್ಟಣೆಯಾಗದಂತೆ ಕರ್ತವ್ಯ ನಿರ್ವಹಿಸುವಂತೆ ಸಭೆಯಲ್ಲಿದ್ದ ಸಂಚಾರ ವಿಭಾಗದ ಅಧಿಕಾರಿಗಳಿಗೆ ತಾಕೀತು ಮಾಡಿದರು. ಬಂದೋಬಸ್ತ್‌ನಲ್ಲಿ ನಿಯೋಜನೆಗೊಂಡಿರುವ ಎಸಿಪಿಗಳು, ಇನ್‌ಸ್ಪೆಕ್ಟರ್‌ಗಳು, ಸಬ್‌ಇನ್‌ಸ್ಪೆಕ್ಟರ್‌ಗಳು ಹಾಗೂ ಸಿಬ್ಬಂದಿಗಳು ಲೋಕಭವನ ಬಳಿಯ ನೆಹರು ತಾರಾಲಯ ಮುಂಭಾಗ ಸಮಾವೇಶಗೊಂಡಿದ್ದರು. ಯಾವ ಯಾವ ಸ್ಥಳಗಳಲ್ಲಿ ಕರ್ತವ್ಯ ನಿರ್ವಹಿಸಬೇಕೆಂಬುವದರ ಬಗ್ಗೆ ಪೂರ್ವಸಿದ್ಧತಾ ಕಾರ್ಯದಲ್ಲಿ ವಿವರಗಳನ್ನು ನೀಡಲಾಯಿತು.

### ಅರ್ಹ ಮತದಾರರ ರಕ್ಷಣೆ, ಅನರ್ಹರು ಪಟ್ಟಿಯಿಂದ ಹೊರಕ್ಕೆ

## ವಿಶೇಷ ಸಮಗ್ರ ಪರಿಷ್ಕರಣೆಯ ಪ್ರಮುಖ ಉದ್ದೇಶ ಪಶ್ಚಿಮ ಪಾಲಿಕೆ ಆಯುಕ್ತ ಡಾ.ಕೆ.ವಿ.ರಾಜೇಂದ್ರ



**ಬೆಂಗಳೂರು, ಜೂ.2:** ಮತದಾರರ ಪಟ್ಟಿಯಿಂದ ಅನರ್ಹ ಮತದಾರರ ಹೆಸರನ್ನು ಕೈಬಿಟ್ಟು, ಅರ್ಹ ಮತದಾರರು ಯಾವುದೇ ಕಾರಣಕ್ಕೂ ಪಟ್ಟಿಯಿಂದ ಹೊರಗುಳಿಯದಂತೆ ನೋಡಿಕೊಳ್ಳುವುದು ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್)ಯ ಪ್ರಮುಖ ಉದ್ದೇಶವಾಗಿದೆ ಎಂದು ಬೆಂಗಳೂರು ಪಶ್ಚಿಮ ನಗರಪಾಲಿಕೆ ಆಯುಕ್ತ ಡಾ. ರಾಜೇಂದ್ರ ಕೆ.ವಿ. ತಿಳಿಸಿದ್ದಾರೆ.

ಬೆಂಗಳೂರು ಪಶ್ಚಿಮ ನಗರ ಪಾಲಿಕೆಯಲ್ಲಿ ವ್ಯಾಪ್ತಿಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಹಾಗೂ ಚುನಾವಣಾ ಕಾರ್ಯಗಳಿಗೆ ಸಂಬಂಧಿಸಿದಂತೆ ವಿಜಯನಗರ, ಬಸವನಗುಡಿ ಹಾಗೂ ಪದ್ಮನಾಭನಗರ ವಿಧಾನಸಭಾ ಕ್ಷೇತ್ರಗಳ ಕಂದಾಯ ಅಧಿಕಾರಿಗಳು ಮತ್ತು ಸಿಬ್ಬಂದಿ ಗಳೊಂದಿಗೆ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಮತಗಟ್ಟೆ ಅಧಿಕಾರಿಗಳಾದ (ಬಿಎಲ್‌ಒ) ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಮ್ಯಾಪಿಂಗ್, ಅನ್‌ಮ್ಯಾಪಿಂಗ್ ಹಾಗೂ ರಿ–ಮ್ಯಾಪಿಂಗ್ ಕಾರ್ಯ ಗಳನ್ನು ಗುಣಮಟ್ಟದಿಂದ ಪೂರ್ಣ ಗೊಳಿಸಬೇಕೆಂದು ಸೂಚಿಸಿದರು. ನೂತನ ಬಿಎಲ್‌ಒಗಳಿಗೆ ಸಮರ್ಪಕ ತರಬೇತಿ ನೀಡುವ ಜೊತೆಗೆ, ಮತಗಟ್ಟೆಗಳಲ್ಲಿ ಅಂತರ್ಜಾಲ ಸೇರಿದಂತೆ ಅಗತ್ಯ ಮೂಲಸೌಕರ್ಯ ಒದಗಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅಧಿಕೃತ ರಾಜಕೀಯ ಪಕ್ಷಗಳಿಂದ ನೇಮಕಗೊಂಡಿರುವ ಮತಗಟ್ಟೆ ಏಜೆಂಟ್‌ಗಳ (ಬಿಎಲ್‌ಎ) ಸಹಕಾರ ಪಡೆದು ಪ್ರಕ್ರಿಯೆಗಳನ್ನು ಪರಿಣಾಮಕಾರಿ ಯಾಗಿ ಪೂರ್ಣಗೊಳಿಸುವಂತೆ ಸಲಹೆ ನೀಡಿದರು.ಸಭೆಯಲ್ಲಿ ಭಾಗವಹಿಸಿದ್ದ ಜಂಟಿ ಮುಖ್ಯ ಚುನಾವಣಾಧಿಕಾರಿ ರಾಘವೇಂದ್ರ ಮಾತನಾಡಿ, ಎಸ್‌ಐಆರ್ ಸಂಪೂರ್ಣ ತಂತ್ರಜ್ಞಾನ ಆಧಾರಿತ ಪ್ರಕ್ರಿಯೆಯಾಗಿದ್ದು, ಮುಂದಿನ ಐದು ತಿಂಗಳು ಬಿಎಲ್‌ಒಗಳ ಕಾರ್ಯಕ್ಷಮತೆ ಅತ್ಯಂತ ನಿರ್ಣಾಯಕವಾಗಿರಲಿದೆ ಎಂದರು.

ಜೂನ್ 30ರಿಂದ ಜುಲೈ 29ರವರೆಗೆ ನಡೆಯುವ ಮನೆ–ಮನೆ ಭೇಟಿ ಕಾರ್ಯಕ್ರಮದಲ್ಲಿ ಎಲ್ಲ ಅರ್ಹ ಮತದಾರರಿಗೆ ಎನ್ಯುಮರೇಶನ್ ಫಾರ್ಮ್ ವಿತರಿಸಿ, ಭರ್ತಿ ಮಾಡಿದ ಅರ್ಜಿಗಳನ್ನು ಸಂಗ್ರಹಿಸುವ ಜವಾಬ್ದಾರಿ ಬಿಎಲ್‌ಒಗಳ ಮೇಲಿದೆ ಎಂದರು. ಮತದಾರರ ಪಟ್ಟಿಯಲ್ಲಿ ಹೆಸರು ಉಳಿಯಬೇಕಾದರೆ ಎನ್ಯುಮರೇಶನ್ ಫಾರ್ಮ್ ಭರ್ತಿ ಮಾಡುವುದು ಕಡ್ಡಾಯವಾಗಿದೆ. ಅಗತ್ಯ ದಾಖಲೆಗಳಿಲ್ಲದ ಮತದಾರರಿಗೆ ನೋಟಿಸ್ ನೀಡಿ, ದಾಖಲೆ ಸಲ್ಲಿಕೆಯಾದ ಬಳಿಕವೇ ಹೆಸರು ಸೇರ್ಪಡೆಗೊಳ್ಳಲಿದೆ ಎಂದು ಅವರು ವಿವರಿಸಿದರು.

ಸಭೆಯಲ್ಲಿ ಅಪರ ಆಯುಕ್ತೆ ಕವಿತಾ ರಾಜರಾಮ್, ಸಹಾಯಕ ಆಯುಕ್ತ ರಾಮದಾಸ್, ಮತದಾರರ ನೋಂದಣಾಧಿಕಾರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿಗಳು, ಬಿಎಲ್‌ಓ ಸೂಪರ್ ವೈಸರ್‌ಗಳು ಹಾಗೂ ಬಿಎಲ್‌ಒಗಳು ಉಪಸ್ಥಿತರಿದ್ದರು.

# ಪರಿಸರ ದಿನ ವರ್ಷಪೂರ್ತಿ ಆಚರಿಸುವಂತಾಗಲಿ ಮುಖ್ಯಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಕರೆ



ಬೆಂಗಳೂರು, ಜೂ.2: ವಿಶ್ವ ಪರಿಸರ ದಿನಾಚರಣೆ ಕೇವಲ ಒಂದು ದಿನದ ಆಚರಣೆಯಾಗಬಾರದು. ಅದು ನಮ್ಮ ಜಂಟಿ ಜವಾಬ್ದಾರಿಯನ್ನು ನೆನಪಿಸುವ ಮತ್ತು ವರ್ಷಪೂರ್ತಿ ಕಾರ್ಯನಿರ್ವಹಿಸುವ ಯೋಜನೆಯಾಗಬೇಕು. ಆರೋಗ್ಯಕರ ರಾಷ್ಟ್ರದ ನಿರ್ಮಾಣಕ್ಕೆ ಆರೋಗ್ಯಕರ ಪರಿಸರ ಅತ್ಯಗತ್ಯ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ತಿಳಿಸಿದರು.

ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆಯ (ಐಐಎಸ್‌ಸಿ) ದಿವೇಕಾ ಹವಾಮಾನ ಬದಲಾವಣೆ ಕೇಂದ್ರದ ವತಿಯಿಂದ ಜೂನ್ 2 ಮತ್ತು 3ರಂದು ಆಯೋಜಿಸಲಾಗಿರುವ ಹವಾಮಾನ, ಮಾಲಿನ್ಯ ಮತ್ತು ಆರೋಗ್ಯ: ಭಾರತದಲ್ಲಿ ಸುಸ್ಥಿರ ಭವಿಷ್ಯದ ಹಾದಿಗಳು ಎಂಬ ಎರಡು ದಿನಗಳ ರಾಷ್ಟ್ರೀಯ ಕಾರ್ಯಾಗಾರವನ್ನು ಉದ್ಘಾಟಿಸಿದ ಅವರು, ಕಲುಷಿತ ಗಾಳಿ ಮತ್ತು ನೀರು ಸಮಾಜದ ದುರ್ಬಲ ವರ್ಗದವರಾದ ಮಹಿಳೆಯರು, ಮಕ್ಕಳು ಮತ್ತು ರೈತರ ಮೇಲೆ ತೀವ್ರ ಪರಿಣಾಮ ಬೀರುತ್ತಿದೆ. ಆದ್ದರಿಂದ, ಭಾರತವು ಅಭಿವೃದ್ಧಿ ಹೊಂದಿದ ಭಾರತ ಆಗಬೇಕಾದರೆ, ಮೊದಲು 'ವಿಕಸಿತ್ ಪರಿಸರ'ವನ್ನು ನಿರ್ಮಿಸುವುದು ಅನಿವಾರ್ಯ ವಾಗಿದೆ ಎಂದರು.

ವಿಜ್ಞಾನಿಗಳು, ನೀತಿ ನಿರೂಪಕರು, ಉದ್ಯಮದ ಪ್ರತಿನಿಧಿಗಳು, ಪರಿಸರ ತಜ್ಞರು ಮತ್ತು ಸಾರ್ವಜನಿಕ ಆರೋಗ್ಯ ವೃತ್ತಿಪರರನ್ನು ಒಂದೇ ವೇದಿಕೆಗೆ ತಂದು, ಹವಾಮಾನ ಬದಲಾವಣೆ ಮತ್ತು ಮಾಲಿನ್ಯದ ಸವಾಲುಗಳಿಗೆ ವೈಜ್ಞಾನಿಕ ಪರಿಹಾರಗಳನ್ನು ಕಂಡುಕೊಳ್ಳುವ ನಿಟ್ಟಿನಲ್ಲಿ ಈ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ. ಈ ಸಂದರ್ಭದಲ್ಲಿ ಗ್ರಾಮಿ ಪ್ರಶಸ್ತಿ ವಿಜೇತ ರಿಕ್ಕಿ ಕೇಜ್ ಅವರು ಪರಿಸರ ಜಾಗೃತಿಗಾಗಿ ಮೂಡಿಸಿದ ಸಂಗೀತದ ಕೊಡುಗೆಯನ್ನು ಸ್ಮರಿಸಲಾಯಿತು.

ಪರಿಸರ ಸಂರಕ್ಷಣೆ ಕೇವಲ ಸರ್ಕಾರದ ಕೆಲಸವಲ್ಲ. ಇದಕ್ಕಾಗಿ ಜನರು, ಗ್ರಹ ಮತ್ತು ಕಾರ್ಯಕ್ರಮ ಎಂಬ ಸೂತ್ರವನ್ನು ಅಳವಡಿಸಿಕೊಳ್ಳಬೇಕಿದೆ. ಸಾರ್ವಜನಿಕರು ಕೇವಲ ಗ್ರಾಹಕರ ಮನಸ್ಥಿತಿಯಿಂದ ಹೊರಬಂದು ಪರಿಸರದ ರಕ್ಷಕರಾಗಿ ಬದಲಾಗಬೇಕು. ತ್ಯಾಜ್ಯ ವಿಂಗಡಣೆ, ನೀರಿನ ಸಂರಕ್ಷಣೆ ಮತ್ತು ಸುಸ್ಥಿರ ಜೀವನಶೈಲಿಯನ್ನು ರೂಢಿಸಿಕೊಳ್ಳುವುದು ಇಂದಿನ ಅಗತ್ಯವಾಗಿದೆ.

ಪ್ರಕೃತಿಯು ಕೇವಲ ಬಳಕೆಯ ವಸ್ತುವಲ್ಲ, ಅದು ನಮ್ಮ ಜೀವದ ಆಧಾರ ಎಂಬುದನ್ನು ಇಂದಿನ ಯುವ ಪೀಳಿಗೆ ಅರಿಯಬೇಕಿದೆ. ನವೋದ್ಯಮಗಳು ಮತ್ತು ತಂತ್ರಜ್ಞಾನದ ಮೂಲಕ ಯುವಜನರು ಪರಿಸರ ಬದಲಾವಣೆಯ ಹರಿಕಾರರಾಗಬೇಕು. ಪ್ರಕೃತಿಯ ಮೇಲೆ ಎಲ್ಲರಿಗೂ ಹಕ್ಕಿದೆ. ಆದ್ದರಿಂದ ಸರ್ಕಾರ (ನೀತಿ ರೂಪಣೆ), ಉದ್ಯಮ (ಸುಸ್ಥಿರ ಉತ್ಪಾದನೆ), ನಾಗರಿಕರು (ಜವಾಬ್ದಾರಿಯುತ ನಡವಳಿಕೆ) ಮತ್ತು ವಿಜ್ಞಾನಿಗಳು (ವೈಜ್ಞಾನಿಕ ಮಾರ್ಗದರ್ಶನ) ಒಟ್ಟಾಗಿ ಕೆಲಸ ಮಾಡಬೇಕಿದೆ.

ಜನಸಂಖ್ಯೆಯ ಒತ್ತಡ, ಮಿತಿಮೀರಿದ ಬಳಕೆ, ಮಾಲಿನ್ಯ ಮತ್ತು ವಿಜ್ಞಾನ–ನೀತಿಗಳ ನಡುವಿನ ಕೊಂಡಿಯ ಕೊರತೆಯಿಂದಾಗಿ ಇಂದು ಪರಿಸರ ಹಾಳಾಗುತ್ತಿದೆ.

ಇದಕ್ಕೆ ಪರಿಹಾರವಾಗಿ ಹಸಿರು ತಂತ್ರಜ್ಞಾನ, ಸುಸ್ಥಿರ ನಗರೀಕರಣ ಮತ್ತು ಪರಿಸರ ಶಿಕ್ಷಣವನ್ನು ಬಲಪಡಿಸಬೇಕಾಗಿದೆ. ಪರಿಸರ ರಕ್ಷಣೆ ಎನ್ನು ವುದು ಪ್ರಗತಿಗೆ ಅಡ್ಡಿಯಲ್ಲ, ಬದಲಿಗೆ ಅದು ದೀರ್ಘಕಾಲದ ಸಮೃದ್ಧಿಗೆ ಅಡಿಪಾಯವಾಗಿದೆ. ಭಾರತವು ಸುಸ್ಥಿರ ಅಭಿವೃದ್ಧಿಯಲ್ಲಿ ಜಾಗತಿಕ ನಾಯಕನಾಗಿ ಹೊರಹೊಮ್ಮಲು ಸರ್ಕಾರ, ವಿಜ್ಞಾನ ಮತ್ತು ಸಮಾಜ ಒಟ್ಟಾಗಿ ಸಾಗಬೇಕಿದೆ ಎಂದು ಹೇಳಿದರು.

## ಜೂ.5ರ ಹೊತ್ತಿಗೆ ರಾಜ್ಯ ಕರಾವಳಿಗೆ ಮುಂಗಾರು ಆಗಮನ: ಹವಾಮಾನ ಇಲಾಖೆ ಮುನ್ಸೂಚನೆ



**ಬೆಂಗಳೂರು, ಜೂ.2:** ದೇಶದ ಕೃಷಿ ಕ್ಷೇತ್ರದ ಜೀವನಾಡಿಯಾದ ನೈಋತ್ಯ ಮುಂಗಾರು ಆಗಮನದ ಕುರಿತು ಭಾರತೀಯ ಹವಾಮಾನ ಇಲಾಖೆ ಮಹತ್ವದ ಅಧಿಕೃತ ಮುನ್ಸೂಚನೆ ನೀಡಿದೆ. ಈ ವರ್ಷದ ಮುಂಗಾರು ಜೂನ್ 5ರ ಸುಮಾರಿಗೆ ಕರಾವಳಿ ಕರ್ನಾಟಕಕ್ಕೆ ಅಧಿಕೃತವಾಗಿ ಆಗಮಿಸಲಿದೆ ಎಂದು ಹವಾಮಾನ ಶಾಸ್ತ್ರಜ್ಞರು ಸ್ಪಷ್ಟಪಡಿಸಿದ್ದಾರೆ.

ಕೇರಳದ ಅನೇಕ ಭಾಗಗಳು ಮತ್ತು ಅರಬ್ಬಿ ಸಮುದ್ರದ ದಕ್ಷಿಣ ಪ್ರದೇಶದಲ್ಲಿ ಮುಂಗಾರು ಮಳೆಯ ಚಲನೆಗೆ ಈಗಾಗಲೇ ಪರಿಸ್ಥಿತಿಗಳು ಅನುಕೂಲಕರವಾಗಿವೆ ಮತ್ತು ರಾಜ್ಯದಲ್ಲಿ ಮಳೆ ನೀರಾವರಿ ನಿಗದಿಯಂತೆ ಪ್ರಾರಂಭವಾಗಲಿದೆ. ಈ ನಿಟ್ಟಿನಲ್ಲಿ, ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡದ ಕರಾವಳಿ ಜಿಲ್ಲೆಗಳಲ್ಲಿ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ.

ಕಳೆದ ಕೆಲವು ವಾರಗಳಿಂದ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುತ್ತಿರುವುದರಿಂದ, ಮಣ್ಣಿನ ತೇವಾಂಶ ಹೆಚ್ಚಾಗಿದೆ. ವಿಶೇಷವಾಗಿ ಕಲ್ಯಾಣ ಕರ್ನಾಟಕ ಮತ್ತು ಮಧ್ಯ ಕರ್ನಾಟಕದ ಜಿಲ್ಲೆಗಳಲ್ಲಿ, ಭಾರಿ ಮಳೆಯು ಕೃಷಿ ಕೆಲಸಕ್ಕೆ ಉತ್ತಮ ಆರಂಭವನ್ನು ನೀಡಿದೆ. ಹವಾಮಾನ ಇಲಾಖೆಯ ಬೆಂಗಳೂರು ಕೇಂದ್ರದ ತಜ್ಞರ ಪ್ರಕಾರ, ಮುಂಗಾರು ಆರಂಭಿಕ ಹಂತದಲ್ಲಿ ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳಲ್ಲಿ ಉತ್ತಮ ಮಳೆಯನ್ನು ತರುತ್ತದೆ ಮತ್ತು ನಂತರ ಒಳನಾಡಿನ ಕಡೆಗೆ ಚಲಿಸುತ್ತದೆ.

**ಹವಾಮಾನ ಇಲಾಖೆಯ ಅಧಿಕೃತ ಮುನ್ಸೂಚನೆ ಮತ್ತು ಮಳೆ**

ಭಾರತೀಯ ಹವಾಮಾನ ಇಲಾಖೆ ಬಿಡುಗಡೆ ಮಾಡಿರುವ ದೀರ್ಘಾವಧಿಯ ಮುನ್ಸೂಚನೆಯ ಪ್ರಕಾರ, ಈ ವರ್ಷದ ಮುಂಗಾರು ಋತುವಿನ ಒಟ್ಟು ಮಳೆ ಸರಾಸರಿಗಿಂತ ಸ್ವಲ್ಪ ಕಡಿಮೆ ಇರುವ ಸಾಧ್ಯತೆಯಿದೆ. ಮುಂಗಾರು ಋತುವಿನ ಒಟ್ಟು ಮಳೆ ದೀರ್ಘಾವಧಿಯ ಸರಾಸರಿಯ ಶೇ. 92 ರಷ್ಟು ಇರಲಿದೆ ಎಂದು ನಿರೀಕ್ಷಿಸಲಾಗಿದೆ. ಪೆಸಿಫಿಕ್ ಮಹಾಸಾಗರದಲ್ಲಿ ಎಲ್ ನಿನೋ ವಿದ್ಯಮಾನ ಮತ್ತು ಹಿಂದೂ ಮಹಾಸಾಗರದಲ್ಲಿ ದ್ವಿಧ್ರುವಿ ಪ್ರಕ್ರಿಯೆಯು ಮುಂಗಾರು ಮಾರುತಗಳ ತೀವ್ರತೆಯ ಮೇಲೆ ಪರಿಣಾಮ ಬೀರುತ್ತಿದೆ ಎಂದು ವಿಜ್ಞಾನಿಗಳು ವಿಶ್ಲೇಷಿಸಿದ್ದಾರೆ.

**ರಾಜ್ಯದ ವಿವಿಧ ಭಾಗಗಳಲ್ಲಿ ಮುಂಗಾರು ಪೂರ್ವ ಮಳೆ**

ಪ್ರಸ್ತುತ ಹವಾಮಾನ ಪರಿಸ್ಥಿತಿಗಳ ಪ್ರಕಾರ, ವಿದರ್ಭದಿಂದ ದಕ್ಷಿಣ ಕೇರಳ, ತೆಲಂಗಾಣ, ರಾಯಲಸೀಮಾ ಮತ್ತು ದಕ್ಷಿಣ ಒಳನಾಡಿನ ಕಡೆಗೆ ಕಡಿಮೆ ಒತ್ತಡದ ಪ್ರದೇಶವು ಸಾಗಿದೆ.

## ಅನಧಿಕೃತ ಜಾಹೀರಾತು ಫಲಕಗಳ ತೆರವು




**ಬೆಂಗಳೂರು, ಜೂ.2:** ಡಿ.ಕೆ. ಶಿವಕುಮಾರ್ ಅವರು ನಾಳೆ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸುವ ಹಿನ್ನೆಲೆಯಲ್ಲಿ ನಗರದ ವಿವಿಧ ಕಡೆಗಳಲ್ಲಿ ಅನಧಿಕೃತವಾಗಿ ಅಳವಡಿಸಿದ್ದ ಜಾಹೀರಾತು ಫಲಕಗಳನ್ನು ತೆರವುಗೊಳಿಸಲಾಗಿದೆ. ಡಿ.ಕೆ.ಶಿವಕುಮಾರ್‌ಗೆ ಶುಭ ಕೋರುವ ಅನಧಿಕೃತವಾಗಿ ಹಾಕಿದ್ದ ಫ್ಲೆಕ್ಸ್, ಬ್ಯಾನರ್, ಬಂಟಿಂಗ್ ಜೊತೆಗೆ ಒತ್ತುವರಿಯಾಗಿದ್ದ ಪಾದಚಾರಿ ಮಾರ್ಗವನ್ನು ಅಧಿಕಾರಿ ಹಾಗೂ ಸಿಬ್ಬಂದಿ ಕಾರ್ಯಾಚರಣೆ ಮೂಲಕ ತೆರವುಗೊಳಿಸಿದರು. ವಿಧಾನಸೌಧ, ಹೈಕೋರ್ಟ್ ಮುಂಭಾಗ, ಲೋಕಭವನ ಇನ್ನಿತರ ಅನಧಿಕೃತವಾಗಿ ಅಳವಡಿಸಿದ್ದ ಜಾಹೀರಾತು ಫಲಕಗಳನ್ನು ತೆರವುಗೊಳಿಸಲಾಗಿದೆ. ಹೈಕೋರ್ಟ್‌ನ ನಿರ್ದೇಶನದಂತೆ, ಬೆಂಗಳೂರು ಸೇರಿದಂತೆ ರಾಜ್ಯದಾದ್ಯಂತ ಅನಧಿಕೃತ ಬ್ಯಾನರ್‌ಗಳು, ಫ್ಲೆಕ್ಸ್‌ಗಳು ಮತ್ತು ಪೋಸ್ಟರ್‌ಗಳನ್ನು ತೆರವುಗೊಳಿಸಲು ಕಟ್ಟುನಿಟ್ಟಿನ ಆದೇಶವಿದೆ. ಅನಧಿಕೃತವಾಗಿ ಪ್ರದರ್ಶಿಸುವ ಬ್ಯಾನರ್‌ಗಳಿಗೆ 50 ಸಾವಿರ ರೂ. ದಂಡ ಮತ್ತು ಎಫ್‌ಐಆರ್ ದಾಖಲಿಸುವ ಎಚ್ಚರಿಕೆಯನ್ನು ಬಿಬಿಎಂಪಿ ಮತ್ತು ಸರ್ಕಾರ ನೀಡಿದೆ.

### ಶಾಸಕ ವಿಜಯಾನಂದ ಕಾಶಪ್ಪನವರ್‌ಗೆ ಸಚಿವ ಸ್ಥಾನ ನೀಡಲು ಒತ್ತಾಯ- ಇಳಕಲ್ ಬ್ಲಾಕ್ ಕಾಂಗ್ರೆಸ್ ಸಮಿತಿಯಿಂದ ಒತ್ತಡ

## ಸಚಿವ ಸ್ಥಾನ ಕೊಡದೇ ಹೋದರೆ ಕಾಂಗ್ರೆಸ್ ಪಕ್ಷದ ಎಲ್ಲ ಘಟಕಗಳ ಅಧ್ಯಕ್ಷರು, ಪದಾಧಿಕಾರಿಗಳ ರಾಜೀನಾಮೆ ಎಚ್ಚರಿಕೆ



**ಬೆಂಗಳೂರು, ಜೂ.2–** ಪ್ರೆಸ್ ಕ್ಲಬ್ ಸಭಾಂಗಣದಲ್ಲಿ ಬ್ಲಾಕ್ ಕಾಂಗ್ರೆಸ್ ಸಮಿತಿ ಇಳಕಲ್, ಹುನಗುಂದ ದ್ರ, ಬಾಗಲಕೋಟೆ ಜಿಲ್ಲೆ ವತಿಯಿಂದ ಹುನಗುಂದ ಶಾಸಕ ವಿಜಯಾನಂದ್ ಕಾಶಪ್ಪನವರ್ ನೂತನ ಮಂತ್ರಿ ಮಂಡಲದಲ್ಲಿ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿ ಮಾಧ್ಯಮಗೋಷ್ಠಿ ಏರ್ಪಡಿಸಿದ್ದರು.

ಇಲಕಲ್ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾದ ಅಬ್ದುಲ್ ರಜಾಕ್ ತಟಗಾರ, ಕಾಂಗ್ರೆಸ್ ಪಕ್ಷದ ಮುಖಂಡರಾದ ವಿಶ್ವನಾಥ ಪಾಟೀಲ್, ಮಲ್ಲಣ್ಣ ಎಲಿಗಾರ, ಅಮರೇಶ್ ನಾಗೂರ್, ಮುತ್ತಣ್ಣ ಕಲಗುಡಿ, ಮಹಾಂತೇಶ್ ನರಗುಂದ, ರವಿ ಹುಚ್ಚನೂರು, ಶಾಂತಣ್ಣ ರಾಘವೇಂದ್ರ ಧಾರವಾಡ, ಮೌನೇಶ್ ಬಂಡಿವಡ್ಡರ್, ನೀಲಪ್ಪ ಅಸೋಲಿ, ವಿಠಲ್ ಜಕ್ಕ, ಸಿದ್ದ ಭದ್ರಶೆಟ್ಟಿ, ಮನು ಮಾಧ್ಯಮಗೋಷ್ಠಿಯಲ್ಲಿ ಭಾಗವಹಿಸಿದ್ದರು.

ಅಬ್ದುಲ್ ರಜಾಕ್ ತಟಗಾರರವರು ಮಾತನಾಡಿ ವಿಜಯಾನಂದ್ ಎಸ್.ಕಾಶಪ್ಪನವರ್ ಅವರ ಕುಟುಂಬ ಕಳೆದ 50ವರ್ಷಗಳಿಂದ ಮನೆತನ ನಿಷ್ಠೆಯಿಂದ ಇದೆ. ಕಾಂಗ್ರೆಸ್ ಪಕ್ಷದಲ್ಲಿ ನಿಷ್ಠಾವಂತ ಕುಟುಂಬ ಎಂಬ ಕೀರ್ತಿ, ಹೆಗ್ಗಳಿಕೆ ಪಡೆದಿದೆ.

ಯುವನಾಯಕ, ಕ್ರಿಯಾಶೀಲರಾಗಿರುವ ಮತ್ತು ಕಾಂಗ್ರೆಸ್ ಪಕ್ಷ ಉತ್ತಮ ಸಂಘಟಕ ಶಾಸಕ ವಿಜಯಾನಂದ್ ಕಾಶಪ್ಪನವರ್ ರವರನ್ನು ನೂತನ ಸಚಿವ ಸಂಪುಟದಲ್ಲಿ ಅವಕಾಶ ನೀಡಬೇಕು. ಕೃಷ್ಣಾ ನದಿನೀರು ಯೋಜನೆ ಜಾರಿಗೆ ತಂದಿದ್ದು , 60ಸಾವಿರ ಎಕರೆ ಇಸ್ರೇಲ್ ಮಾದರಿ ನೀರಾವರಿ ಯೋಜನೆ, ಶಿಕ್ಷಣಕ್ಕೆ ಒತ್ತು ಸ್ಮಾರ್ಟ್‌ಕ್ಲಾಸ್ ಬೋರ್ಡ್ ಒದಗಿಸಿದರು. ಸರ್ಕಾರಿ ಶಾಲೆಗಳನ್ನು ಉನ್ನತಿಕರಿಸಿದರು.

ಹುನಗಂದ್–ಇಳಕಲ್ ಅವಳಿ ನಗರದಲ್ಲಿ ನೂರು ಹಾಸಿಗೆ ಆಸ್ಪತ್ರೆ ನಿರ್ಮಾಣ, ಸಮುದಾಯ ಭವನ ಹಾಗೂ ಉತ್ತಮ ರಸ್ತೆಗಳ ನಿರ್ಮಾಣ, ಮರೋಳ್ ನಲ್ಲಿ ಏತಾ ನೀರಾವರಿ, ನಂದವಡಗಿ ಏತ ನೀರಾವರಿ, ಹನಿ ನೀರಾವರಿಗೆ ಒತ್ತು ನೀಡಿ ರೈತರ ಬಾಳಿಗೆ ಬೆಳಕಾದರು.

ತಾಲೂಕುನಲ್ಲಿ ಕ್ರೀಡೆಗಳಿಗೆ ಒತ್ತು ನೀಡಿ ಒಳಾಂಗಣ, ಹೊರಂಗಣ ಮತ್ತು ಈಜುಕೊಳ ನಿರ್ಮಾಣ ಮಾಡಿದ್ದಾರೆ. 2339 ನಿವೇಶನಗಳನ್ನು ವಸತಿ ರಹಿತರಿಗೆ ಮತ್ತು ವಸತಿ ಹಕ್ಕು ಪತ್ರ ನೀಡಿದ್ದಾರೆ. ನಮ್ಮ ಕ್ಷೇತ್ರದಲ್ಲಿ 60ಕ್ಕೂ ಹೆಚ್ಚು ಜಾತಿ ಸಮುದಾಯದವರು ಇದ್ದಾರೆ ಎಲ್ಲರನ್ನ ಸಹೋದರತ್ವದಲ್ಲಿ ಬಾಳುತ್ತಿದ್ದೇವೆ.

ಶಾಸಕರಾಗಿ ವಿಜಯಾನಂದ್ ಎಸ್.ಕಾಶಪ್ಪನವರ್ ರವರು ಯುವ ಕಾಂಗ್ರೆಸ್ , ಜಿಲ್ಲಾ ಕಾಂಗ್ರೆಸ್, ರಾಜ್ಯ ಕಾಂಗ್ರೆಸ್ ಪಕ್ಷದಲ್ಲಿ ವಿವಿಧ ಹುದ್ದೆಯಲ್ಲಿ ಉತ್ತಮ ಸಂಘಟಕರಾಗಿ ಶ್ರಮಿಸಿದ್ದಾರೆ. ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ್ ಖರ್ಗೆ, ಕಾಂಗ್ರೆಸ್ ಪಕ್ಷದ ಸೋನಿಯಗಾಂಧಿ, ರಾಹುಲ್ ಗಾಂಧಿ, ಭಾವಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಿದ್ದರಾಮಯ್ಯ, ರಣದೀಪ್ ಸಿಂಗ್ ಸುರ್ಜೆವಾಲ, ಕೆ.ಸಿ.ವೇಣು ಗೋಪಾಲ್ ರವರಲ್ಲಿ ನಮ್ಮ ಮನವಿ ನೂತನ ಮುಖ್ಯಮಂತ್ರಿ ಪದಗ್ರಹಣ ಸಮಾರಂಭದಲ್ಲಿ ಶಾಸಕ ವಿಜಯಾನಂದ್ ಕಾಶಪ್ಪನವರ್ ರವರನ್ನು ಮಂತ್ರಿ ಮಂಡಲಕ್ಕೆ ಸೇರ್ಪಡೆ ಮಾಡಿಕೊಳ್ಳಬೇಕು ಇದ್ದರಿಂದ ಮುಂಬರುವ ವಿಧಾನಸಭಾ ಕ್ಷೇತ್ರದಲ್ಲಿ 30ಕ್ಕೂ ಹೆಚ್ಚು ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಉತ್ತಮ ಭವಿಷ್ಯವಿದೆ.

ನಿಷ್ಠಾವಂತ ಕಾರ್ಯಕರ್ತ, ಶಾಸಕರಾದ ವಿಜಯಾನಂದ್ ಕಾಶಪ್ಪನವರ್ ರವರಿಗೆ ಮಂತ್ರಿ ಸ್ಥಾನ ಕೊಡದೇ ಹೋದರೆ ಹುನಗುಂದ ಮತಕ್ಷೇತ್ರ ಎಲ್ಲ ವಿಭಾಗದ ಅಧ್ಯಕ್ಷರು, ಪದಾಧಿಕಾರಿಗಳು ರಾಜೀನಾಮೆ ನೀಡಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.



ಡಿ.ಕೆ.ಶಿವಕುಮಾರ್ ಅವರ ಸಚಿವ ಸಂಪುಟದಲ್ಲಿ ಸ್ಥಾನ ನೀಡುವಂತೆ ಒತ್ತಾಯಿಸಿ ಮಾಜಿ ಸಚಿವರಾದ ಡಾ.ಎಚ್.ಸಿ.ಮಹದೇವಪ್ಪ ಮತ್ತು ತನ್ವೀರ್ ಸೇಠ್ ಅವರ ಅಭಿಮಾನಿಗಳು ಮಂಗಳವಾರ ಮೈಸೂರಿನಲ್ಲಿ ಧರಣಿ ನಡೆಸಿದರು.

# ತೈಲಬೆಲೆ, ಅಡುಗೆ ಅನಿಲ ದರ ಹೆಚ್ಚಳ ವಿರೋಧಿಸಿ ಪ್ರತಿಭಟನೆ




**ಕಲಬುರಗಿ, ಜೂ. 2:** ಕೇಂದ್ರ ಸರ್ಕಾರ ಕಳೆದ 10–12ದಿನಗಳಲ್ಲಿ ನಿರಂತರ 5 ಬಾರಿ ಪೆಟ್ರೋಲ್ ಮತ್ತು ಡೀಸೆಲ್ ದರಗಳನ್ನು ಏರಿಕೆ ಮಾಡಿರುವ ಕ್ರಮವನ್ನು ಖಂಡಿಸಿ ಸೋಷಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಸ್ಟ್) (ಎಸ್‌ಯುಸಿಐ ಕಮ್ಯುನಿಸ್ಟ್) ಪಕ್ಷದ ಜಿಲ್ಲಾ ಸಮಿತಿಯ ಕಾರ್ಯಕರ್ತರು ನಗರದ ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದಲ್ಲಿ ಪ್ರತಿಭಟನೆ ಮಾಡಿದರು.

ಪಶ್ಚಿಮ ಏಷ್ಯಾದ ಯುದ್ಧದ ಕಾರಣದಿಂದ ಕಚ್ಚಾತೈಲದ ಬೆಲೆ ಏರಿಕೆಯಾಗಿದೆ, ಈ ಏರಿಕೆಗೆ ತಕ್ಕಂತೆ ತೈಲ ಕಂಪನಿಗಳು ದರ ಪರಿಷ್ಕರಣೆ ಮಾಡಿವೆ ಎಂಬುದಾಗಿ ಕೇಂದ್ರ ಸರ್ಕಾರ ಸಮಾರ್ಥನೆ ನೀಡುತ್ತಿದೆ. ಆದರೆ ಯುದ್ಧ ಆರಂಭವಾಗಿದ್ದು ಫೆಬ್ರವರಿ 28ರಂದು. ಪಂಚರಾಜ್ಯಗಳ ಚುನಾವಣೆಯ ಫಲಿತಾಂಶ ಬರುವವರೆಗೆ ದರ ಏರಿಕೆಯನ್ನು ಕಂಪನಿಗಳೇ ತಡೆ ಹಿಡಿದವೇ ಎಂಬುದಕ್ಕೆ ಬಿಜೆಪಿಯೇ ಉತ್ತರಿಸಬೇಕು. ಸಾಲದೆಂಬಂತೆ ಅಡುಗೆ ಅನಿಲ, ಸಿಎನ್ಜಿಗಳ ದರವನ್ನು ಕೂಡ ಏರಿಕೆ ಮಾಡಲಾಗಿದೆ. ಇದರಿಂದ ಜನಸಾಮಾನ್ಯರು, ಹೋಟೆಲ್ ಉದ್ಯಮಿಗಳು, ಅಟೋಚಾಲಕರು ಸೇರಿದಂತೆ ಎಲ್ಲರಿಗೂ ಹೊರೆಯಾಗಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು. ಈಗ ಜಾಗತಿಕ ಮಾರುಕಟ್ಟೆಯ ದರದ ನೆಪ ನೀಡುವ ಕೇಂದ್ರ ಸರ್ಕಾರ, ಕೋವಿಡ್ ಮತ್ತು ನಂತರದ ಅವಧಿಯಲ್ಲಿ ಕಚ್ಚಾತೈಲದ ಬೆಲೆ ಕುಸಿತವಾದಾಗ, ಅಥವಾ ರಷ್ಯಾ ದೇಶದಿಂದ ರಿಯಾಯಿತಿ ದರದಲ್ಲಿ ಖರೀದಿ ಮಾಡಿದಾಗ ಅದರ ಪ್ರಯೋಜನವನ್ನುದೇಶದ ಜನರಿಗೆ ಕೊಡಲಿಲ್ಲ ಏಕೆ? ಬದಲಿಗೆ ಕೇಂದ್ರದ ಅಬಕಾರಿ ಸುಂಕ ಏರಿಕೆ ಮಾಡಲಾಯಿತು. ಕಳೆದ 12 ವರ್ಷಗಳ ಬಿಜೆಪಿ ಆಳ್ವಿಕೆಯಲ್ಲಿ ಕೇಂದ್ರ ಸರ್ಕಾರವು ಪೆಟ್ರೋಲ್, ಡೀಸೆಲ್ ಮೇಲೆ ರೂ. 43 ಲಕ್ಷ ಕೋಟಿಯಷ್ಟು ತೆರಿಗೆಯನ್ನು ಜನರಿಂದ ಸುಲಿಗೆ ಮಾಡಿದೆ ಎಂದು ಅವರು ಕಿಡಿಕಾರಿದರು.

ಪೆಟ್ರೋಲ್, ಡೀಸೆಲ್ ದರದಲ್ಲಿ ಸುಮಾರು ಅರ್ಧದಷ್ಟು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ತೆರಿಗೆಯೇ ಇದೆ. ತೈಲ ಕಂಪನಿಗಳ ಲಾಭ, ಡೀಲರ್‌ಗಳ ಕಮಿಷನ್ ಬಿಟ್ಟು ಕೂಡ, ಗ್ರಾಹಕರು ಕೇಂದ್ರದ ತೆರಿಗೆ ರೂ. 20 ಮತ್ತು ರಾಜ್ಯದ ತೆರಿಗೆ ರೂ. 25ನ್ನು ಪಾವತಿಸುತ್ತಿದ್ದಾರೆ. ಬಿಜೆಪಿ ಮತ್ತು ಕಾಂಗ್ರೆಸ್ ಸರ್ಕಾರಗಳು ಪರಸ್ಪರ ದೂಷಿಸುತ್ತಾ ಜನರನ್ನು ಮೂರ್ಖರನ್ನಾಗಿ ಮಾಡುತ್ತಿವೆ. ಎಲ್ಲರಿಗೂ ತಿಳಿದಿರುವಂತೆ ಇಂಧನ ಬೆಲೆಗಳು ಹೆಚ್ಚಾದರೆ ಜನರ ಪ್ರಯಾಣ, ಸಾರಿಗೆ ವೆಚ್ಚ ಹೆಚ್ಚಳವಾಗಿ ಒಟ್ಟಾರೆ ಹಣದುಬ್ಬರಕ್ಕೆ ಕಾರಣವಾಗುತ್ತದೆ. ಜನರ ನೈಜ ಆದಾಯ ಕುಸಿಯುತ್ತಲೇ ಇದೆ, ಹೊಸ ಉದ್ಯೋಗಗಳು ಸೃಷ್ಟಿಯಾಗುತ್ತಿಲ್ಲ. ಜನ ಸಂಕಷ್ಟದಲ್ಲಿರುವ ಈ ಪರಿಸ್ಥಿತಿಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ತಮ್ಮ ತೆರಿಗೆಗಳನ್ನು ಕಡಿತ ಮಾಡಬೇಕು, ಪರ್ಯಾಯ ತೈಲ ಮೂಲಗಳನ್ನು ಹುಡುಕಬೇಕು, ತಮ್ಮ ಸ್ವಾರ್ಥಕ್ಕೆ ಯುದ್ಧ ಹೂಡದಂತೆ ಅಮೆರಿಕಾ –ಇಸ್ರೇಲ್‌ಗಳ ಮೇಲೆ ಜಾಗತಿಕ ಒತ್ತಡ ತರಬೇಕು ಎಂದು ಒತ್ತಾಯಿಸಿದರು.

## ಈಶ್ವರ ಖಂಡ್ರೆಗೆ ಡಿಸಿಎಂ ಹುದ್ದೆ ನೀಡಿ: ಬೀದರ್ ಮಠಾಧೀಶರ ಒಕ್ಕೂಟದ ಹಕ್ಕೊತ್ತಾಯ



**ಬೀದರ್, ಜೂ. 2:** ಜಿಲ್ಲೆಯ ಭಾಲ್ಕಿ ವಿಧಾನಸಭಾ ಕ್ಷೇತ್ರದ ಶಾಸಕರೂ ಆದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷ ಈಶ್ವರ ಖಂಡ್ರೆ ಅವರಿಗೆ ರಾಜ್ಯದಲ್ಲಿ ಹೊಸದಾಗಿ ಅಸ್ತಿತ್ವಕ್ಕೆ ಬರಲಿರುವ ಸರ್ಕಾರದಲ್ಲಿ ಉಪಮುಖ್ಯಮಂತ್ರಿ (ಡಿಸಿಎಂ) ಹುದ್ದೆ ನೀಡಬೇಕೆಂದು ಬೀದರ್ ಜಿಲ್ಲಾ ಮಠಾಧೀಶರ ಒಕ್ಕೂಟ ಆಗ್ರಹಿಸಿದೆ.

ಜಿಲ್ಲೆಯ ವಿವಿಧ ಮಠಾಧೀಶರು ನಗರದಲ್ಲಿ ಶನಿವಾರ ಜಂಟಿ ಪತ್ರಿಕಾಗೋಷ್ಠಿ ನಡೆಸಿ, ಈ ಹಕ್ಕೊತ್ತಾಯ ಮಾಡಿದರು. ಜಾತಿ, ಧರ್ಮ, ಮತ, ಪಂಥಗಳ ಭೇದವಿಲ್ಲದೆ ಸರ್ವರನ್ನೂ ಜೊತೆಗೆ ಕೊಂಡೊಯ್ಯುವ ಗುಣ ಈಶ್ವರ ಖಂಡ್ರೆ ಅವರಲ್ಲಿದೆ. ಡಿ.ಕೆ.ಶಿವಕುಮಾರ್ ಅವರ ಸಚಿವ ಸಂಪುಟದಲ್ಲಿ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು. ಇದರಿಂದ ಕಲ್ಯಾಣ ಕರ್ನಾಟಕಕ್ಕೆ ಆದ್ಯತೆ ನೀಡಿದಂತಾಗುತ್ತದೆ ಎಂದು ತಿಳಿಸಿದರು.

ಖಂಡ್ರೆ ಅವರ ಸದಾ ಜನಸೇವೆಯನ್ನು ಮೈಗೂಡಿಸಿಕೊಂಡು ತನಗೆ ನೀಡಿದ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸುತ್ತಿದ್ದಾರೆ. ಹೀಗಾಗಿ ಲಿಂಗಾಯತ ಕೋಟಾದಲ್ಲಿ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು. ಈಶ್ವರ ಖಂಡ್ರೆಯವರನ್ನು ಉಪಮುಖ್ಯಮಂತ್ರಿ ಮಾಡಿದರೆ ಬೀದರ್ ಜಿಲ್ಲೆ ಸೇರಿದಂತೆ ಕಲ್ಯಾಣ ಕರ್ನಾಟಕ ಭಾಗದಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳಾಗುತ್ತವೆ. ಬೀದರ? ಜಿಲ್ಲೆಗೂ ಹೆಚ್ಚು ಪ್ರಾತಿನಿಧ್ಯ ದೊರಕಿದಂತಾಗುತ್ತದೆ.

ಬೀದರ್ ಜಿಲ್ಲೆಗೆ ಖಂಡ್ರೆ ಮತ್ತು ನಾಗಮಾರಪಳ್ಳಿ ಸೇರಿದಂತೆ ಹಲವರ ಕೊಡುಗೆ ಅಪಾರವಾಗಿದೆ. ಅದರಲ್ಲೂ ಸಚಿವ ಈಶ್ವರ ಖಂಡ್ರೆಯವರು ಸರ್ವ ಸಮಾಜವನ್ನು ಪ್ರತಿನಿಧಿಸುವ ಧೀಮಂತ ನಾಯಕರಾಗಿದ್ದಾರೆ. ಅವರಿಗೆ ಡಿಸಿಎಂ ಮಾಡುವುದರ ಮೂಲಕ ಈ ಭಾಗದ ಏಳಿಗೆಗೆ ನಾಂದಿ ಹಾಡಬೇಕು ಎಂದು ಆಗ್ರಹಿಸಿದರು.

## ಲಕ್ಷ್ಮೀ ಹೆಬ್ಬಾಳ್ಕರ್‌ಗೆ ಡಿಸಿಎಂ ಸ್ಥಾನಕ್ಕಾಗಿ ಮಹಾಲಕ್ಷ್ಮೀ ದೇವಿಗೆ ಕಾರ್ಯಕರ್ತರಿಂದ ಪೂಜೆ



**ಬೆಳಗಾವಿ, ಜೂ.2–** ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಮಾಜಿ ಸಚಿವೆ ಹಾಗೂ ಬೆಳಗಾವಿ ಗ್ರಾಮೀಣ ಕ್ಷೇತ್ರದ ಶಾಸಕಿ ಲಕ್ಷ್ಮೀ ಹೆಬ್ಬಾಳಕರ ಅವರಿಗೆ ಉಪ 'ಮುಖ್ಯಮಂತ್ರಿ ಸ್ಥಾನ ಸಿಗಲಿ ಎಂದು ಕಾಂಗ್ರೆಸ್ ಕಾರ್ಯಕರ್ತರು ತಾಲೂಕಿನ ಸುಳೇಭಾವಿ ಗ್ರಾಮದ ಶ್ರೀಮಹಾಲಕ್ಷ್ಮೀ ದೇವಿಗೆ ಉಡಿ ತುಂಬುವ ಮೂಲಕ ವಿಶೇಷ ಪೂಜೆ ಸಲ್ಲಿಸಿದರು.

ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಲಿರುವ ಡಿಕೆ ಶಿವಕುಮಾರ ಅವರ ಸಚಿವ ಸಂಪುಟದಲ್ಲಿ ಲಕ್ಷ್ಮೀ ಹೆಬ್ಬಾಳಕರ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ಸಿಗಲಿ ಎಂದು ಶ್ರೀ ಮಹಾಲಕ್ಷ್ಮೀ ದೇವಿಗೆ ಉಡಿ ತುಂಬುವ ಮೂಲಕ ಅಭಿಷೇಕ ನಡೆಸಿ ವಿಶೇಷ ಪೂಜೆ ಸಲ್ಲಿಸಲಾಯಿತು.

ಲಕ್ಷ್ಮೀ ಹೆಬ್ಬಾಳಕರ ಅವರು ಎರಡು ಸಲ ಶಾಸಕರಾಗಿ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಚಿವರಾಗಿ ರಾಜ್ಯದ ಸೇವೆ ಸಲ್ಲಿಸಿದ್ದಾರೆ.

ಗೃಹಲಕ್ಷ್ಮೀ ಯೋಜನೆ ಮೂಲಕ ಹೆಬ್ಬಾಳಕರ ಪ್ರತಿಯೊಬ್ಬರ ಮನೆಯಲ್ಲೂ ಹೆಸರು ವಾಸಿಯಾಗಿದ್ದಾರೆ. ಇನ್ನು ಮುಂದೆ ಇನ್ನೂ ಹೆಚ್ಚಿನ ರಾಜ್ಯದ ಸೇವೆ ಸಲ್ಲಿಸಲು ಹೆಬ್ಬಾಳಕರ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ಸಿಗಲಿ ಎಂದು ಪ್ರಾರ್ಥನೆ ಸಲ್ಲಿಸಿದರು.

### ಪ್ರಬಂಧ ಸ್ಪರ್ಧೆಗೆ ಪ್ರವೇಶ ಸಲ್ಲಿಸಲು ಜೂ.10 ಕೊನೆಯ ದಿನಾಂಕ

## ಶಾಮನೂರು ಶಿವಶಂಕರಪ್ಪ ನೆನಪಲ್ಲಿ 'ನನ್ನ ತಂದೆ ನನ್ನ ಶಕ್ತಿ' ಪ್ರಬಂಧ ಸ್ಪರ್ಧೆ



**ದಾವಣಗೆರೆ, ಜೂ.2:** ಅಮೃತ ಪುರುಷರಾದ ಲಿಂ. ಡಾ. ಶಾಮನೂರು ಶಿವಶಂಕರಪ್ಪಾಜಿಯವರ 96ನೇ ವರ್ಷದ ಜನ್ಮದಿನದ ಶುಭ ಸಂದರ್ಭದಲ್ಲಿ ಟೀಮ್ ಪ್ರಭಾ ವಿಕಾಸ್ ವತಿಯಿಂದ "ನನ್ನ ತಂದೆ, ನನ್ನ ಶಕ್ತಿ: ತಂದೆ ಸಮಾನ ವ್ಯಕ್ತಿಯ ಮೌಲ್ಯಗಳಿಂದ ಮಾರ್ಗದರ್ಶನ" ಎಂಬ ವಿಷಯದ ಮೇಲೆ ಪ್ರಬಂಧ ಸ್ಪರ್ಧೆ ಆಯೋಜಿಸಲಾಗಿದೆ.

ಸ್ಪರ್ಧೆಯಲ್ಲಿ ಭಾಗವಹಿಸುವವರು ತಮ್ಮ ಜೀವನ ರೂಪುಗೊಳ್ಳುವಲ್ಲಿ ತಂದೆ ಅಥವಾ ತಂದೆಯ ಸ್ಥಾನದಲ್ಲಿರುವ ವ್ಯಕ್ತಿಯ ಪಾತ್ರ, ಅವರಿಂದ ಕಲಿತ ಮೌಲ್ಯಗಳು, ಜೀವನ ಪಾಠಗಳು, ಪ್ರೇರಣೆ ಹಾಗೂ ಮಾರ್ಗದರ್ಶನದ ಕುರಿತು ತಮ್ಮ ವೈಯಕ್ತಿಕ ಅನುಭವಗಳನ್ನು ಪ್ರಬಂಧದ ಮೂಲಕ ವ್ಯಕ್ತಪಡಿಸಬಹುದು. ಪ್ರಬಂಧವು ಕೇವಲ ವಿವರಣಾತ್ಮಕ ವಾಗಿರದೆ, ವೈಯಕ್ತಿಕ ಅನುಭವಗಳು, ಆತ್ಮಚಿಂತನೆ, ನೈಜ ಭಾವನೆಗಳು ಹಾಗೂ ಸೃಜನ ಶೀಲತೆಯಿಂದ ಕೂಡಿರಬೇಕು. ಶಾಮನೂರು ಶಿವ ಶಂಕರಪ್ಪಾಜಿಯವರ ನಿಷ್ಠೆ, ಸರಳತೆ, ಸಮಾಜ ಸೇವೆ, ನಾಯಕತ್ವ ಮತ್ತು ಸಮುದಾಯ ಅಭಿವೃದ್ಧಿಯ ಬದ್ಧತೆ ಮುಂತಾದ ಮೌಲ್ಯಗಳಿಂದಲೂ ಪ್ರಬಂಧಕ್ಕೆ ಪ್ರೇರಣೆ ಪಡೆಯಬಹುದು.

**ಸ್ಪರ್ಧೆ ನಿಯಮಗಳು:**

ಸ್ಪರ್ಧೆಯನ್ನು ಮೂರು ವಿಭಾಗಗಳಲ್ಲಿ ನಡೆಸಲಾಗುತ್ತದೆ. 16 ವರ್ಷಗಳವರೆಗಿನವರು ವಿಭಾಗ ಎ, 17 ರಿಂದ 24 ವರ್ಷ ವಯಸ್ಸಿನವರು ವಿಭಾಗ ಬಿ ಹಾಗೂ 25 ವರ್ಷ ಮತ್ತು ಮೇಲ್ಪಟ್ಟವರು ವಿಭಾಗ 'ಸಿ'ಯಲ್ಲಿ ಭಾಗವಹಿಸಬಹುದು. ಪ್ರಬಂಧಗಳನ್ನು ಕನ್ನಡ ಅಥವಾ ಇಂಗ್ಲಿಷ್ ಭಾಷೆಯಲ್ಲಿ ಬರೆಯಬಹುದು. ವಿಭಾಗ 'ಎ'ಗೆ 300ರಿಂದ 500 ಪದಗಳು, ವಿಭಾಗ ಬಿಗೆ 500ರಿಂದ 800 ಪದಗಳು ಹಾಗೂ ವಿಭಾಗ ಸಿಗೆ 800ರಿಂದ 1000 ಪದಗಳ ಮಿತಿ ನಿಗದಿಪಡಿಸಲಾಗಿದೆ. ಪ್ರಬಂಧವು ಕೈಬರಹದಲ್ಲಿರಬೇಕು. ಎ4 ಹಾಳೆಯಲ್ಲಿ ನೀಲಿ ಅಥವಾ ಕಪ್ಪು ಮಸಿಯ ಪೆನ್ನಿನಿಂದ ಸ್ಪಷ್ಟವಾಗಿ ಮತ್ತು ಅಚ್ಚುಕಟ್ಟಾಗಿ ಬರೆಯಬೇಕು. ಟೈಪ್ ಮಾಡಿದ ಅಥವಾ ಡಿಜಿಟಲ್ ರೂಪದ ಪ್ರಬಂಧಗಳನ್ನು ಸ್ವೀಕರಿಸಲಾಗುವುದಿಲ್ಲ. ಕೃತಿಚೌರ್ಯ ಹಾಗೂ ಎಐ ಬಳಕೆಗೆ ಅವಕಾಶವಿಲ್ಲ. ಭಾಗವಹಿಸುವವರು ತಮ್ಮ ಹೆಸರು, ವಯಸ್ಸು, ಸಂಪರ್ಕ ಸಂಖ್ಯೆ ಮತ್ತು ವಿಭಾಗವನ್ನು ಕಡ್ಡಾಯವಾಗಿ ನಮೂದಿಸಬೇಕು. ಪ್ರತಿ ಪುಟದಲ್ಲೂ ಹೆಸರು ಮತ್ತು ಪುಟ ಸಂಖ್ಯೆಯನ್ನು ನಮೂದಿಸಬೇಕು. ಬರೆಯಲಾದ ಪ್ರಬಂಧವನ್ನು ಸ್ಪಷ್ಟವಾಗಿ ಸ್ಕ್ಯಾನ್ ಮಾಡಿ, ಪುಟ ಗಳನ್ನು ಸರಿಯಾದ ಕ್ರಮದಲ್ಲಿ ಜೋಡಿಸಿ ಒಂದೇ ಜೆಪಿಜಿ ಅಥವಾ ಪಿಡಿಎಫ್ ಫೈಲ್ ಆಗಿ ಸಲ್ಲಿಸಬೇಕು. ಪ್ರಬಂಧಗಳನ್ನು ಆನ್‌ಲೈನ್ ಮೂಲಕ ಮಾತ್ರ ಸಲ್ಲಿಸಬೇಕು. ಸಲ್ಲಿಸಲು ಕೊನೆಯ ದಿನಾಂಕ ಜೂನ್ 10, ರಾತ್ರಿ 10 ಗಂಟೆಯೊಳಗೆ ಕಡ್ಡಾಯವಾಗಿ ಸಲ್ಲಿಸಬೇಕು. ತಡವಾಗಿ ಬಂದ ಸಲ್ಲಿಕೆಗಳನ್ನು ಪರಿಗಣಿಸಲಾಗುವುದಿಲ್ಲ. ಪ್ರಬಂಧಗಳನ್ನು drprabhacoloursdavangere@gmail.com ಇಮೇಲ್ ವಿಳಾಸಕ್ಕೆ ಕಳುಹಿಸಬೇಕು.

## ಮುನಿಯಪ್ಪ, ಸಂತೋಷ್ ಲಾಡ್, ನಾಗೇಂದ್ರಗೆ ಸಚಿವ ಸ್ಥಾನ ನೀಡಲು ಮುಂಡರಗಿ ನಾಗರಾಜ್ ಒತ್ತಾಯ



**ಬಳ್ಳಾರಿ, ಜೂ 02:** ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅಧಿಕಾರ ಸ್ವೀಕರಿಸುತ್ತಿರುವ ಹಿನ್ನೆಲೆಯಲ್ಲಿ ಮಾಜಿ ಸಚಿವರಾದ ಕೆ.ಎಚ್. ಮುನಿಯಪ್ಪ, ಸಂತೋಷ್ ಎಸ್. ಲಾಡ್ ಹಾಗೂ ಬಿ. ನಾಗೇಂದ್ರ ಅವರಿಗೆ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕು ಎಂದು ಲಿಡ್ಕರ್ ಅಧ್ಯಕ್ಷ ಮುಂಡರಗಿ ನಾಗರಾಜ್ ಮನವಿ ಮಾಡಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ದಲಿತ ಸಮುದಾಯದ ಪ್ರಭಾವಿ ನಾಯಕರು ಹಾಗೂ ಕರ್ನಾಟಕ ಮಾದರ ಮಹಾಸಭಾದ ರಾಜ್ಯಾಧ್ಯಕ್ಷ ರಾಗಿರುವ ಕೆ.ಎಚ್. ಮುನಿಯಪ್ಪ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

ಕಾರ್ಮಿಕ ಇಲಾಖೆಯ ಸಚಿವರಾಗಿ ಕಾರ್ಯ ನಿರ್ವಹಿಸಿದ್ದ ವೇಳೆ ಹಲವು ಜನಪರ ಯೋಜನೆಗಳನ್ನು ರೂಪಿಸಿ ಯಶಸ್ವಿಯಾಗಿ ಜಾರಿಗೊಳಿಸಿದ್ದ ಸಂತೋಷ್ ಎಸ್. ಲಾಡ್ ಅವರಿಗೂ ಸಂಪುಟದಲ್ಲಿ ಅವಕಾಶ ಕಲ್ಪಿಸಬೇಕು ಎಂದು ತಿಳಿಸಿದ್ದಾರೆ.

ಮಾಜಿ ಸಚಿವ ಹಾಗೂ ಬಳ್ಳಾರಿ ಜಿಲ್ಲೆಯ ಹಿರಿಯ ಕಾಂಗ್ರೆಸ್ ಮುಖಂಡ ಬಿ. ನಾಗೇಂದ್ರ ಅವರಿಗೂ ಸಚಿವ ಸ್ಥಾನ ನೀಡುವ ಮೂಲಕ ಜಿಲ್ಲೆಗೆ ಸಮರ್ಪಕ ಪ್ರಾತಿನಿಧ್ಯ ಒದಗಿಸಬೇಕು ಎಂದು ಆಗ್ರಹಿಸಿದ್ದಾರೆ. ಈ ಮೂವರು ನಾಯಕರ ಅನುಭವ ಮತ್ತು ಸೇವೆಯನ್ನು ಪರಿಗಣಿಸಿ ಸಚಿವ ಸಂಪುಟದಲ್ಲಿ ಸ್ಥಾನ ನೀಡುವಂತೆ ಕಾಂಗ್ರೆಸ್ ಹೈಕಮಾಂಡ್ ಹಾಗೂ ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ನಾಗರಾಜ್ ಮನವಿ ಮಾಡಿದ್ದಾರೆ.

### ಮುಂಗಾರು ಹಂಗಾಮು ಸಿದ್ಧತೆ: ಬಳ್ಳಾರಿ ಜಿಲ್ಲೆಯಲ್ಲಿ ಚುರುಕುಗೊಂಡ ಕೃಷಿ ಚಟುವಟಿಕೆ

## ಸಹಾಯಧನದಲ್ಲಿ ಬಿತ್ತನೆಬೀಜ ವಿತರಣೆಗೆ ಕೃಷಿ ಇಲಾಖೆ ಸಜ್ಜು



**ಬಳ್ಳಾರಿ,ಜೂ.2.**ಜಿಲ್ಲೆಯಲ್ಲಿ ಮುಂಗಾರು ಪೂರ್ವದಲ್ಲಿ ಹಲವೆಡೆ ಉತ್ತಮ ಮಳೆಯಾಗುತ್ತಿರುವುದರಿಂದ ಕೃಷಿ ಚಟುವಟಿಕೆಗಳು ಸಾಗರೋತ್ತರ ವೇಗವನ್ನು ಪಡೆದುಕೊಂಡಿದ್ದು, ರೈತ ಸಮುದಾಯದಲ್ಲಿ ಮಂದಹಾಸ ಮೂಡಿಸಿದೆ.

ಪ್ರಸ್ತುತ ಲಭ್ಯವಿರುವ ಉತ್ತಮ ಮಳೆಯ ಹಿನ್ನೆಲೆಯಲ್ಲಿ ಜಿಲ್ಲೆಯ ರೈತರು ತಮ್ಮ ಕೃಷಿ ಭೂಮಿಯನ್ನು ಹದಗೊಳಿಸುವ ಕಾರ್ಯಗಳಲ್ಲಿ ಬಿಡುವಿಲ್ಲದೆ ತೊಡಗಿಸಿಕೊಂಡಿದ್ದಾರೆ. ರಂಟೆ–ಕುಂಟೆ ಹೊಡೆಯುವುದು, ರೋಟ ವೇಟರ್ ಹಾಗೂ ಎತ್ತುಗಳ ನೇಗಿಲು ಬಳಸಿ ಭೂಮಿಯನ್ನು ಹದಗೊಳಿಸುವ ದೃಶ್ಯಗಳು ಜಿಲ್ಲೆಯಾದ್ಯಂತ ಸಾಮಾನ್ಯ ವಾಗುತ್ತಿವೆ.

ಜಿಲ್ಲೆಯ ವಾರ್ಷಿಕ ವಾಡಿಕೆ ಮಳೆಯು 599.0 ಮಿ.ಮೀ ಆಗಿರುತ್ತದೆ. ಮೇ 31ರ ಅಂತ್ಯಕ್ಕೆ ಸರಾಸರಿ ವಾಡಿಕೆ ಮಳೆಯು 74.4 ಮಿ.ಮೀ ಇರಬೇಕಾಗಿದ್ದು, ಪ್ರಸ್ತುತ 72.4 ಮಿ.ಮೀ ನಷ್ಟು ಉತ್ತಮ ಮಳೆಯಾಗಿರುತ್ತದೆ ಎಂದು ಜಂಟಿ ಕೃಷಿ ನಿರ್ದೇಶಕ ಟಿ. ಸೋಮಸುಂದರ್ ಅವರು ತಿಳಿಸಿದ್ದಾರೆ.

**1.59 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ:**ಪ್ರಸ್ತಕ ಸಾಲಿನ ಮುಂಗಾರು ಹಂಗಾಮಿಗೆ ಜಿಲ್ಲೆಯಲ್ಲಿ ಒಟ್ಟು 1,59,546 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡುವ ಗುರಿಯನ್ನು ಹೊಂದಲಾಗಿದೆ. ಪ್ರಮುಖ ಬೆಳೆಗಳ ನಿರೀಕ್ಷಿತ ಬಿತ್ತನೆ ವಿಸ್ತೀರ್ಣದ ವಿವರ ಹೀಗಿದೆ.

ಭತ್ತ– 87,741 ಹೆಕ್ಟೇರ್, ಮೆಕ್ಕಜೋಳ–26,000 ಹೆಕ್ಟೇರ್, ಹತ್ತಿ– 20,000 ಹೆಕ್ಟೇರ್, ಸಜ್ಜೆ–10,000 ಹೆಕ್ಟೇರ್, ತೊಗರಿ– 7,224 ಹೆಕ್ಟೇರ್, ತೃಣಧಾನ್ಯಗಳು– 2,508 ಹೆಕ್ಟೇರ್, ಶೇಂಗಾ (ನೆಲಕಡಲೆ)–1,500 ಹೆಕ್ಟೇರ್, ಸೂರ್ಯಕಾಂತಿ–1,200 ಹೆಕ್ಟೇರ್, ಕಬ್ಬು– 800 ಹೆಕ್ಟೇರ್.

**15 ಕೇಂದ್ರಗಳ ಮೂಲಕ ರಿಯಾಯಿತಿ ದರದಲ್ಲಿ ಬೀಜ ವಿತರಣೆ:**

ರೈತರ ಕೃಷಿ ಚಟುವಟಿಕೆಗಳಿಗೆ ಪೂರಕವಾಗಿ ಕೃಷಿ ಇಲಾಖೆಯು ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ಪೂರೈಸಲು ಸಂಪೂರ್ಣ ಸಜ್ಜಾಗಿದೆ.

ಜಿಲ್ಲೆಯ 13 ರೈತ ಸಂಪರ್ಕ ಕೇಂದ್ರಗಳು ಮತ್ತು 02 ಹೆಚ್ಚುವರಿ ಕೇಂದ್ರಗಳು ಸೇರಿದಂತೆ ಒಟ್ಟು 15 ಕೇಂದ್ರಗಳ ಮೂಲಕ ವಿವಿಧ ಬೆಳೆಗಳ ಬಿತ್ತನೆ ಬೀಜಗಳನ್ನು ಸಹಾಯಧನದಲ್ಲಿ ವಿತರಿಸಲು ವ್ಯವಸ್ಥೆ ಮಾಡಿಕೊಳ್ಳಲಾಗಿದೆ.

ಜಿಲ್ಲೆಗೆ ಮುಂಗಾರು ಹಂಗಾಮಿನಲ್ಲಿ ಒಟ್ಟು 7,115 ಕ್ವಿಂಟಾಲ್ ಬಿತ್ತನೆ ಬೀಜದ ಬೇಡಿಕೆ ಇದ್ದು, ಸದ್ಯ 10,415 ಕ್ವಿಂಟಾಲ್‌ನಷ್ಟು ದೊಡ್ಡ ಪ್ರಮಾಣದ ದಾಸ್ತಾನು ಲಭ್ಯವಿದೆ.

## ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳ ಶುಭ ಹಾರೈಕೆ



**ರಂಭಾಪುರಿ ಪೀಠ (ಬಾಳೆಹೊನ್ನೂರು) ಜೂನ್ 2:** ಜೂನ್ 3ರಂದು ಕರ್ನಾಟಕ ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಲಿರುವ ಡಿ.ಕೆ.ಶಿವಕುಮಾರ್ ಅವರಿಗೆ ಬಾಳೆಹೊನ್ನೂರು ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಶುಭ ಹಾರೈಸಿದ್ದಾರೆ.

ಡಿ.ಕೆ.ಶಿವಕುಮಾರ್ ಅವರು ಈಗಾಗಲೇ ರಾಜ್ಯದ ವಿವಿಧ ಖಾತೆಗಳ ಸಚಿವರಾಗಿ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದ ಅಪಾರ ಅನುಭವ ಹೊಂದಿದ್ದಾರೆ. ಬಾಳೆಹೊನ್ನೂರು ಲಿಂ. ಶ್ರೀಮದ್ ರಂಭಾಪುರಿ ವೀರಗಂಗಾಧರ ಜಗದ್ಗುರುಗಳ ಆರಾಧಕರಾಗಿ ಅವರ ಆಶೀರ್ವಾದದಿಂದ ಉನ್ನತ ಸ್ಥಾನ ಅಲಂಕರಿಸಲಿದ್ದಾರೆ. ಅವರ ಮುಂದಿನ ಅವಧಿಯಲ್ಲಿ ರಾಜ್ಯದಲ್ಲಿ ಜನಕಲ್ಯಾಣ ಯೋಜನೆಗಳು ಜಾರಿಗೆ ಬರಲಿ. ಜಾತಿಗಳಿಗೆ ಆದ್ಯತೆ ಕೊಡದೇ ಆರ್ಥಿಕವಾಗಿ ಹಿಂದುಳಿದ ಎಲ್ಲ ವರ್ಗಗಳ ಜನತೆಗೆ ಅವರ ಯೋಜನೆಗಳು ತಲುಪುವಂತಾಗಲಿ. ಕೃಷಿಕರಿಗೆ ಅನುಕೂಲವಾಗುವ ಕಾರ್ಯಕ್ರಮಗಳಿಗೆ ಪ್ರಾಮುಖ್ಯತೆ ನೀಡಲಿ. ಸ್ಥಗಿತಗೊಂಡಿರುವ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡುವ ಅಗತ್ಯವಿದೆ. ಒಟ್ಟಾರೆ ಡಿ.ಕೆ.ಶಿವಕುಮಾರ್ ಅವಧಿಯಲ್ಲಿ ರಾಜ್ಯ ಸರ್ವತೋಮುಖ ಅಭಿವೃದ್ಧಿ ಹೊಂದಲಿ ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದ್ದಾರೆ.

## ನಿಕೋಟಿನ್ - ತಂಬಾಕು ವ್ಯಸನದ ಆಕರ್ಷಣೀಯ ಮುಖವಾಡ ತೆರವುಗೊಳಿಸಿ: ವ್ಯಸನದ ವಿರುದ್ಧ ಹೋರಾಟ"




**ಬಳ್ಳಾರಿ, ಜೂ.2:** ವಿಶ್ವ ತಂಬಾಕು ಮುಕ್ತ ದಿನಾಚರಣೆ 2026ರ ಅಂಗವಾಗಿ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ ಬಳ್ಳಾರಿಯ ಸಮಾಜಶಾಸ್ತ್ರ ವಿಭಾಗ, ಭಾರತೀಯ ಸೇವಾ ಸಂಸ್ಥೆ ಹಾಗೂ ಫ್ಯಾಮಿಲಿ ಪ್ಲಾನಿಂಗ್ ಅಸೋಸಿಯೇಷನ್ ಆಫ್ ಇಂಡಿಯಾ ಬಳ್ಳಾರಿ ಶಾಖೆ ಜೊತೆಗೂಡಿ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿ ಹಾಗೂ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ಫ್ಯಾಮಿಲಿ ಪ್ಲಾನಿಂಗ್ ಅಸೋಸಿಯೇಷನ್ ಆಫ್ ಇಂಡಿಯಾ ಬಳ್ಳಾರಿ ಶಾಖೆಯ ಅಧ್ಯಕ್ಷ ಟಿ.ಜಿ.ವಿಠಲ್ ಅವರು ಮಾತನಾಡಿ, ಪ್ರಸ್ತುತ ಸಮಾಜದಲ್ಲಿ ಮಾದಕ ವಸ್ತುಗಳ ದಂಧೆ ಹಾಗೂ ತಂಬಾಕು ಬಳಕೆಯು ಯುವಜನತೆಯನ್ನು ಹೇಗೆ ದಾರಿ ತಪ್ಪಿಸುತ್ತಿದೆ ಎಂಬುದರ ಕುರಿತು ವಿವರಿಸಿದರು.

ತಮ್ಮ ಜೀವನದ ಅನುಭವಗಳನ್ನು ಹಂಚಿಕೊಳ್ಳುತ್ತಾ, ಯುವಕರು ವ್ಯಸನದ ವಿರುದ್ಧ ಜಾಗೃತರಾಗಿ ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆಗೆ ಮುಂದಾಗಬೇಕು ಎಂದು ಕರೆ ನೀಡಿದರು. ಯುವಕರೇ, ವ್ಯಸನ ಮುಕ್ತ ಸಮಾಜದತ್ತ ಹೆಜ್ಜೆ ಹಾಕಿ ಎಂಬ ಸಂದೇಶವನ್ನು ವಿದ್ಯಾರ್ಥಿಗಳಿಗೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಮಾಜಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಡಾ. ಕುಮಾರ್ ಅವರು ಮಾತನಾಡಿ, ಸಮಾಜವನ್ನು ಹಾಳು ಮಾಡುವ ಯಾವುದೇ ದುಷ್ಪ್ರವೃತ್ತಿಗಳ ವಿರುದ್ಧ ಯುವಕರು ತಕ್ಷಣ ಪ್ರತಿಕ್ರಿಯಿಸಿ, ಜವಾಬ್ದಾರಿಯುತ ನಾಗರಿಕರಾಗಿ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು. ವಿಶೇಷವಾಗಿ ಸಮಾಜಶಾಸ್ತ್ರದ ವಿದ್ಯಾರ್ಥಿಗಳು ಸಮಾಜದಲ್ಲಿನ ಸಮಸ್ಯೆಗಳನ್ನು ಗುರುತಿಸಿ, ಅವುಗಳ ಮೂಲ ಕಾರಣಗಳನ್ನು ಅರ್ಥ ಮಾಡಿಕೊಂಡು, ಜನರಲ್ಲಿ ಜಾಗೃತಿ ಮೂಡಿಸುವಲ್ಲಿ ಪ್ರಮುಖ ಪಾತ್ರ ವಹಿಸಬೇಕು ಎಂದು ಹೇಳಿದರು. ಮಾದಕ ವಸ್ತುಗಳ ಬಳಕೆ, ತಂಬಾಕು ವ್ಯಸನ, ಬಾಲ್ಯವಿವಾಹ, ಲಿಂಗ ತಾರತಮ್ಯ ಹಾಗೂ ಇತರ ಸಾಮಾಜಿಕ ಪಿಡುಗುಗಳ ವಿರುದ್ಧ ಸಮುದಾಯದೊಂದಿಗೆ ಕೈಜೋಡಿಸಿ ಕೆಲಸ ಮಾಡುವುದು ಸಮಾಜಶಾಸ್ತ್ರದ ವಿದ್ಯಾರ್ಥಿಗಳ ಪ್ರಮುಖ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

## ಮಳೆಗಾಲದ ಹಿನ್ನೆಲೆ : ಸಮುದ್ರದಲ್ಲಿ ಜಲಕ್ರೀಡೆಗೆ ಬ್ರೇಕ್ ಹಾಕಿದ ಜಿಲ್ಲಾಡಳಿತ



**ಗೋಕರ್ಣ, ಜೂ.2–** ಮಳೆಗಾಲದ ನಿಮಿತ್ತ ಪ್ರವಾಸಿಗರ ಮತ್ತು ಮೀನುಗಾರರ ಸುರಕ್ಷತೆ ದೃಷ್ಟಿಯಿಂದ ಜಲಕ್ರೀಡೆ ಹಾಗೂ ಸಮುದ್ರ ಆಧಾರಿತ ಸಾಹಸ ಚಟುವಟಿಕೆಗಳನ್ನು ಜೂ.1 ರಿಂದಲೇ ಜಿಲ್ಲಾಡಳಿತ ನಿಷೇಧಿಸಿ ಆದೇಶ ಹೊರಡಿಸಿದೆ. ಉತ್ತರ ಕನ್ನಡದಲ್ಲಿ ಮೀನುಗಾರಿಕೆ ಎಷ್ಟು ಪ್ರಬಲವಾಗಿದೆಯೋ ಅಷ್ಟೇ ಪ್ರವಾಸೋದ್ಯಮ ಚಟುವಟಿಕೆ ಕೂಡ ಪ್ರಬಲವಾಗಿದೆ. ಮುಖ್ಯವಾಗಿ ಗೋಕರ್ಣ, ಮುರ್ಡೇಶ್ವರ ಇದು ಪ್ರವಾಸಿಗರಿಗೆ ಅಚ್ಚುಮೆಚ್ಚಿನ ತಾಣವಾಗಿದೆ.

ಬಹುತೇಕ ಪ್ರವಾಸಿಗರು ಗೋಕರ್ಣದ ವಿವಿಧ ಬೀಚ್‌ಗಳಿಗೆ ಆಗಮಿಸುತ್ತಿದ್ದರು. ಹಾಗೂ ಮುರ್ಡೇಶ್ವರಕ್ಕೂ ಕೂಡ ಹೆಚ್ಚಿನ ಪ್ರವಾಸಿಗರು ತೆರಳಿ ಅಲ್ಲಿ ಪ್ರವಾಸಿ ಬೋಟ್ ಮೂಲಕ ಜಲಕ್ರೀಡೆ, ಸ್ಕೂಬಾ ಡೈವಿಂಗ್, ಹಾಗೇ ನದಿಯ ಹಿನ್ನೀರಿನಲ್ಲಿ ಪ್ರವಾಸಿಗರು ಬೋಟ್ ಮೂಲಕ ತೆರಳಿ ಮೋಜು ಮಾಡುತ್ತಿದ್ದರು. ಆದರೆ ಮಳೆಗಾಲ ಇದ್ದರಿಂದ ಯಾವ ಕ್ಷಣದಲ್ಲಾದರೂ ಬಾರಿ ಗಾಳಿ ಉಂಟಾಗುತ್ತದೆ. ಇದರಿಂದಾಗಿ ನೀರಿನ ಅಸಮತೋಲನ ಉಂಟಾಗುತ್ತದೆ. ಇನ್ನು ಮಳೆಯು ಇರುವುದರಿಂದ ಯಾವುದೇ ಕ್ಷಣದಲ್ಲಿ ಅಪಘಾತ ಕಟ್ಟಿಟ್ಟ ಬುತ್ತಿಯಾಗಿದೆ.

ಈ ಎಲ್ಲ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಲಕ್ಷ್ಮೀಪ್ರಿಯ ಅವರು ಈಗಾಗಲೇ ವಿವಿಧ ಇಲಾಖೆಗಳಿಗೆ ಕಟ್ಟುನಿಟ್ಟಿನ ಕ್ರಮಕ್ಕಾಗಿ ಸೂಚನೆ ನೀಡಿದ್ದಾರೆ. ಒಂದುವೇಳೆ ಆದೇಶವನ್ನು ಉಲ್ಲಂಘಿಸಿದರೆ ಅಂತವರ ವಿರುದ್ಧ ಆಪತ್ತು ನಿರ್ವಹಣಾ ಕಾಯ್ದೆಯಡಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆಯನ್ನು ನೀಡಿದ್ದಾರೆ. ಇದರಿಂದಾಗಿ ಪ್ರವಾಸಿಗರು ಸಮುದ್ರವನ್ನು ಕೂಡ ದೂರದಿಂದಲೇ ನಿಂತು ನೋಡಬೇಕಾದರೆ ಇನ್ನು ಪ್ರವಾಸಿ ಬೋಟ್‌ನವರು 4 ತಿಂಗಳವರೆಗೂ ಪರ್ಯಾಯ ಕೆಲಸವನ್ನು ನೋಡಿಕೊಳ್ಳಬೇಕಾಗಿದೆ.

## ಎಸ್‌ಐಆರ್ ವಿರೋಧಿಸಿ ಪ್ರತಿಭಟನೆ, ಡಿಸಿ ಕಚೇರಿಗೆ ಮನವಿ ಸಲ್ಲಿಕೆ



**ಬೀದರ್, ಜೂ. 2:** ಮತದಾರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಯನ್ನು (ಎಸ್‌ಐಆರ್) ವಿರೋಧಿಸಿ ವಿವಿಧ ಸಂಘಟನೆಗಳು ನಗರದಲ್ಲಿ ಪ್ರತಿಭಟನೆ ನಡೆಸಿದವು.

'ಎದ್ದೇಳು ಕರ್ನಾಟಕ' ಸಂಘಟನೆ, ಎಸ್‌ಐಆರ್ ವಿರೋಧಿ ಕರ್ನಾಟಕ, ಪ್ರಗತಿಪರ ಹಾಗೂ ಜಾತ್ಯತೀತ ಪಕ್ಷಗಳ ಒಕ್ಕೂಟ ಹಾಗೂ ದಲಿತ ಸಂಘರ್ಷ ಸಮಿತಿ ಪ್ರತ್ಯೇಕವಾಗಿ ಪ್ರತಿಭಟನೆ ನಡೆಸಿದವು.

'ಎದ್ದೇಳು ಕರ್ನಾಟಕ' ಸಂಘಟನೆ, ಎಸ್‌ಐಆರ್ ವಿರೋಧಿ ಕರ್ನಾಟಕ, ಪ್ರಗತಿಪರ ಹಾಗೂ ಜಾತ್ಯತೀತ ಪಕ್ಷಗಳ ಒಕ್ಕೂಟದ ಪದಾಧಿಕಾರಿಗಳು ನಗರದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಧರಣಿ ನಡೆಸಿ, ಬಳಿಕ ???ಯಾಲಿಯಲ್ಲಿ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಮುಖ್ಯಮಂತ್ರಿ, ರಾಜ್ಯ ಚುನಾವಣಾಧಿಕಾರಿಗಳ ಹೆಸರಿಗೆ ಬರೆದ ಮನವಿ ಪತ್ರವನ್ನು ಸಲ್ಲಿಸಿದರು.

ಇನ್ನು, ದಸಂಸ ಪದಾಧಿಕಾರಿಗಳು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರಿಗೆ ಮನವಿ ಪತ್ರ ಸಲ್ಲಿಕೆ ಮಾಡಿದರು.

ಎಸ್‌ಐಆರ್ ಎಂಬುದು ಅಸಾಂವಿಧಾನಿಕ, ಅವೈಜ್ಞಾನಿಕ, ದೋಷಪೂರಿತ ಹಾಗೂ ದುರುದ್ದೇಶಪೂರಿತ ಮತದಾರರ ಪಟ್ಟಿಯ ಪರಿಷ್ಕರಣಾ ಪ್ರಕ್ರಿಯೆಯಾಗಿದೆ. ಸಾಮಾನ್ಯ ಮತದಾರರ ಹಕ್ಕುಗಳನ್ನು ಕಸಿಯುವ ಪ್ರಯತ್ನ ನಡೆಯುತ್ತಿದೆ. ಮತದಾರರ ಪಟ್ಟಿಯ ಪರಿಷ್ಕರಣೆ ಹೆಸರಿನಲ್ಲಿ ಬಡವರು, ಕಾರ್ಮಿಕರು, ಗ್ರಾಮೀಣ ಪ್ರದೇಶದ ಜನರು, ಅಲ್ಪಸಂಖ್ಯಾತರು ಹಾಗೂ ಹಿಂದುಳಿದ ವರ್ಗಗಳ ಜನರ ಮತದಾನದ ಹಕ್ಕುಗಳನ್ನು ದುರ್ಬಲಗೊಳಿಸುವ ಸಂಚು ನಡೆಯುತ್ತಿದೆ. ಸರ್ಕಾರ ಹಾಗೂ ಚುನಾವಣಾ ಆಯೋಗವು ಜನರಲ್ಲಿ ಗೊಂದಲ ಸೃಷ್ಟಿಸುವ ಬದಲು ಪಾರದರ್ಶಕ ಮತ್ತು ಸಂವಿಧಾನಬದ್ಧ ವಿಧಾನಗಳನ್ನು ಅನುಸರಿಸಬೇಕು ಎಂದರು.

# ಪ್ರಧಾನಿ ಮೋದಿ ಬ್ರಾಹ್ಮಣರಾ? ಸಿದ್ದರಾಮಯ್ಯಗೆ ಛಲವಾದಿ ಸವಾಲು

**ಕಲಬುರಗಿ, ಜೂ. 2:** ಅಹಿಂದ ಜಪ ಮಾಡುವ ಬ್ರಾಹ್ಮಣ ವಿರೋಧಿ ಸಿದ್ದರಾಮಯ್ಯ, ದೇಶದ ಪ್ರಧಾನಿ ಮೋದಿ ಅವರನ್ನು ನಿರಂತರ ನಿಂದಿಸುತ್ತಾರಲ್ಲ, ಪ್ರಧಾನಿ ಬ್ರಾಹ್ಮಣರೇನು? ಅವರು ಸಹ ಅಹಿಂದ ವರ್ಗಕ್ಕೆ ಸೇರಿದವರಲ್ಲವೇ? ಸಿದ್ದರಾಮಯ್ಯನ ಅಹಿಂದ ಎಲ್ಲವೂ ಬರೀ ತೋರಿಕೆ ಮಾತ್ರ. ಕೇವಲ ಸ್ವಾರ್ಥ ಮತ್ತು ಕುಟುಂಬ ರಾಜಕಾರಣ ಮಾಡುವ ಸಿದ್ದರಾಮಯ್ಯಗೆ ತಿಳಿದಿರಲಿ, ಮೋದಿ ಎಂದಿಗೂ ಕುಟುಮಬ ರಾಜಕಾರಣ ಮಾಡಿಲ್ಲ. ಅವರ ಕುಟುಂಬದವರಾರು ಮೋದಿ ಹೆಸರು ಹೇಳಿಕೊಂಡು ರಾಜಕೀಯ ಮಾಡುತ್ತಿಲ್ಲ. ಆದರೆ ಸಿದ್ದರಾಮಯ್ಯನ ಮುಖವಾಣಿಯಾಗಿ ಅವರ ಪುತ್ರ ಡಾ.ಯತೀಂದ್ರ ನಿರಂತರ ರಾಜಕೀಯ ಮಾಡುತ್ತಿರುವುದು ಇಡೀ ಕರ್ನಾಟಕದ ಜನತೆ ನೋಡುತ್ತಿದ್ದಾರೆ. ಇವರದ್ದ ಸೀಮೆಯ ಸಮಾಜವಾದಿ? ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಪ್ರಶ್ನಿಸಿದರು.

ನಗರದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರಿಗೆ ಯಾವ ವ್ಯಕ್ತಿಯ ಮೇಲೂ ಗೌರವವಿಲ್ಲ. ಅಧಿಕಾರದ ಮದ ನೆತ್ತಿಗೇರಿದಂತೆ ಹಿರಿಯ ಅಧಿಕಾರಿಗಳಿರಲಿ, ಹಿರಿಯ ನಾಯಕರಿರಲಿ, ರಾಷ್ಟ್ರಪತಿಗಳಿಗೂ ಅಹಂಕಾರದಿಂದಲೇ ಆಕೆ ಎಂದು ಸಂಬೋಧಿಸಿ ಮಾತಾಡುತ್ತಾರೆ. ತಾನು ಸಿಎಂ ಆದ ಮಾತ್ರಕ್ಕೆ ಯಾರಿಗೆ ಏನು ಬೇಕಾದರೂ ಮಾತನಾಡಬಹುದು ಎನ್ನುವುದು ಅವರ ನಿಲುವಾಗಿದೆ. ಆದರೆ ಈ ಸಿಎಂ ಪದವಿ ನೀಡಿದ್ದು ರಾಜ್ಯದ ಜನತೆ. ಯಾವಾಗ



ಬೇಕಾದರೂ ಕಿತ್ತುಕೊಳ್ಳಬಹುದು ಎಂಬುದನ್ನು ತಿಳಿದುಕೊಳ್ಳಬೇಕು. ಇಂಥ ದುರಹಂಕಾರದ ವ್ಯವಸ್ಥೆ ಹೋಗಬೇಕು ಎಂದು ರಾಜ್ಯದ ಜನ ಬಯಸಿದ್ದಾರೆ ಎಂದರು.

ರಾಜ್ಯದಲ್ಲಿ ಈಗ ಕಾಂಗ್ರೆಸ್ ಹೈಕಮಾಂಡ್ ಸಿದ್ದರಾಮಯ್ಯ ದುರಹಂಕಾರಕ್ಕೆ ಕಡಿವಾಣ ಹಾಕಿ ರಾಜೀನಾಮೆ ಕೊಡಿಸಿದೆ. ಇದರಿಂದ ತೀವ್ರ ಮುಖಭಂಗ ಉಂಟಾಗಿರುವ ಸಿದ್ದರಾಮಯ್ಯ, ಕಾಂಗ್ರೆಸ್ ಸರ್ಕಾರ ಹೆಚ್ಚು ದಿನ ನಡೆಯಲು ಬಿಡುವುದಿಲ್ಲ. ಡಿಕೆಶಿ ಸರ್ಕಾರಕ್ಕೆ ನಿರಂತರ ಕಿರುಕುಳ ನೀಡುವ ಮೂಲಕ ಸರ್ಕಾರ ನಡೆಯದಂತೆ ಮಾಡುವುದು ಈ ದುರಹಂಕಾರಿ ಸಿದ್ದರಾಮಯ್ಯ ಈಗಾಗಲೇ ತನ್ನ ಹಿಂಬಾಲಕರನ್ನು ಬಿಟ್ಟು ಸಂಚು ನಡೆಸುತ್ತಿರುವುದು ಗುಟ್ಟಾಗಿ ಉಳಿದಿಲ್ಲ. ರಾಜ್ಯದಲ್ಲಿ ಯಾವುದೇ ಸಂದರ್ಭದಲ್ಲಿ ಮಧ್ಯಂತರ ಚುನಾವಣೆ ಎದುರಾಗಬಹುದು. ಮುಂದಿನ ಬಾರಿ ಬಿಜೆಪಿ ಸರ್ಕಾರವೇ ಅಧಿಕಾರಕ್ಕೆ ಬರಲಿದೆ. ಕಾಂಗ್ರೆಸ್ ಪಾಪದ ಕೊಡ ತುಂಬಿದೆ ಎಂದರು.



ಹಾವೇರಿಯಲ್ಲಿ ಮಂಗಳವಾರ ಉಚಿತ ಸೋಯಾಬೀನ್ ಬೀಜಗಳನ್ನು ಸಂಗ್ರಹಿಸಲು ರೈತರು ಜಮಾಯಿಸಿದ್ದರು.

## ಬೃಹತ್ ಉದ್ಯೋಗ ಮೇಳ: 327 ವಿದ್ಯಾರ್ಥಿಗಳಿಗೆ ಉದ್ಯೋಗಪತ್ರ

**ಬೀದರ್, ಜೂ. 2:** ನಗರದ ಲಿಂಗರಾಜ ಅಪ್ಪ ಎಂಜಿನಿಯರಿಂಗ್ ಕಾಲೇಜಿನಲ್ಲಿ ಆಯೋಜಿಸಿದ್ದ 'ಬೃಹತ್ ಉದ್ಯೋಗ ಮೇಳ–2026' ದಲ್ಲಿ 45ಕ್ಕೂ ಅಧಿಕ ಪ್ರತಿಷ್ಠಿತ ಕಂಪನಿಗಳು 327 ಅಭ್ಯರ್ಥಿಗಳಿಗೆ ಉದ್ಯೋಗ ನೇಮಕಾತಿ ಪತ್ರಗಳನ್ನು ವಿತರಿಸಿದವು.ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ಎಸ್.ದೇಶಮುಖ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಪದವಿಯ ಜೊತೆಗೆ ಕೌಶಲವೂ ಅತ್ಯಂತ ಮಹತ್ವದ್ದಾಗಿದೆ. ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ವಿಡಿಯೊ ಸಂದೇಶದ ಮೂಲಕ ವಿದ್ಯಾರ್ಥಿಗಳಿಗೆ ಶುಭಾಶಯ ಕೋರಿದರು. ನೀತಾ ಶೈಲೇಂದ್ರ ಬೆಲ್ದಾಳೆ, 'ಇಂದಿನ ಯುವಜನತೆ ತಾಂತ್ರಿಕ ಜ್ಞಾನ, ಸಂವಹನ ಕೌಶಲ ಮತ್ತು ವೃತ್ತಿಪರ ಸಾಮರ್ಥ್ಯಗಳನ್ನು ವೃದ್ಧಿಸಿಕೊಳ್ಳುವ ಮೂಲಕ ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸಲು ಸಿದ್ಧರಾಗಬೇಕು ಎಂದರು.




## ಕಲ್ಯಾಣ ಕರ್ನಾಟಕ ವಿಭಾಗದಲ್ಲಿ ವಶಿಷ್ಠ ಪದವಿಪೂರ್ವ ಕಾಲೇಜ್ ವಿದ್ಯಾರ್ಥಿಗಳ ಉತ್ತಮ ಸಾಧನೆ



**ಬಳ್ಳಾರಿ, ಜೂ 02:** 2025–26ನೇ ಶೈಕ್ಷಣ ಕ ಸಾಲಿನಲ್ಲಿ ಜರುಗಿದ ಜೆಇಇ ಅಡ್ವಾನ್ಸ್ಡ ಪರೀಕ್ಷೆಯಲ್ಲಿ ವಶಿಷ್ಠ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಭಾರಿ ಸಾಧನೆ ಮಾಡುವ ಮೂಲಕ ಬಳ್ಳಾರಿ ಜಿಲ್ಲೆಯಲ್ಲಿಯೇ ಹಾಗೂ ಕಲ್ಯಾಣ ಕರ್ನಾಟಕ ವಿಭಾಗದಲ್ಲಿಯೇ ಅತ್ಯುತ್ತಮ ರ್‍ಯಾಂಕ್‌ಗಳನ್ನು ಪಡೆದು ಕಾಲೇಜಿನ ಕೀರ್ತಿ ಫತಾಕೆಯನ್ನು ಎತ್ತಿಹಿಡಿದಿ ದ್ದಾರೆ ಎಂದು ಹೇಳಲು ಹೆಮ್ಮೆಯಾ ಗುತ್ತದೆ ಎಂದು ತಿಳಿಸಿದ್ದಾರೆ.

ಕ್ಯಾಟಗರಿಯಲ್ಲಿ 159ನೇ ರ್‍ಯಾಂಕ್ ಮತ್ತು CRL ರ್‍ಯಾಂಕ್ 21712 ಪಡೆದು ಬಳ್ಳಾರಿ ಜಿಲ್ಲೆಯಲ್ಲಿಯೇ ಅದ್ಭುತ ಸಾಧನೆ ಮಾಡಿದ ಈ ಎಲ್ಲಾ ವಿದ್ಯಾರ್ಥಿಗಳಿಗೆ ಕಾಲೇಜಿನ ಆಡಳಿತ ಮಂಡಳಿಯ ಪರವಾಗಿ ಪ್ರಾಂಶುಪಾಲರಾದ ಕೆ ರಮೇಶ ರಡ್ಡಿಯವರು ವಿದ್ಯಾರ್ಥಿಗಳಿಗೆ ಅಭಿನಂದನೆಯನ್ನು ತಿಳಿಸಿದ್ದಾರೆ. ಈ ಯಶಸ್ವಿಗೆ ಕಾರಣರಾದ ಕಾಲೇಜಿನ ಉಪನ್ಯಾಸಕರು, ಸಿಬ್ಬಂದಿಯವರು, ಮತ್ತು ವಿದ್ಯಾರ್ಥಿಗಳ ಪಾಲಕರು ಹಾಗೂ ಪೋಷಕರಿಗೆ ಕಾಲೇಜಿನ ಆಡಳಿತ ಮಂಡಳಿಯ ಪರವಾಗಿ ಪ್ರಾಂಶುಪಾಲ ಕೆ ರಮೇಶ ರೆಡ್ಡಿ ಅಭಿನಂದನ್ನೆ ತಿಳಿಸಿದ್ದಾರೆ.

### ಕೃಷಿ ಮಳಿಗೆಗಳ ಮೇಲೆ ಅಧಿಕಾರಿಗಳ ಅನಿರೀಕ್ಷಿತ ದಾಳಿ

# ನಿಯಮ ಉಲ್ಲಂಘಿಸಿದ ಮಾರಾಟಗಾರರಿಗೆ ನೋಟಿಸ್ ಜಾರಿ

**ಕಲಬುರಗಿ, ಜೂ. 2:** ರೈತರಿಗೆ ಯಾವುದೇ ಕಾರಣಕ್ಕೂ ರಸಗೊಬ್ಬರ 'ವನ್ನು ನಿಗದಿಗಿಂತ ಬೆಲೆಗೆ ಮಾರಾಟ ಮಾಡಬೇಕು ಅನಗತ್ಯವಾಗಿ ರೈತರಿಂದ ಹೆಚ್ಚಿನ ಹಣ ವಸೂಲಿ ಮಾಡುವವರ ವಿರುದ್ಧ ರಸಗೊಬ್ಬರ ನಿಯಂತ್ರಣ ಆದೇಶ ಹಾಗೂ ಅವಶ್ಯಕ ವಸ್ತುಗಳ ಕಾಯ್ದೆಯಡಿ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಕಲಬುರಗಿ ಜಂಟಿ ಕೃಷಿ ನಿರ್ದೇಶಕರಾದ ಸಮದ್ ಪಟೇಲ್ ಅವರು ಮಾರಾಟಗಾರರಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದ್ದಾರೆ.

ಜಿಲ್ಲೆಯ ಜೇವರ್ಗಿ, ಯಡ್ರಾಮಿ, ಚಿತ್ತಾಪುರ ಹಾಗೂ ಸೇಡಂ ತಾಲ್ಲೂಕುಗಳ ಕೃಷಿ ಪರಿಕರ ಮಾರಾಟ ಗಾರರ ಅಂಗಡಿಗಳ ಮೇಲೆ ಜಂಟಿ ಕೃಷಿ ನಿರ್ದೇಶಕರ ನೇತೃತ್ವದ ಅಧಿಕಾರಿಗಳ ತಂಡವು ಅನಿರೀಕ್ಷಿತ ದಾಳಿ ನಡೆಸಿ, ತಪಾಸಣೆ ಕೈಗೊಂಡು K-KISAN ತಂತ್ರಾಂಶದಲ್ಲಿ ರಸಗೊಬ್ಬರ ವಿತರಿಸುತ್ತಿರುವ ಕುರಿತು ಹಾಗೂ ರಸಗೊಬ್ಬರದ ದಾಸ್ತಾನಿನ ವಿವರ ಹಾಗೂ POS ದಾಸ್ತಾನನ್ನು ಪರಿಶೀಲಿಸಿದರು.



ರೈತರಿಗೆ ನಿಗದಿಗಿಂತ ಹೆಚ್ಚಿನ ಬೆಲೆಯಲ್ಲಿ ರಸಗೊಬ್ಬರ ಮಾರಾಟ ಮಾಡುತ್ತಿರುವ ಕುರಿತು ಸಾರ್ವಜನಿಕ ರಿಂದ ದೂರುಗಳು ಬಂದ ಹಿನ್ನೆಲೆ ಯಲ್ಲಿ, ತಪ್ಪಿತಸ್ಥ ಮಾರಾಟಗಾರರ ವಿರುದ್ಧ ಕಠಿಣ ಕ್ರಮ ಜರುಗಿಸಲು ಈ ಜಂಟಿ ದಾಳಿಯನ್ನು ಹಮ್ಮಿಕೊಳ್ಳ ಲಾಗಿದೆ ಎಂದು ಅವರು ತಿಳಿಸಿದರು.

ಮಾರ್ಕೆಟ್‌ನಲ್ಲಿರುವ ಗೋದಾಮು ಗಳಿಗೆ ಬೇಟಿ ನೀಡಿ FCO–1985 (Fertilizer Control Order) ಉಲ್ಲಂಘಿಸಿದ ಮಾರಾಟ ಗಾರರಿಗೆ ನೋಟಿಷ್ ನೀಡಲಾಗಿದ್ದು, ಅವರ ಮಾರಾಟ ಪರವಾನಿಗೆ ಮೇಲೆ ಮುಂದಿನ ದಿವಸಗಳಲ್ಲಿ ಕಾನೂನು ಕ್ರಮ ಜರುಗಿಸಲಾಗುವುದು ಜಂಟಿ ಕೃಷಿ ನಿರ್ದೇಶಕರಾದ ಸಮದ್ ಪಟೇಲ್ ಅವರು ಅಧಿಕಾರಿಗಳಿಗೆ ಸೂಚಿಸಿದರು. ಕೃಷಿ ಪರಿಕರ ಮಾರಾಟಗಾರರು ತೆಗೆದುಕೊಂಡ ಕ್ರಮಗಳು:– ಕಲಬುರಗಿ ಜಿಲ್ಲೆಯ ವಿವಿಧ ತಾಲ್ಲೂಕಿನ ಕೃಷಿ ಪರಿಕರ ಮಾರಾಟಗಾರರ ಮೇಲೆ ತೆಗೆದುಕೊಂಡ ಕ್ರಮಗಳ ಮಾಹಿತಿ ಪಡೆದುಕೊಂಡರು. ಜೇವರ್ಗಿ, ಯಡ್ರಾಮಿ, ಸೇಡಂ, ಚಿತ್ತಾಪೂರ ಸೇರಿದಂತೆ ಒಟ್ಟು 28 ಮಳಿಗೆಗಳನ್ನು ಪರಿಶೀಲಿಸಿದರು. ಒಟ್ಟು 26 ಮಳಿಗೆಗಳಿಗೆ ಷೋಕಾಸ್ ನೋಟಿಸ್ ಜಾರಿ ಮಾಡಿದರು. ಮಾರಾಟ ತಡೆ ಆದೇಶದ ಮಳಿಗೆಗಳ ಸಂಖ್ಯೆ 10, ಪ್ರಮಾಣ (ಟನ್‌ಗಳಲ್ಲಿ) ಜೇವರ್ಗಿ 192.4 ಒಟ್ಟು ಮೊತ್ತ ರೂ. 45.75 ರೂ. ಲಕ್ಷಗಳು.

## ತಂಬಾಕು ಸೇವನೆ ಅಪಾಯಕಾರಿ: ಡಾ.ಸುರೇಂದ್ರ ಬಾಬು

**ರಾಯಚೂರು, ಜೂ. 2:** ತಂಬಾಕು ಸೇವನೆ ತುಂಬಾ ಅಪಾಯಕಾರಿ. ಯಾವುದೇ ಕಾರಣಕ್ಕೂ ತಂಬಾಕು ಸೇವನೆ ಮಾಡಬಾರದು. ತಂಬಾಕು ಮಾರಕವಾದ ಕ್ಯಾನ್ಸರ್ ರೋಗಕ್ಕೆ ಆಹ್ವಾನ ನಿಡಿದಂತೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಸುರೇಂದ್ರ ಬಾಬು ಅವರು ಹೇಳಿದರು.

ವಿಶ್ವ ತಂಬಾಕುರಹಿತ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು. ಸಿಗರೇಟ್ ಸೇವನೆ ಇಲ್ಲದೆ ಮಲಮೂತ್ರ ಬರಲ್ಲ, ಗುಟಕಾ ಹಾಕಿಕೊಳ್ಳದಿದ್ದರೆ ಹೊಟ್ಟೆ ಸ್ವಚ್ಛವಾಗುವುದಿಲ್ಲವೆಂದು ಹೇಳಿಕೊಂಡು ಚಟಕ್ಕೆ ಅಂಟಿ ಕೊಳ್ಳುತ್ತಿದ್ದಾರೆ. ಇದೆಲ್ಲ ಭ್ರಮೆ ಅಷ್ಟೇ. ವಾಸ್ತವದಲ್ಲಿ ಇದೆಲ್ಲ ಸುಳ್ಳು ಎಂದರು.



ಚಲನಚಿತ್ರ ತಾರೆಯರಂತೆ ಸಿಗರೇಟ್ ಸ್ಟೈಲ್ ಮಾಡಿ ಹಚ್ಚುವುದು, ಬಾಯಿಯಿಂದ ಹೊಗೆ ಬಿಡುವುದು ಒಳ್ಳೆಯದಲ್ಲ. ಯುವಕರು ಸಿಗರೇಟ್ ಚಟಕ್ಕೆ ಅಂಟಿಕೊಂಡರೆ 10 ವರ್ಷ ಬದುಕುವ ವ್ಯಕ್ತಿ ಅನಾರೋಗ್ಯಕ್ಕೆ ಒಳಗಾಗಿ ಒಂದೇ ವರ್ಷದಲ್ಲಿ ಹೊಗೆ ಹಾಕಿಸಿಕೊಳ್ಳುವಂತಹ ಸ್ಥಿತಿ ನಿರ್ಮಾಣ ವಾಗುತ್ತದೆ ಎಂದು ತಿಳಿಸಿದರು. ತಂಬಾಕು ಮುಕ್ತ ಭಾರತದಲ್ಲಿ ತಂಬಾಕು ಮುಕ್ತ ಸಮಾಜ ನಿರ್ಮಾಣ ಮಾಡುವಲ್ಲಿ ಈಶ್ವರೀಯ ವಿಶ್ವ ವಿದ್ಯಾಲಯವು ಕಾರ್ಯಕ್ರಮ ಆಯೋಜಿಸಿ ಮಹತ್ವ ಪೂರ್ಣ ಹೆಜ್ಜೆ ಇರಿಸಿದೆ ಎಂದರು.

## ನೂತನ ಸರ್ಕಾರಕ್ಕೆ ಶುಭ ಕೋರಿದ ಜಗದ್ಗುರು ಪಂಚ ಪೀಠಾಧೀಶ್ವರರು

**ಬೆಂಗಳೂರು– ಜೂನ್–2–**ಡಿ.ಕೆ.ಶಿವಕುಮಾರ್ ರಾಜ್ಯದ ಮುಖ್ಯಮಂತ್ರಿಯಾಗಿ ಬುಧವಾರ ಸಂಜೆ ಲೋಕಭವನದ ಗ್ಲಾಸ್ ಹೌಸ್‌ನಲ್ಲಿ ಪ್ರಮಾಣ ವಚನ ಸ್ವೀಕರಿಸಲಿದ್ದು, ಪ್ರಮಾಣ ವಚನ ಸಮಾರಂಭಕ್ಕೆ ಶ್ರೀ ಜಗದ್ಗುರು ಪಂಚಪೀಠಾಧೀಶ್ವರರಿಗೆ ಆಹ್ವಾನ ನೀಡಲಾಗಿದೆ. ಆದರೆ ಪೂರ್ವ ನಿಗದಿಯಂತೆ ಎಲ್ಲ ಜಗದ್ಗುರುಗಳು ವಿವಿಧ ಕಾರ್ಯಕ್ರಮಗಳಲ್ಲಿ ಭಾಗ ವಹಿಸುತ್ತಿರುವುದರಿಂದ ನೂತನ ಮುಖ್ಯಮಂತ್ರಿ ಹಾಗೂ ಸರ್ಕಾರಕ್ಕೆ ಶ್ರೀ ಜಗದ್ಗುರು ಪಂಚಪೀಠಾಧೀಶ್ವರರು ಶುಭ ಕೋರಿದ್ದಾರೆ.



## ಬಳ್ಳಾರಿ ಜಿಲ್ಲೆಯನ್ನು ಬಾಲಕಾರ್ಮಿಕ ಮುಕ್ತಗೊಳಿಸಲು ಹಠಾತ್ ದಾಳಿ ಕಟ್ಟುನಿಟ್ಟಿನ ಕ್ರಮ ಜಾರಿಗೊಳಿಸಲು ಡಿಸಿ ನಾಗೇಂದ್ರ ಪ್ರಸಾದ್ ಸೂಚನೆ

**ಬಳ್ಳಾರಿ,ಜೂ.02.**ಬಳ್ಳಾರಿ ಜಿಲ್ಲೆಯಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ಬೇರುಸಹಿತ ಕಿತ್ತೆಸೆಯಲು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ನಿರಂತರ ಹಠಾತ್ ದಾಳಿ ನಡೆಸುವ ಮೂಲಕ ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್. ಕೆ ಅವರು ಅಧಿಕಾರಿಗಳಿಗೆ ಸೂಚಿಸಿದರು.

ವಿವಿಧ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡ ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಕಾರ್ಯಪಡೆಯು ತನ್ನ ಇಲಾಖೆಯ ನಿಯಮಿತ ಕೆಲಸಗಳ ಜೊತೆಗೆ, ಬಾಲಕಾರ್ಮಿಕ ವ್ಯವಸ್ಥೆಯ ವಿರುದ್ಧ ವ್ಯಾಪಕ ಜನಜಾಗೃತಿ ಮೂಡಿಸಬೇಕು.

ತಹಶೀಲ್ದಾರರ ಅಧ್ಯಕ್ಷತೆಯಲ್ಲಿರುವ ತಾಲ್ಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಮಿತಿಗಳು ಮತ್ತಷ್ಟು ಪರಿಣಾಮಕಾರಿಯಾಗಿ ಕೆಲಸ ಮಾಡಬೇಕಿದೆ. ಕಳೆದ ಸಾಲಿನಲ್ಲಿ 33 ತಾಲೂಕು ಮಟ್ಟದ ಸಭೆಗಳನ್ನು ನಡೆಸಲಾಗಿದ್ದು, ಇನ್ಮುಂದೆ ತಾಲೂಕು ಮಟ್ಟದ ಸಭೆ ಹಾಗೂ ಹಠಾತ್ ದಾಳಿಗಳಲ್ಲಿ ತಾಲೂಕು ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸುವಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಮೌನೇಶ್.ಎ ಅವರು ಮಾತನಾಡಿ, ರಾಷ್ಟ್ರೀಯ ಮಕ್ಕಳ ಹಕ್ಕುಗಳ ಆಯೋಗದ ನಿರ್ದೇಶನದಂತೆ ಪ್ರತಿ ತಿಂಗಳು ತಾಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಮಿತಿಗಳ ಮೂಲಕ ಇಲ್ಲಿಯವರೆಗೆ (2025–26 ನೇ ಸಾಲಿನಲ್ಲಿ) 20 ಆಕಸ್ಮಿಕ ದಾಳಿಗಳನ್ನು ನಡೆಸಲಾಗಿದೆ. ಈ ಕಾರ್ಯಾಚರಣೆಯಲ್ಲಿ ಒಟ್ಟು 58 ಬಾಲಕಾರ್ಮಿಕರನ್ನು ರಕ್ಷಿಸಿ, ಮಕ್ಕಳ ಕಲ್ಯಾಣ ಸಮಿತಿ ಮತ್ತು ಪೋಷಕರ ವಶಕ್ಕೆ ಒಪ್ಪಿಸಲಾಗಿದೆ. ಮಕ್ಕಳನ್ನು ದುಡಿಸಿಕೊಳ್ಳುತ್ತಿದ್ದ ಮಾಲೀಕರ ವಿರುದ್ಧ ವಿವಿಧ ಪೊಲೀಸ್



ಠಾಣೆಗಳಲ್ಲಿ 31 ಎಫ್.ಐ.ಆರ್ ದಾಖಲಿಸಲಾಗಿದ್ದು, ಕರಪತ್ರಗಳ ಮೂಲಕ ಕಟ್ಟುನಿಟ್ಟಿನ ಎಚ್ಚರಿಕೆ ನೀಡಲಾಗಿದೆ. ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ನಿರಂತರವಾಗಿ ನಡೆಯುವ ಆಕಸ್ಮಿಕ ದಾಳಿಗಳ ಸಂದರ್ಭದಲ್ಲಿ ರಕ್ಷಿಸಲಾಗುವ ಬಾಲಕಾರ್ಮಿಕರನ್ನು ಮಕ್ಕಳ ಕಲ್ಯಾಣ ಸಮಿತಿಯ (ಸಿಡಬ್ಲ್ಯೂ ಯಸಿ) ಮುಂದೆ ಹಾಜರುಪಡಿಸಲು ಹಾಗೂ ಅವರನ್ನು ಮುಖ್ಯವಾಹಿನಿ ಶಾಲೆಗಳಿಗೆ ದಾಖಲಿಸಲು ವಾಹನದ ಅವಶ್ಯಕತೆ ಇದ್ದು, ದಾಳಿ ಮತ್ತು ರಕ್ಷಣಾ ಕಾರ್ಯಗಳಿಗಾಗಿ ಪ್ರತ್ಯೇಕ ವಾಹನವನ್ನು ಒದಗಿಸುವ ಕುರಿತು ಸಭೆಗೆ ತಿಳಿಸಿದರು.

ಸಮೀಕ್ಷೆ ಹಾಗೂ ಮಾಸಿಕ ಆಕಸ್ಮಿಕ ದಾಳಿಗಳ ಮೂಲಕ ಗುರುತಿಸಲ್ಪಡುವ ಮಕ್ಕಳಿಗೆ ತಾತ್ಕಾಲಿಕವಾಗಿ ವಿಶೇಷ ತರಬೇತಿ ನೀಡಿ, ಅವರ ಕಲಿಕಾ ಮಟ್ಟವನ್ನು ಸುಧಾರಿಸಿದ ನಂತರ ಮುಖ್ಯವಾಹಿನಿ ಶಾಲೆಗಳಿಗೆ ಸೇರಿಸಲು ಯೋಜಿಸಲಾಗಿದೆ. ಇದಕ್ಕಾಗಿ ಕೆ.ಎಂ.ಇ.ಆರ್.ಸಿ ಅಡಿಯಲ್ಲಿ ಈಗಾಗಲೇ ಅನುಮೋದನೆ ಪಡೆದಿರುವ ಬಾಲಕಾರ್ಮಿಕರ ವಿಶೇಷ ತರಬೇತಿ ಕೇಂದ್ರವನ್ನು ಶೀಘ್ರದಲ್ಲೇ ಪ್ರಾರಂಭಿಸುವ ಕುರಿತು ಸಭೆಯಲ್ಲಿ ಪ್ರಸ್ತಾಪಿಸಿದರು.

***ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ:***

ಜಿಲ್ಲಾ ಬಾಲ ಕಾರ್ಮಿಕ ಯೋಜನೆಯ ಅಧ್ಯಕ್ಷರೂ ಆದ ನಾಗೇಂದ್ರ ಪ್ರಸಾದ್.ಕೆ ಅವರು ಮಾತನಾಡಿ, ಇದೇ ಜೂನ್ 12 ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಜಂಟಿ ಸಹಯೋಗದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಅಂತರಾಷ್ಟ್ರೀಯ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗುತ್ತಿದ್ದು, ಇದಕ್ಕೂ ಶಾಲಾ ಮಕ್ಕಳಿಂದ ಜನಜಾಗೃತಿ ಜಾಥಾ ನಡೆಯಲಿದೆ. ಇದಕ್ಕೆ ಬೇಕಾದ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಹಾಗೂ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲೂ ಹಮ್ಮಿಕೊಳ್ಳಬೇಕು ಎಂದು ಹೇಳಿದರು.

ಬಾಲಕಾರ್ಮಿಕ ಕಾಯ್ದೆ ಕಂದಾಯ, ಪಂಚಾಯತ್ ರಾಜ್, ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸೇರಿದಂತೆ ಒಟ್ಟು 11 ಇಲಾಖೆಗಳ ಅಧಿಕಾರಿಗಳಿಗೆ ಇನ್ಸ್ಪೆಕ್ಟರ್ ಅಧಿಕಾರ ನೀಡಲಾಗಿದೆ. ಈ ಅಧಿಕಾರಿಗಳು ತಾಲೂಕು ಮಟ್ಟದ ಟಾಸ್ಕ್‌ಫೋರ್ಸ್ ಹಾಗೂ ಆಕಸ್ಮಿಕ ದಾಳಿಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ, ತಪ್ಪು ಮಾಡಿದವರ ವಿರುದ್ಧ ಮೊಕದ್ದಮೆ ಹೂಡುವಂತೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಬಾಲಕಾರ್ಮಿಕತೆಯಿಂದ ಮುಕ್ತಗೊಂಡು ಸರ್ಕಾರಿ ಶಾಲೆಗೆ ದಾಖಲಾದ ಬಡ ಮತ್ತು ವಲಸೆ ಕಾರ್ಮಿಕರ ಮಕ್ಕಳಿಗೆ ಮುಂದಿನ ವಿದ್ಯಾಭ್ಯಾಸಕ್ಕಾಗಿ ಎಸ್‌ಸಿ/ಎಸ್‌ಟಿ/ಬಿಸಿಎಂ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಲಿ ವಸತಿ ಸೌಲಭ್ಯ ಕಲ್ಪಿಸಬೇಕು ಎಂದು ಕಲ್ಯಾಣ ಇಲಾಖೆಗಳ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯನ್ನು 2025–26 ನೇ ಸಾಲಿಗೆ ಸಹಕಾರ ಸಂಘಗಳ ನೋಂದಣಿ ಕಾಯ್ದೆಯನ್ವಯ ನವೀಕರಿಸುವ ಕುರಿತು ಹಾಗೂ ಕಾರ್ಮಿಕ ಆಯುಕ್ತರ ನಿರ್ದೇಶನದಂತೆ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಯ ಜಾಗೃತಿ ಕಾರ್ಯಕ್ರಮಗಳಿಗಾಗಿ ಪ್ರಸಿದ್ಧ ಕಂಪನಿಗಳಿಂದ ಸಿ.ಎಸ್.ಆರ್ ಅನುದಾನ ಮತ್ತು ಗಣ್ಯ ವ್ಯಕ್ತಿಗಳಿಂದ ದೇಣಿಗೆ ಸಂಗ್ರಹ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

## ಅಹಲ್ಯಾಬಾಯಿ ಹೋಳ್ಕರ್ ಹಿಂದೂ ಧರ್ಮದ ರಕ್ಷಕಿ, ಅವರ ಆಡಳಿತವೇ ಸುವರ್ಣಯುಗ : ಯತ್ನಾಳ್

**ವಿಜಯಪುರ, ಜೂ. 2:** ಭಾರತದ ಇತಿಹಾಸದಲ್ಲಿ ರಾಜಮಾತೆ ಅಹಿಲ್ಯಾಬಾಯಿ ಹೋಳ್ಕರ್ ಅವರ 35 ವರ್ಷಗಳ ಆಡಳಿತಾವಧಿಯನ್ನು ಸುವರ್ಣ ಯುಗವೆಂದು ಕರೆಯಲಾಗುತ್ತದೆ. ಅವರ ಜನಪರ ಆಡಳಿತ, ಹಿಂದೂ ಧಾರ್ಮಿಕ ಕಾರ್ಯಗಳು ಹಾಗೂ ಸಾಮಾಜಿಕ ಸೇವೆಗಳು ಇಂದಿಗೂ ಜನಮಾನಸದಲ್ಲಿ ಅಚ್ಚಳಿಯದೆ ಉಳಿದಿವೆ. ಅವರು ಹಿಂದೂ ಧರ್ಮದ ರಕ್ಷಣೆಯಲ್ಲಿ ಸಲ್ಲಿಸಿದ ಸೇವೆ ಅಪಾರ ಎಂದು ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಹೇಳಿದರು.




ನಗರದ ಅಹಲ್ಯಾಬಾಯಿ ಹೋಳ್ಕರ್ ವೃತ್ತದಲ್ಲಿ ಆಯೋಜಿಸಿದ್ದ ರಾಜಮಾತೆ ಅಹಿಲ್ಯಾಬಾಯಿ ಹೋಳ್ಕರ್ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿಜಯಪುರ ನಗರದಲ್ಲಿ ಮಹನೀಯರ ಇತಿಹಾಸ ಮತ್ತು ಕೊಡುಗೆಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಉದ್ದೇಶದಿಂದ ವಿವಿಧ ವೃತ್ತಗಳು, ಸ್ಮಾರಕಗಳು ಹಾಗೂ ರಸ್ತೆಗಳಿಗೆ ಮಹಾಪುರುಷರ ಹೆಸರನ್ನು ನಾಮಕರಣ ಮಾಡಲಾಗಿದೆ. ಈ ಸಂದರ್ಭದಲ್ಲಿ ಸಂಗೊಳ್ಳಿ ರಾಯಣ್ಣ ಅವರ ಕಂಚಿನ ಮೂರ್ತಿ ಸ್ಥಾಪನೆ ಕುರಿತು ಮಹತ್ವದ ಘೋಷಣೆ ಮಾಡಿದ ಯತ್ನಾಳ್, ನಗರದಲ್ಲಿ ಸಂಗೊಳ್ಳಿ ರಾಯಣ್ಣ ಅವರ ಭವ್ಯ ಕಂಚಿನ ಪ್ರತಿಮೆಯನ್ನು ಸ್ಥಾಪಿಸಿ, ರಾಜ್ಯದಲ್ಲಿಯೇ ದಾಖಲೆಯಾಗುವ ರೀತಿಯಲ್ಲಿ ಲಕ್ಷಾಂತರ ಜನರ ಸಮ್ಮುಖದಲ್ಲಿ ಅನಾವರಣಗೊಳಿಸಲಾಗುವುದು. 2027ರ ಆಗಸ್ಟ್ 15ರಂದು ಈ ಐತಿಹಾಸಿಕ ಕಾರ್ಯಕ್ರಮವನ್ನು ನೆರವೇರಿಸಲಾಗುವುದು ಎಂದು ಭರವಸೆ ನೀಡಿದರು.

ಅಹಿಲ್ಯಾಬಾಯಿ ಹೋಳ್ಕರ್ ಅವರ ಸಾಧನೆಗಳನ್ನು ಸ್ಮರಿಸಿದ ಅವರು, ಅಹಿಲ್ಯಾಬಾಯಿ ಹೋಳ್ಕರ್ ಅವರು ಕೇವಲ ಒಬ್ಬ ಆಡಳಿತಗಾರ್ತಿ ಮಾತ್ರವಲ್ಲ, ಸಮರ್ಥ ನಾಯಕಿಯಾಗಿದ್ದರು. ಮಹಿಳಾ ಸಬಲೀಕರಣಕ್ಕೆ ಆದ್ಯತೆ ನೀಡಿ ಮಹಿಳಾ ಸೈನ್ಯವನ್ನು ನಿರ್ಮಿಸಿದರು. ಕೃಷಿ, ವ್ಯಾಪಾರ, ಶಿಕ್ಷಣ ಹಾಗೂ ಜನಕಲ್ಯಾಣಕ್ಕೆ ವಿಶೇಷ ಒತ್ತು ನೀಡಿದರು. ದೇವಸ್ಥಾನಗಳ ಜೀರ್ಣೋದ್ಧಾರ, ಧಾರ್ಮಿಕ ಕ್ಷೇತ್ರಗಳ ಅಭಿವೃದ್ಧಿ ಹಾಗೂ ಸಮಾಜಮುಖಿ ಕಾರ್ಯಗಳ ಮೂಲಕ ಅವರು ಅಪ್ರತಿಮ ಸೇವೆ ಸಲ್ಲಿಸಿದರು. ಅವರ ಜನಪರ ಆಡಳಿತ ಮತ್ತು ದೈವಿಕ ಕಾರ್ಯಗಳನ್ನು ಪರಿಗಣಿಸಿ ಅವರನ್ನು 'ಲೋಕಮಾತೆ' ಎಂದು ಗೌರವದಿಂದ ಕರೆಯಲಾಗುತ್ತದೆ" ಎಂದು ಹೇಳಿದರು.

ಅಹಲ್ಯಾಬಾಯಿ ಹೋಳ್ಕರ್ ಅವರ ಇತಿಹಾಸವನ್ನು ಮಹಾರಾಷ್ಟ್ರಕ್ಕೆ ಮಾತ್ರ ಸೀಮಿತಗೊಳಿಸದೆ ಕರ್ನಾಟಕದಲ್ಲಿಯೂ ವ್ಯಾಪಕವಾಗಿ ಪರಿಚಯಿಸುವ ಕಾರ್ಯವನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದ ಯತ್ನಾಳ್, ವಿಜಯಪುರ ನಗರದಲ್ಲಿ ವಿವಿಧ ಮಹನೀಯರ ಹೆಸರಿನಲ್ಲಿ ವೃತ್ತಗಳ ನಿರ್ಮಾಣ ಹಾಗೂ ಸ್ಮಾರಕಗಳ ಸ್ಥಾಪನೆಗೆ ಆದ್ಯತೆ ನೀಡಲಾಗಿದೆ ಎಂದರು.

## ಚಾಮುಂಡೇಶ್ವರಿ ಬೆಟ್ಟ, ನಿಮಿಷಾಂಬ ದೇಗುಲದಲ್ಲಿ ಮಾಜಿ ಸಿಎಂ ಸ್ಟಾಲಿನ್ ಪತ್ನಿ ದುರ್ಗಾ ಪೂಜೆ

**ಮೈಸೂರು, ಜೂ.2:** ತಮಿಳು ನಾಡಲ್ಲಿ ಮಾಜಿ ಸಿಎಂ ಎಂ.ಕೆ ಸ್ಟಾಲಿನ್ ಪುತ್ರ ಸನಾತನ ಧರ್ಮ ನಿರ್ಮೂಲನೆ ಮಾಡಬೇಕು ಎಂದು ಹೇಳಿಕೆ ನೀಡಿದ ಕೆಲವೇ ದಿನಗಳ ಅವಧಿಯಲ್ಲಿ ಅವರ ತಾಯಿ ಹಿಂದೂ ದೇಗುಲಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದ್ದಾರೆ.



ಸ್ಟಾಲಿನ್ ಪತ್ನಿ ದುರ್ಗಾ ಸ್ಟಾಲಿನ್ ಅವರು ಮೈಸೂರು–ಮಂಡ್ಯದ ದೇವಿ ದೇವಾಲಯಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದ್ದಾರೆ. ಮೈಸೂರಿನ ಚಾಮುಂಡಿಬೆಟ್ಟ ಹಾಗೂ ಮಂಡ್ಯದ ಶ್ರೀರಂಗಪಟ್ಟಣದ ನಿಮಿಷಾಂಬಾ ದೇವಾಲಯಕ್ಕೆ ಮಂಗಳವಾರ ಭೇಟಿ ನೀಡಿ ಪೂಜೆ ಸಲ್ಲಿಸಿದ್ದಾರೆ. ಮಡಿಲು ತುಂಬಿಸುವ ಉಡಿಸೇವೆ ನಡೆಸಿ, ಬಳೆ, ರೇಷ್ಮೆಸೀರೆಯ ಉಡಿ ಸಲ್ಲಿಸಿದ್ದಾರೆ.

ಮಗನ ವಿವಾದಾತ್ಮಕ ಹೇಳಿಕೆ ಬೆನ್ನಲ್ಲೇ ತಾಯಿಯ ಈ ದೈವಭಕ್ತಿ ಭಾರಿ ಚರ್ಚೆಗೆ ಗ್ರಾಸವಾಗಿದೆ. ಧಾರ್ಮಿಕ ಕಾರ್ಯಕ್ರಮಗಳ ಬಳಿಕ ಜೆಡಿಎಸ್ ಶಾಸಕ ಜಿಟಿ ದೇವೇಗೌಡ ಅವರ ನಿವಾಸಕ್ಕೆ ಅಚ್ಚರಿ ಭೇಟಿ ನೀಡಿದ ದುರ್ಗಾ ಸ್ಟಾಲಿನ್ ಅವರು ದಂಪತಿಯ ಆಶೀರ್ವಾದ ಪಡೆದಿದ್ದಾರೆ. ಈ ಕುರಿತ ವಿಡಿಯೋ ಕೂಡ ವ್ಯಾಪಕ ವೈರಲ್ ಆಗುತ್ತಿದೆ. ಇನ್ನು ತಮಿಳುನಾಡಲ್ಲಿ ನೂತನವಾಗಿ ವಿಜಯ್ ಸರಕಾರ ಆಡಳಿತಕ್ಕೆ ಬಂದ ಬಳಿಕ, 2ನೇ ದಿನದ ಆಡಳಿತದಲ್ಲಿ ಮಾಜಿ ಸಿಎಂ ಸ್ಟಾಲಿನ್ ಪುತ್ರ ಉದಯನಿಧಿ ಸ್ಟಾಲಿನ್ ಅವರು 'ಸನಾತನ ಧರ್ಮ ಜನರನ್ನು ವಿಭಜಿಸುತ್ತದೆ. ಇದನ್ನು ನಿರ್ಮೂಲನೆ ಮಾಡಬೇಕು ಎಂದಿದ್ದರು.

ಇದಕ್ಕೂ ಮೊದಲು ನಡೆದ ಸಮಾವೇಶವೊಂದರಲ್ಲಿ ಸನಾತನ ಧರ್ಮವನ್ನು ವಿರೋಧಿಸಿದರೆ ಸಾಲದು, ನಿರ್ಮೂಲನೆ ಮಾಡಬೇಕು. ಡೆಂಘೆ, ಸೊಳ್ಳೆ, ಮಲೇರಿಯಾ, ಕೊರೊನಾವನ್ನು ನಿರ್ಮೂಲನೆ ಮಾಡಿದ ರೀತಿ ಮಾಡಬೇಕು, ಸನಾತನ ಜಾತಿಯ ಆಧಾರದಲ್ಲಿ ನಿರ್ಮೂಲನೆ ಮಾಡುತ್ತದೆ ಎಂದಿದ್ದರು. ಉದಯನಿಧಿ ಅವರ ಈ ಮಾತಿಗೆ ದೇಶಾದ್ಯಂತ ವ್ಯಾಪಕ ಆಕ್ರೋಶ ವ್ಯಕ್ತವಾಗಿತ್ತು. ನಟ ಅರ್ಜುನ್ ಸರ್ಜಾ ಕೂಡಾ ವಿರೋಧಿಸಿ ಸನಾತನ ಧರ್ಮವೇ ಬೇಡ ಅಂತಾದ್ರೆ, ಅಂತಹವರು ತಮ್ಮ ತಂದೆ ತಾಯಿಯನ್ನೂ ದೂರ ಮಾಡಬೇಕು ಇದು ಸಾಧ್ಯವೇ ಎಂದಿದ್ದರು.

## ಕಲಬುರಗಿ: ಸೌಹಾರ್ದ ಸಹಕಾರಿಗಳ ಹಾಸ್ಯಸಂಜೆ



**ಕಲಬುರಗಿ, ಜೂ. 2:** ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಹಾಗೂ ಜಿಲ್ಲಾ ಸೌಹಾರ್ದ ಸಹಕಾರಿಗಳ ಒಕ್ಕೂಟ ನಿ. ಇವರ ಸಹಯೋಗದಲ್ಲಿ ನಗರದ ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಎಂ.ಆರ್. ಮೆಡಿಕಲ್ ಕಾಲೇಜಿನ ಸ್ಯಾಕ್ ಸಭಾಂಗಣದಲ್ಲಿ ಆಯೋಜಿಸಲಾದ "ಹಾಸ್ಯ ಸಂಜೆ" ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಕಾರ್ಯಕ್ರಮವನ್ನು ಗಣ್ಯರು ಉದ್ಘಾಟಿಸಿದರು. ಕರ್ನಾಟಕ ರಾಜ್ಯ ಬಸವೇಶ್ವರ ಸುದ್ದಿ ಮಾಧ್ಯಮ ಸಹಕಾರ ಮಹಾ ಮಂಡಳದ ಅಧ್ಯಕ್ಷರು ಹಾಗೂ ಕೆ.ಎಸ್.ಎಸ್.ಎಫ್.ಸಿ.ಎಲ್. ನಿರ್ದೇಶಕರಾದ ಗುರುನಾಥ ಜಾಂತಿಕರ್ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯರು ಹಾಗೂ ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಶಶೀಲ ನಮೋಶಿ, ಕೆ.ಎಸ್.ಎಸ್.ಎಫ್.ಸಿ.ಎಲ್. ನಿರ್ದೇಶಕಿ ಶೈಲಜಾ ತಪಲಿ, ಕೆ. ವೈ.ಡಿ.ಸಿ.ಸಿ. ಬ್ಯಾಂಕ್ ನಿರ್ದೇಶಕ ಸುರೇಶ್ ಸಜ್ಜನ, ಕೆ.ಎಸ್.ಎಸ್. ಎಫ್.ಸಿ.ಎಲ್. ವೃತ್ತಿಪರ ನಿರ್ದೇಶಕ ಸಂಜೀವ ಎಸ್. ಮಹಾಜನ್, ಸಹಕಾರ ಸಂಘಗಳ ಇಲಾಖೆಯ ಜಂಟಿ ನಿಬಂಧಕ ವಿಶ್ವನಾಥ ಮಲಕೂಡ, ನಿಂಬಾಳಕರ್, ಕಲಬುರಗಿ–ಬೀದರ ಹಾಲು ಉತ್ಪಾದಕರ ಸಹಕಾರ ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಡಾ. ಪಿ.ವಿ. ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಲಬುರಗಿ ಜಿಲ್ಲಾ ಸೌಹಾರ್ದ ಸಹಕಾರಿಗಳ ಒಕ್ಕೂಟದ ಅಧ್ಯಕ್ಷ ಎಸ್.ಎಸ್. ಪಾಟೀಲ ಅವರ ನೇತೃತ್ವದಲ್ಲಿ ಕಾರ್ಯಕ್ರಮ ಜರುಗಿತು. ವಿಭಾಗೀಯ ಅಧಿಕಾರಿ ಸಂಜಯ ಎ. ಕೋರಟಕರ್, ಒಕ್ಕೂಟದ ನಿರ್ದೇಶಕರಾದ ಸಿದ್ದರಾಮಪ್ಪ ಹರಸೂರ್, ಕೆ.ಬಿ. ಶೆಟಗಾರ, ಶಿವ ಶರಣಪ್ಪ ಶೆಟ್ಟಿ, ಸಿದ್ದರಾಮ ಮಹಾಂತಗೋಳ, ಸಾವಿತ್ರಿ ಕುಳಗೇರಿ, ಮಹಾಂತಪ್ಪ ಮೇಲಗೇರಿ, ವಿಜಯ ಕುಮಾರ ಜೈನ್, ಹನುಮಂತ ಧಿಕೆಸಂಗ ಸುನಂದಾ ಹಾಗೂ ಸಂಜೀವ ಪಾಟೀಲ, ರಾಜ ಕಣ್ಣಿ ಸೇರಿದಂತೆ ಆಡಳಿತ ಮಂಡಳಿ ಸದಸ್ಯರು ಹಾಗೂ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಸಹಕಾರ ಕ್ಷೇತ್ರದ ಅಭಿವೃದ್ಧಿ, ಸೌಹಾರ್ದ ಸಹಕಾರಿಗಳ ಪಾತ್ರ ಹಾಗೂ ಸಹಕಾರ ಚಳವಳಿಯ ಬಲವರ್ಧನೆ ಕುರಿತು ಅಭಿಪ್ರಾಯಗಳನ್ನು ಹಂಚಿಕೊಳ್ಳಲಾಯಿತು. ಹಾಸ್ಯ ಕಲಾವಿದ ಪ್ರಾಣೇಶ ಅವರ ಮನರಂಜನಾ ಕಾರ್ಯಕ್ರಮ ಸಭಿಕರ ಮೆಚ್ಚುಗೆಗೆ ಪಾತ್ರವಾಗಿ, ಸಹಕಾರಿಗಳಲ್ಲಿ ಒಗ್ಗಟ್ಟು ಮತ್ತು ಸೌಹಾರ್ದತೆಯ ಸಂದೇಶವನ್ನು ಸಾರಿತು.

ಅಲ್ಲದೆ ಆಳಂದ, ಜೇವರ್ಗಿ, ಶಹಾಬಾದ್, ಕಮಲಾಪುರ ಸೇರಿದಂತೆ ಕಲಬುರಗಿ ಜಿಲ್ಲೆಯ ವಿವಿಧ ಭಾಗಗಳ ಸೌಹಾರ್ದ ಸಹಕಾರಿಗಳ ಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ಸಿಗೆ ಕೈಜೋಡಿಸಿದರು.

# ಕದನ ವಿರಾಮ ಒಪ್ಪಂದದ ಹೊರತಾಗಿಯೂ ದಕ್ಷಿಣ ಲೆಬನಾನ್‌ನಲ್ಲಿ ಇಸ್ರೇಲಿ ಮಿಲಿಟರಿ, ಹಿಜ್ಬುಲ್ಲಾ ನಡುವೆ ನಿಲ್ಲದ ಸಂಘರ್ಷ

**ಬೈರುತ್, ಜೂನ್ 2:** ಲೆಬನಾನ್‌ನಲ್ಲಿ ನೆಲೆಗೊಂಡಿರುವ ಉಗ್ರಗಾಮಿ ಗುಂಪು ಇಸ್ರೇಲಿ ಮಿಲಿಟರಿ ಮತ್ತು ಹಿಜ್ಬುಲ್ಲಾ, ಭಾಗಶಃ ಕದನ ವಿರಾಮಕ್ಕಾಗಿ ಅಮೆರಿಕದ ಯೋಜನೆಯನ್ನು ಒಪ್ಪಿಕೊಂಡಿದ್ದರೂ ಸಹ, ದಕ್ಷಿಣ ಲೆಬನಾನ್‌ನಲ್ಲಿ ತೀವ್ರ ಘರ್ಷಣೆಗಳನ್ನು ಮುಂದುವರೆಸಿವೆ. ಸೋಮವಾರ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎರಡೂ ಕಡೆಯವರು "ಎಲ್ಲಾ ಗುಂಡಿನ ದಾಳಿಯನ್ನು ನಿಲ್ಲಿಸಲು ಒಪ್ಪಿಕೊಂಡಿದ್ದಾರೆ" ಎಂದು ಘೋಷಿಸಿದರು, ಮತ್ತು ಲೆಬನಾನ್‌ನಲ್ಲಿನ ಐಡಿಎಫ್‌ನ ಕ್ರಮಗಳು ದುರ್ಬಲವಾದ ಯುಎಸ್–ಇರಾನ್ ಕದನ ವಿರಾಮಕ್ಕೆ ನೇರ ಬೆದರಿಕೆಯಾಗಿದೆ ಎಂಬ ಇರಾನಿನ ಎಚ್ಚರಿಕೆಗಳ ನಡುವೆಯೂ.

ಇಸ್ರೇಲ್ ಮೇಲಿನ ದಾಳಿಗಳನ್ನು ನಿಲ್ಲಿಸಲು ಮತ್ತು ಇಸ್ರೇಲ್ ಲೆಬನಾನ್ ರಾಜಧಾನಿ ಬೈರುತ್ ಮೇಲೆ ದಾಳಿ ಮಾಡದಂತೆ ಹಿಜ್ಬುಲ್ಲಾ ಯೋಜನೆಯನ್ನು ಒಪ್ಪಿಕೊಂಡಿದೆ ಎಂದು ಲೆಬನಾನ್ ಹೇಳಿದೆ. ಒಪ್ಪಂದವನ್ನು ದೃಢಪಡಿಸಿದ ಇಸ್ರೇಲಿ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಐಡಿಎಫ್ ಈ ಯೋಜನೆಗೆ ಬದ್ಧವಾಗಿರುತ್ತದೆ ಆದರೆ "ಹಿಜ್ಬುಲ್ಲಾ ನಮ್ಮ ನಗರಗಳು ಮತ್ತು ನಾಗರಿಕರ ಮೇಲೆ ದಾಳಿ ಮಾಡುವುದನ್ನು ನಿಲ್ಲಿಸದಿದ್ದರೆ" ಬೈರುತ್ ಮೇಲೆ ದಾಳಿಗಳನ್ನು ಪುನರಾರಂಭಿಸುತ್ತದೆ ಮತ್ತು ಐಡಿಎಫ್ ಪಡೆಗಳು ಇನ್ನೂ ದಕ್ಷಿಣ ಲೆಬನಾನ್‌ನಲ್ಲಿ ಕಾರ್ಯನಿರ್ವಹಿಸುತ್ತವೆ ಎಂದು ಹೇಳಿದರು. ತೋರಿಕೆಯಲ್ಲಿ ಅಂಟಿಕೊಂಡಂತೆ ತೋರುತ್ತಿದ್ದರೂ, ಕದನ ವಿರಾಮವು ಹೆಚ್ಚಾಗಿ ಹಿಡಿದಿರುವಂತೆ ತೋರುತ್ತಿದೆ, ಆದರೂ ಎರಡು ಗುಂಪುಗಳ ನಡುವೆ ರಾತ್ರಿಯಿಡೀ ಮತ್ತಷ್ಟು ದೃಢಪಡಿಸಿದ ಹಿಂಸಾಚಾರ ಸಂಭವಿಸಿದೆ. ಇರಾನ್ ಬೆಂಬಲಿತ ಇಸ್ಲಾಮಿಸ್ಟ್ ಉಗ್ರಗಾಮಿ ಗುಂಪಿನ ಪ್ರಕಾರ, ಅದರ ಹೋರಾಟಗಾರರು ದಕ್ಷಿಣ ಲೆಬನಾನ್ನ ಹದ್ದಾಥಾ ಮತ್ತು ಬಯಾಡಾ ಪಟ್ಟಣಗಳಲ್ಲಿ ಇಸ್ರೇಲಿ ಟ್ಯಾಂಕ್‌ಗಳನ್ನು ಕ್ಷಿಪಣಿಗಳು ಮತ್ತು ಶೆಲ್‌ಗಳಿಂದ ಗುರಿಯಾಗಿಸಿಕೊಂಡಿದ್ದರು, ಆದರೂ ಮಂಗಳವಾರ ಮುಂಜಾನೆ ಲೆಬನಾನ್ನಿಂದ ಹಾರಿಸಲಾದ ಎರಡು ಸ್ಫೋಟಕಗಳನ್ನು ತಡೆಹಿಡಿದಿರುವುದಾಗಿ ಐಡಿಎಫ್ ಹೇಳಿದೆ.



ಹಿಜ್ಬುಲ್ಲಾ ಇಸ್ರೇಲ್‌ನೊಂದಿಗೆ 'ಭಾಗಶಃ ಕದನ ವಿರಾಮ'ವನ್ನು ಸ್ವೀಕರಿಸುವುದಿಲ್ಲ ಎಂದು ಹಿರಿಯ ಅಧಿಕಾರಿ ಹೇಳುತ್ತಾರೆ.

ದಕ್ಷಿಣ ಲೆಬನಾನ್‌ನಲ್ಲಿ ಮಿಲಿಟರಿ ಕಾರ್ಯಾಚರಣೆಗಳು ಮುಂದುವರಿಯಲಿವೆ ಎಂದು ಇಸ್ರೇಲ್ ರಕ್ಷಣಾ ಸಚಿವರು ಹೇಳಿದ್ದಾರೆ.

ಯಾವುದೇ ಗಾಯಗಳ ವರದಿಯಾಗಿಲ್ಲ. ಲೆಬನಾನ್ನ ಸರ್ಕಾರಿ ಸ್ವಾಮ್ಯದ ರಾಷ್ಟ್ರೀಯ ಸುದ್ದಿ ಸಂಸ್ಥೆ ತನ್ನ ದಕ್ಷಿಣದ ಹಲವಾರು ಪ್ರದೇಶಗಳ ಮೇಲೆ ಇಸ್ರೇಲಿ ದಾಳಿಗಳನ್ನು ವರದಿ ಮಾಡಿದೆ ಮತ್ತು ಡೆಬ್ಬೈನ್ ಪಟ್ಟಣವನ್ನು ದೊಡ್ಡ ಪ್ರಮಾಣದ ಧ್ವಂಸದಿಂದ "ಅತ್ಯಂತ ಹಿಂಸಾತ್ಮಕ" ಸ್ಫೋಟ ಸಂಭವಿಸಿದೆ ಎಂದು ವರದಿ ಮಾಡಿದೆ. ಸೋಮವಾರ ಬೆಳಗ್ಗೆ, ಇಸ್ರೇಲಿ ಪ್ರಧಾನ ಮಂತ್ರಿ ಅವರು ಇಸ್ಲಾಮಿಸ್ಟ್ ಗುಂಪಿನ ರಾಕೆಟ್ ಮತ್ತು ಡ್ರೋನ್ ದಾಳಿಗೆ ಪ್ರತೀಕಾರವಾಗಿ ಬೈರುತ್‌ನ ದಕ್ಷಿಣ ಉಪನಗರಗಳಲ್ಲಿನ "ಭಯೋತ್ಪಾದಕ ಗುರಿಗಳ" ವಿರುದ್ಧ ದಾಳಿಗೆ ಆದೇಶಿಸಿದ್ದಾರೆ ಎಂದು ಹೇಳಿದರು. ಈ ಹೇಳಿಕೆಯು ಇರಾನಿನ ಅಧಿಕಾರಿಗಳಿಂದ ಹಲವಾರು ಎಚ್ಚರಿಕೆಗಳನ್ನು ನೀಡಿತು, ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಯುಎಸ್–ಇರಾನ್ ಒಪ್ಪಂದವು "ಲೆಬನಾನ್ ಸೇರಿದಂತೆ ಎಲ್ಲಾ ರಂಗಗಳಲ್ಲಿ ನಿಸ್ಸಂದಿಗ್ಧವಾಗಿ ಕದನ ವಿರಾಮ" ಮತ್ತು "ಒಂದು ರಂಗದಲ್ಲಿ ಅದರ ಉಲ್ಲಂಘನೆಯು ಎಲ್ಲಾ ರಂಗಗಳಲ್ಲಿ ಕದನ ವಿರಾಮದ ಉಲ್ಲಂಘನೆಯಾಗಿದೆ" ಎಂದು ಹೇಳಿದರು.

ಪ್ರತ್ಯೇಕವಾಗಿ, ಇರಾನ್‌ನ ಸಂಯೋಜಿತ ಅರೆ–ಅಧಿಕೃತ ತಸ್ನಿಮ್ ಸುದ್ದಿ ಸಂಸ್ಥೆ ವರದಿ ಮಾಡಿರುವ ಪ್ರಕಾರ, ಲೆಬನಾನ್ನಲ್ಲಿ ಇಸ್ರೇಲಿ ಮಿಲಿಟರಿ ಕ್ರಮಗಳು ಮುಂದುವರಿದರೆ, "ಕೆಂಪು ಸಮುದ್ರದ ಪ್ರವೇಶದ್ವಾರದಲ್ಲಿ ಬಾಬ್ ಅಲ್–ಮಂದಾಬ್ ಜಲಸಂಧಿ ಸೇರಿದಂತೆ ಇತರ ರಂಗಗಳನ್ನು ಸಕ್ರಿಯಗೊಳಿಸುವ" ಬೆದರಿಕೆ ಹಾಕಿದರೆ, ಜಾಗತಿಕ ಸಾಗಣೆ ಮತ್ತು ತೈಲ ಹರಿವನ್ನು ಮತ್ತಷ್ಟು ಅಡ್ಡಿಪಡಿಸಿದರೆ, ಟೆಹ್ರಾನ್ ಯುಎಸ್ ಜೊತೆಗಿನ ಎಲ್ಲಾ ಪರೋಕ್ಷ ಮಾತುಕತೆಗಳನ್ನು ಸ್ಥಗಿತಗೊಳಿಸಬಹುದು.

### ಬೈರುತ್‌ನಲ್ಲಿ ಇಸ್ರೇಲ್ ಸೇನೆ ಇಲ್ಲ: ಟ್ರಂಪ್



ಆದಾಗ್ಯೂ, ಟ್ರೂತ್ ಸೋಷಿಯಲ್‌ಗೆ ಸಂಬಂಧಿಸಿದಂತೆ, ಟ್ರಂಪ್ ಇರಾನ್ ಜೊತೆಗಿನ ಮಾತುಕತೆಗಳು "ತ್ವರಿತ ವೇಗದಲ್ಲಿ" ಮುಂದುವರೆದಿವೆ ಎಂದು ಒತ್ತಾಯಿಸಿದರು ಮತ್ತು ಅವರು ನೆತನ್ಯಾಹು ಮತ್ತು ಹಿಜ್ಬುಲ್ಲಾ ಪ್ರತಿನಿಧಿಗಳೊಂದಿಗೆ ಮಾತನಾಡಿದ್ದಾರೆ ಎಂದು ಹೇಳಿದರು. "ನಾನು ಇಸ್ರೇಲ್‌ನ ಪ್ರಧಾನಿ ನೆತನ್ಯಾಹು ಅವರೊಂದಿಗೆ ಬಹಳ ಉತ್ಪಾದಕ ಕರೆಯನ್ನು ಹೊಂದಿದ್ದೇನೆ ಮತ್ತು ಬೈರುತ್ಗೆ ಯಾವುದೇ ಪಡೆಗಳು ಹೋಗುವುದಿಲ್ಲ, ಮತ್ತು ಅವರ ದಾರಿಯಲ್ಲಿರುವ ಯಾವುದೇ ಪಡೆಗಳನ್ನು ಈಗಾಗಲೇ ಹಿಂತಿರುಗಿಸಲಾಗಿದೆ" ಎಂದು ಯುಎಸ್ ಅಧ್ಯಕ್ಷರು ಬರೆದಿದ್ದಾರೆ. "ಅಂತೆಯೇ, ಉನ್ನತ ಸ್ಥಾನದಲ್ಲಿರುವ ಪ್ರತಿನಿಧಿಗಳ ಮೂಲಕ, ನಾನು ಹಿಜ್ಬುಲ್ಲಾ ಅವರೊಂದಿಗೆ ಉತ್ತಮ ಮಾತುಕತೆ ನಡೆಸಿದ್ದೇನೆ ಮತ್ತು ಎಲ್ಲಾ ಗುಂಡಿನ ದಾಳಿ ನಿಲ್ಲುತ್ತದೆ ಎಂದು ಅವರು ಒಪ್ಪಿಕೊಂಡರು – ಇಸ್ರೇಲ್ ಅವರ ಮೇಲೆ ದಾಳಿ ಮಾಡುವುದಿಲ್ಲ ಮತ್ತು ಅವರು ಇಸ್ರೇಲ್ ಮೇಲೆ ದಾಳಿ ಮಾಡುವುದಿಲ್ಲ."

ಲೆಬನಾನ್ ಆರೋಗ್ಯ ಸಚಿವಾಲಯದ ಅಂದಾಜಿನ ಪ್ರಕಾರ, ಮಾರ್ಚ್ 2 ರಲ್ಲಿ ಐಡಿಎಫ್–ಹಿಜ್ಬುಲ್ಲಾ ಯುದ್ಧ ಪ್ರಾರಂಭವಾದಾಗಿನಿಂದ ದೇಶದಲ್ಲಿ ಕನಿಷ್ಠ 3,433 ಜನರು ಸಾವನ್ನಪ್ಪಿದ್ದಾರೆ, ಆದರೆ ಇಸ್ರೇಲ್ ತನ್ನ 26 ಸೈನಿಕರು ಮತ್ತು ನಾಲ್ವರು ನಾಗರಿಕರು ಗಡಿಯ ಎರಡೂ ಬದಿಗಳಲ್ಲಿ ಒಂದೇ ಅವಧಿಯಲ್ಲಿ ಸಾವನ್ನಪ್ಪಿದ್ದಾರೆ ಎಂದು ದೃಢಪಡಿಸಿದೆ.

# ನಾಲ್ಕನೇ ಸುತ್ತಿನ ಮಾತುಕತೆ: ಉದ್ವಿಗ್ನತೆಯನ್ನು ಕಡಿಮೆ ಮಾಡಲು ಅಮೆರಿಕ ಸಂಧಾನ ಯತ್ನ: ವಾಷಿಂಗ್ಟನ್‌ನಲ್ಲಿ ಇಸ್ರೇಲ್– ಲೆಬನಾನ್ ನೇರ ಶಾಂತಿ ಮಾತುಕತೆ



**ವಾಷಿಂಗ್ಟನ್, ಜೂನ್ 2:** ಇಸ್ರೇಲ್ ಮತ್ತು ಲೆಬನಾನ್ ಅಧಿಕಾರಿಗಳ ನಡುವಿನ ನಾಲ್ಕನೇ ಸುತ್ತಿನ ನೇರ ಮಾತುಕತೆಗಳು ಮಂಗಳವಾರ ವಾಷಿಂಗ್ಟನ್‌ನಲ್ಲಿರುವ ಯುಎಸ್ ಸ್ಟೇಟ್ ಡಿಪಾರ್ಟ್‌ಮೆಂಟ್‌ನಲ್ಲಿ ಪ್ರಾರಂಭವಾದವು ಎಂದು ಲೆಬನಾನ್‌ನ ಸರ್ಕಾರಿ ಸ್ವಾಮ್ಯದ ರಾಷ್ಟ್ರೀಯ ಸುದ್ದಿ ಸಂಸ್ಥೆ ತಿಳಿಸಿದೆ. ಅಸ್ಥಿರವಾದ ಇಸ್ರೇಲ್–ಲೆಬನಾನ್ ಗಡಿಯಲ್ಲಿ ಉದ್ವಿಗ್ನತೆಯನ್ನು ಕಡಿಮೆ ಮಾಡುವ ಮತ್ತೊಂದು ರಾಜತಾಂತ್ರಿಕ ಪ್ರಯತ್ನದ ಭಾಗವಾಗಿ ಈ ಮಾತುಕತೆಗಳು ನಡೆಯುತ್ತಿವೆ. ಕದನ ವಿರಾಮ ಚೌಕಟ್ಟಿನ ಅಸ್ತಿತ್ವದ ಹೊರತಾಗಿಯೂ ದಕ್ಷಿಣ ಲೆಬನಾನ್‌ನಲ್ಲಿ ಹಿಂಸಾಚಾರವು ಉಲ್ಬಣಗೊಳ್ಳುತ್ತಿರುವುದರಿಂದ ಮಾತುಕತೆಗಳು ವಿಶೇಷವಾಗಿ ಸೂಕ್ಷ್ಮ ಕ್ಷಣದಲ್ಲಿ ಬಂದಿವೆ, ಇದು ವ್ಯಾಪಕ ಪ್ರಾದೇಶಿಕ ಮುಖಾಮುಖಿಯ ಭಯವನ್ನು ಹೆಚ್ಚಿಸಿದೆ. ಲೆಬನಾನ್‌ನ ಸರ್ಕಾರಿ ಸ್ವಾಮ್ಯದ ರಾಷ್ಟ್ರೀಯ ಸುದ್ದಿ ಸಂಸ್ಥೆ (ಎನ್ಎನ್ಎ) ಪ್ರಕಾರ, ಎರಡೂ ದೇಶಗಳ ಪ್ರತಿನಿಧಿಗಳು ಭದ್ರತಾ ಕಾಳಜಿಗಳನ್ನು ಪರಿಹರಿಸುವ, ಹಗೆತನವನ್ನು ಕಡಿಮೆ ಮಾಡುವ ಮತ್ತು ಮತ್ತಷ್ಟು ಉಲ್ಬಣಗೊಳ್ಳುವುದನ್ನು ತಡೆಯುವ ಗುರಿಯನ್ನು ಹೊಂದಿರುವ ಚರ್ಚೆಗಳಲ್ಲಿ ಭಾಗವಹಿಸುತ್ತಿದ್ದಾರೆ. ಒಪ್ಪಂದವನ್ನು ಮೊದಲು ಘೋಷಿಸಿದ ಯುಎಸ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಹಿಜ್ಬೊಲ್ಲಾ ಮಧ್ಯವರ್ತಿಗಳ ಮೂಲಕ ಇಸ್ರೇಲ್ ಮೇಲೆ ದಾಳಿ ಮಾಡುವುದಿಲ್ಲ ಎಂದು ಪ್ರತಿಜ್ಞೆ ಮಾಡಿದ್ದಾರೆ ಎಂದು ಹೇಳಿದರು. ಮಧ್ಯವರ್ತಿಗಳೊಂದಿಗೆ ಅಥವಾ ಇಲ್ಲದೆ ಯಾವುದೇ ಯುಎಸ್ ಅಧ್ಯಕ್ಷರು ಹಿಜ್ಬುಲ್ಲಾ ಜೊತೆ ಮಾತನಾಡಿಲ್ಲ. ಅಮೆರಿಕ ಈ ಗುಂಪನ್ನು ಭಯೋತ್ಪಾದಕ ಸಂಘಟನೆ ಎಂದು ಹೆಸರಿಸಿದೆ. ಪೂರ್ವ ಮೆಡಿಟರೇನಿಯನ್‌ನಲ್ಲಿ ಸ್ಥಿರತೆಯನ್ನು ಕಾಪಾಡಿಕೊಳ್ಳಲು ರಾಜತಾಂತ್ರಿಕ ನಿಶ್ಚಿತಾರ್ಥವು ನಿರ್ಣಾಯಕವೆಂದು ನೋಡುವ ಪ್ರಾದೇಶಿಕ ಮತ್ತು ಅಂತರರಾಷ್ಟ್ರೀಯ ಪಾಲುದಾರರು ಈ ಮಾತುಕತೆಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ. ರಾಜತಾಂತ್ರಿಕ ಪ್ರಯತ್ನಗಳ ಹೊರತಾಗಿಯೂ, ನಬತಿಹ್ ಮತ್ತು ಟೈರ್ ಜಿಲ್ಲೆಗಳ ಪ್ರದೇಶಗಳನ್ನು ಗುರಿಯಾಗಿಸಿಕೊಂಡು ಇಸ್ರೇಲಿ ವಾಯುದಾಳಿಗಳು ಮಂಗಳವಾರ ದಕ್ಷಿಣ ಲೆಬನಾನ್‌ನಾದ್ಯಂತ ಮುಂದುವರೆದವು. ಟೈರ್‌ನ ಜಬಲ್ ಅಮೆಲ್ ಆಸ್ಪತ್ರೆಯ ಬಳಿ ಸೋಮವಾರ ನಡೆದ ದಾಳಿಯಲ್ಲಿ ಗಾಯಗೊಂಡವರ ಸಂಖ್ಯೆ 127 ಕ್ಕೆ ಏರಿದೆ, ಇದರಲ್ಲಿ 39 ಆರೋಗ್ಯ ಕಾರ್ಯಕರ್ತರು ಸೇರಿದ್ದಾರೆ ಎಂದು ಲೆಬನಾನಿನ ಆರೋಗ್ಯ ಅಧಿಕಾರಿಗಳು ತಿಳಿಸಿದ್ದಾರೆ. ಕನಿಷ್ಠ ನಾಲ್ಕು ಜನರು ಸಾವನ್ನಪ್ಪಿದ್ದಾರೆ.


# ಹಾರ್ಮುಜ್ ಜಲಸಂಧಿ ಹಡಗುಗಳಿಗೆ ಮತ್ತೆ ಮುಕ್ತ: ಇರಾನ್ ಮೇಲಿನ ನಿರ್ಬಂಧ ತೆರವು ಇಲ್ಲ– ಅಮೆರಿಕ ಸರ್ಕಾರದ ಸ್ಪಷ್ಟೀಕರಣ

**ವಾಷಿಂಗ್ಟನ್,ಜೂನ್ 2 :** ಹಾರ್ಮುಜ್ ಜಲಸಂಧಿಯನ್ನು ಸಂಪೂರ್ಣವಾಗಿ ಪುನಃ ತೆರೆಯುವುದಕ್ಕೆ ಬದಲಾಗಿ ಅಮೆರಿಕ ಇರಾನ್ ಮೇಲಿನ ನಿರ್ಬಂಧಗಳನ್ನು ತೆಗೆದುಹಾಕುವುದಿಲ್ಲ ಎಂದು ರುಬಿಯೊ ಹೇಳುತ್ತಾರೆ. "ಅದನ್ನು ಚರ್ಚಿಸಲಾಗಿಲ್ಲ, ಅದನ್ನು ನೀಡಲಾಗಿಲ್ಲ" ಎಂದು ಅವರು ಅಮೆರಿಕ ಸಂಸದರಿಗೆ ತಿಳಿಸಿದರು, ಯಾವುದೇ ನಿರ್ಬಂಧಗಳ ಪರಿಹಾರವು ಪುಷ್ಟೀಕರಿಸಿದ ಯುರೇನಿಯಂ ಮತ್ತು ಪರಮಾಣು ಕಡತದ ಇತರ ಅಂಶಗಳನ್ನು ತ್ಯಜಿಸುವುದರ ಮೇಲೆ "ಷರತ್ತು ಆಧಾರಿತವಾಗಿದೆ" ಎಂದು ಹೇಳಿದರು. ಇರಾನ್‌ನೊಂದಿಗಿನ ಯುಎಸ್ ಮಾತುಕತೆಗಳು "ಅವರ ಪರಮಾಣು ಕಾರ್ಯಕ್ರಮದ ಅಂಶಗಳನ್ನು ಒಳಗೊಂಡಿರಬಹುದು, ಅದನ್ನು ಕೇವಲ ಒಂದು ತಿಂಗಳ ಹಿಂದೆ, ಕೇವಲ ಒಂದು ವರ್ಷದ ಹಿಂದೆ, ಅವರು ಉಲ್ಲೇಖಿಸಲು ಸಹ ನಿರಾಕರಿಸುತ್ತಿದ್ದರು" ಎಂದು ಮಾರ್ಕೊ ರುಬಿಯೊ ಹೇಳುತ್ತಾರೆ. "ಇದು ಅಂತಿಮವಾಗಿ ಸ್ವೀಕಾರಾರ್ಹ ಒಪ್ಪಂದಕ್ಕೆ ಕಾರಣವಾಗುತ್ತದೆ ಎಂಬುದಕ್ಕೆ ಅದು ಖಾತರಿಯಲ್ಲ" ಎಂದು ರುಬಿಯೊ ಅಮೆರಿಕ ಸಂಸದರಿಗೆ ತಿಳಿಸಿದರು.

### ಇರಾನ್‌ನ ಹೊಸ ಸರ್ವೋಚ್ಚ ನಾಯಕ ಜೀವಂತವಾಗಿದ್ದಾರೆ, ರುಬಿಯೊ:

ಇರಾನ್‌ನ ಸರ್ವೋಚ್ಚ ನಾಯಕ ಜೀವಂತವಾಗಿದ್ದಾರೆ ಮತ್ತು "ಹೆಚ್ಚಾಗಿ ತೊಡಗಿಸಿಕೊಂಡಿದ್ದಾರೆ" ಎಂದು ರುಬಿಯೊ ಕಾಂಗ್ರೆಸ್ ಮುಂದೆ ತಮ್ಮ ಸಾಕ್ಷ್ಯದಲ್ಲಿ ಹೇಳುತ್ತಾರೆ. ಮೊಜ್ತಬಾ ಖಮೇನಿ ಮಾಜಿ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿ ಅವರ ಮಗ, ಅವರು ಈ ವರ್ಷದ ಆರಂಭದಲ್ಲಿ ಅಮೆರಿಕ ದಾಳಿಯಲ್ಲಿ ಕೊಲ್ಲಲ್ಪಟ್ಟರು, ಈ ಸಮಯದಲ್ಲಿ ಮೊಜ್ತಬಾ ಗಾಯಗೊಂಡರು ಎಂದು ವರದಿಯಾಗಿದೆ.

ಅವರದ್ದೇ ಎಂದು ಹೇಳಲಾದ ಲಿಖಿತ ಸಂದೇಶಗಳನ್ನು ಹೊರತುಪಡಿಸಿ ಮತ್ತು ರಾಜ್ಯ ಮಾಧ್ಯಮಗಳಲ್ಲಿ ಓದಿದ ಸಂದೇಶಗಳನ್ನು ಹೊರತುಪಡಿಸಿ, ಅವರನ್ನು ಸಾರ್ವಜನಿಕವಾಗಿ ಯಾರೂ ನೋಡಿಲ್ಲ ಅಥವಾ ಕೇಳಿಲ್ಲ. ಅವರು ಅಮೆರಿಕ ಮತ್ತು ಇಸ್ರೇಲ್‌ನಿಂದ ಹತ್ಯೆಗೆ ಗುರಿಯಾಗುವ ಸಾಧ್ಯತೆ ಇದೆ ಎಂಬ ಕಳವಳಗಳ ನಡುವೆ ಇದು ಬಂದಿದೆ.



# ಟೆಹ್ರಾನ್–ವಾಷಿಂಗ್ಟನ್ ಮಾತುಕತೆ ಸ್ಥಗಿತ ವರದಿ ಸುಳ್ಳು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸ್ಪಷ್ಟನೆ

**ವಾಷಿಂಗ್ಟನ್,ಜೂನ್ 2 :** ಕೆಲವು ದಿನಗಳ ಹಿಂದೆ ಅಮೆರಿಕ ಮತ್ತು ಇರಾನ್ ಸಂದೇಶ ವಿನಿಮಯವನ್ನು ನಿಲ್ಲಿಸಿವೆ ಎಂಬ ವರದಿಗಳು "ಸುಳ್ಳು ಮತ್ತು ತಪ್ಪಾದವು" ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಂಗಳವಾರ ಹೇಳಿದ್ದಾರೆ. "ನಮ್ಮ ನಡುವಿನ ಸಂಭಾಷಣೆಗಳು ನಿರಂತರವಾಗಿ ನಡೆಯುತ್ತಿವೆ, ನಾಲ್ಕು ದಿನಗಳ ಹಿಂದೆ, ಮೂರು ದಿನಗಳ ಹಿಂದೆ, ಎರಡು ದಿನಗಳ ಹಿಂದೆ, ಒಂದು ದಿನದ ಹಿಂದೆ ಮತ್ತು ಇಂದು ಸೇರಿದಂತೆ. ಅವರು ಎಲ್ಲಿಗೆ ಕರೆದೊಯ್ಯುತ್ತಾರೆ ಎಂಬುದು ಯಾರಿಗೂ ತಿಳಿದಿಲ್ಲ, ಆದರೆ ನಾನು ಇರಾನ್‌ಗೆ ಹೇಳಿದಂತೆ, "ಒಂದಲ್ಲ ಒಂದು ರೀತಿಯಲ್ಲಿ ನೀವು ಒಪ್ಪಂದ ಮಾಡಿಕೊಳ್ಳುವ ಸಮಯ ಬಂದಿದೆ. ನೀವು ಇದನ್ನು 47 ವರ್ಷಗಳಿಂದ ಮಾಡುತ್ತಿದ್ದೀರಿ ಮತ್ತು ಇದನ್ನು ಇನ್ನು ಮುಂದೆ ಮುಂದುವರಿಸಲು ಅನುಮತಿಸಲಾಗುವುದಿಲ್ಲ!"" ಎಂದು ಟ್ರಂಪ್ ಟ್ರುತ್ ಸೋಶಿಯಲ್‌ನಲ್ಲಿ ಪೋಸ್ಟ್‌ನಲ್ಲಿ ಹೇಳಿದ್ದಾರೆ.

# ದಕ್ಷಿಣ ಕೊರಿಯಾದ ಷೇರು ಮಾರುಕಟ್ಟೆ ಸಾಧನೆ: ವಿಶ್ವದ ಆರನೇ ಅತಿದೊಡ್ಡ ಬಂಡವಾಳ ಪೇಟೆ

**ನವದೆಹಲಿ, ಜೂನ್ 2 :** ತೈವಾನ್ ನಂತರ, ದಕ್ಷಿಣ ಕೊರಿಯಾದ ಷೇರು ಮಾರುಕಟ್ಟೆ ಈಗ ಭಾರತವನ್ನು ಹಿಂದಿಕ್ಕಿ ವಿಶ್ವದ ಆರನೇ ಅತಿದೊಡ್ಡ ಮಾರುಕಟ್ಟೆಯಾಗಿದೆ. ಜಾಗತಿಕ ಕೃತಕ ಬುದ್ಧಿಮತ್ತೆ ನಿರ್ಮಾಣಕ್ಕೆ ಶಕ್ತಿ ತುಂಬುವ ಚಿಪ್ ಉದ್ಯಮಗಳ ನಿರಂತರ ಏರಿಕೆಯಿಂದ ಈ ಏರಿಕೆ ಸಂಭವಿಸಿದೆ. ದತ್ತಾಂಶದ ಪ್ರಕಾರ, ಕೊರಿಯಾ–ಪಟ್ಟಿ ಮಾಡಲಾದ ಕಂಪನಿಗಳ ಒಟ್ಟು ಮಾರುಕಟ್ಟೆ ಬಂಡವಾಳೀಕರಣವು ಈ ವರ್ಷ ಶೇ. 86 ರಷ್ಟು ಏರಿಕೆಯಾಗಿ $5 ಟ್ರಿಲಿಯನ್‌ಗೆ ತಲುಪಿದೆ. ಇದಕ್ಕೆ ವ್ಯತಿರಿಕ್ತವಾಗಿ, ಭಾರತದ ಮಾರುಕಟ್ಟೆ ಬಂಡವಾಳೀಕರಣವು $4.8 ಟ್ರಿಲಿಯನ್‌ಗೆ ಇಳಿದಿದೆ. ದಕ್ಷಿಣ ಕೊರಿಯಾದ ಮಾರುಕಟ್ಟೆಯಲ್ಲಿ, 1 ಟ್ರಿಲಿಯನ್ ಡಾಲರ್ ಮೌಲ್ಯಮಾಪನ ಕ್ಲಬ್ನ ಹೊಸದಾಗಿ ಮುದ್ರಿಸಲಾದ ಸದಸ್ಯರಾದ ಸ್ಯಾಮ್ಸಂಗ್ ಎಲೆಕ್ಟ್ರಾನಿಕ್ಸ್ ಕಂಪನಿ ಮತ್ತು ಎಸ್ಕೆ ಹೈನಿಕ್ಸ್ ಇಂಕ್, ಕೊರಿಯಾದ ಷೇರುಗಳಲ್ಲಿ ಏರಿಕೆಗೆ ಕಾರಣವಾಗಿವೆ. ಎಐ–ಸಂಬಂಧಿತ ಲಾಭಗಳ ಜೊತೆಗೆ, ಕೊರಿಯಾದ ಷೇರು ಮಾರುಕಟ್ಟೆಯು ಅಧ್ಯಕ್ಷ ಲೀ ಜೇ ಮ್ಯುಂಗ್ ಅವರ ಕಾರ್ಪೊರೇಟ್ ಸುಧಾರಣೆಗಳಿಗೆ ಒತ್ತಾಯದಿಂದಲೂ ಪ್ರಯೋಜನ ಪಡೆದಿದೆ. ಇದಕ್ಕೂ ಮೊದಲು, ತೈವಾನ್‌ನ ಷೇರು ಮಾರುಕಟ್ಟೆಯು ಮೌಲ್ಯಮಾಪನದ ವಿಷಯದಲ್ಲಿ ಭಾರತವನ್ನು ಹಿಂದಿಕ್ಕಿ ವಿಶ್ವದ ಐದನೇ ಅತಿದೊಡ್ಡ ಮಾರುಕಟ್ಟೆಯಾಯಿತು. ಈ ಸಾಧನೆಗೆ ಪ್ರಮುಖ ಕಾರಣ ವಿಶ್ವದ ಅತಿದೊಡ್ಡ ಚಿಪ್ ತಯಾರಕ ತೈವಾನ್ ಸೆಮಿಕಂಡಕ್ಟರ್ ತಯಾರಿಕ ಕಂಪನಿ ತೈವಾನ್‌ನ ಮಾರುಕಟ್ಟೆ ಬಂಡವಾಳೀಕರಣವು 4.95 ಟ್ರಿಲಿಯನ್‌ಗೆ ಏರಿದರೆ, ಭಾರತದ ಮೌಲ್ಯವು 4.92 ಟ್ರಿಲಿಯನ್‌ಗೆ ಇಳಿದಿದೆ. ತೈವಾನ್ನ ಷೇರು ಮಾರುಕಟ್ಟೆ ಈಗ ಯುಎಸ್, ಚೀನಾ, ಜಪಾನ್ ಮತ್ತು ಹಾಂಗ್‌ಕಾಂಗ್ ನಂತರ ಮಾತ್ರ ಹಿಂದಿದೆ. ಈ ಏರಿಕೆಯು ತೈವಾನ್ನ ಸೆಮಿಕಂಡಕ್ಟರ್ ಪರಿಸರ ವ್ಯವಸ್ಥೆಯಲ್ಲಿ ಹೂಡಿಕೆದಾರರ ಬಲವಾದ ವಿಶ್ವಾಸವನ್ನು ಪ್ರತಿಬಿಂಬಿಸುತ್ತದೆ.

# ಜಾಹೀರಾತು ಶುಲ್ಕ ಹೆಚ್ಚಿಸಿದ ವೈಭವ್ ಸೂರ್ಯವಂಶಿ

**ನವದೆಹಲಿ, ಜೂ. 2:** ಭಾರತೀಯ ಕ್ರಿಕೆಟ್ನ ವಿಸ್ಮಯ ಬಾಲಕ ಎಂದೇ ಗುರುತಿಸಿಕೊಂಡಿರುವ 15 ವರ್ಷದ ವೈಭವ್ ಸೂರ್ಯವಂಶಿ, ತಮ್ಮ ಸ್ಫೋಟಕ ಬ್ಯಾಟಿಂಗ್ ಶೈಲಿಯಿಂದ ಜಗತ್ತಿನ ಗಮನ ಸೆಳೆದಿದ್ದಾರೆ. ಇತ್ತೀಚೆಗಷ್ಟೇ ಮುಕ್ತಾಯಗೊಂಡ ಐಪಿಎಲ್ 2026ರ ಸೀಸನ್ನಲ್ಲಿ ಬರೋಬ್ಬರಿ 237.30ರ ಅದ್ಭುತ ಸ್ಟ್ರೈಕ್–ರೇಟ್‌ಮಲ್ಲಿ 776 ರನ್ ಚಚ್ಚಿದ ವೈಭವ್, ಪ್ರತಿಷ್ಠಿತ 'ಆರೆಂಜ್ ಕ್ಯಾಪ್' ಹಾಗೂ ಈ ಸೀಸನ್ನ 'ಮೋಸ್ಟ್ ವ್ಯಾಲ್ಯೂಯಬಲ್ ಪ್ಲೇಯರ್' ಪ್ರಶಸ್ತಿಗಳನ್ನು ಮುಡಿಗೇರಿಸಿಕೊಂಡಿದ್ದಾರೆ.

ಸದ್ಯ ರಾಜಸ್ಥಾನ ರಾಯಲ್ಸ್ ತಂಡದೊಂದಿಗೆ ವಾರ್ಷಿಕ 1.10 ಕೋಟಿ ರೂ. ಒಪ್ಪಂದ ಹೊಂದಿರುವ ಸೂರ್ಯವಂಶಿ, ತಮ್ಮ ಐಪಿಎಲ್ ವೇತನ ಬದಲಾವಣೆಗಾಗಿ ಇನ್ನು ಒಂದು ವರ್ಷ ಕಾಯಬೇಕಾಗಬಹುದು ಆದರೆ, ಭವಿಷ್ಯದಲ್ಲಿ ಇವರು ಐಪಿಎಲ್ ಹರಾಜಿಗೆ ಬಂದರೆ ಬರೋಬ್ಬರಿ 30 ಕೋಟಿ ರೂ.ವರೆಗೂ ಬಿಡ್ ಪಡೆಯಬಹುದು ಎಂದು ಅಂದಾಜಿಸಲಾಗಿದೆ. ಮಾರುಕಟ್ಟೆ ತಜ್ಞರ ಪ್ರಕಾರ, ಈ ಎಳೆಯ ಪ್ರಾಯದಲ್ಲೇ ಅವರ ಬ್ರ್ಯಾಂಡ್ ಎಂಡೋರ್ಸ್‌ಮೆಂಟ್ (ಜಾಹೀರಾತು) ಶುಲ್ಕ ಈಗಾಗಲೇ ದುಪ್ಪಟ್ಟಾಗಿದ್ದು, ಕ್ರಿಕೆಟ್ ಜಗತ್ತಿನಲ್ಲಿ ಹೊಸ ಸಂಚಲನ ಸೃಷ್ಟಿಸುತ್ತಿದ್ದಾರೆ.

ಐಪಿಎಲ್ ಅಂಗಳದಲ್ಲಿ ಅಬ್ಬರಿಸಿದ ಯುವ ಆಟಗಾರ ವೈಭವ್ ಸೂರ್ಯವಂಶಿ ಅವರ ಜಾಹೀರಾತು ವ್ಯವಹಾರಗಳನ್ನು ಸದ್ಯ ಅವರ ಪಾಲಕರು ನಿರ್ವಹಿಸುತ್ತಿದ್ದಾರೆ. ಇವರಿಗೆ ಅವರ ಐಪಿಎಲ್ ಫ್ರಾಂಚೈಸಿಯಾದ ರಾಜಸ್ಥಾನ ರಾಯಲ್ಸ್ ಕೂಡ ಈ ಪೋರ್ಟ್‌ಫೋಲಿಯೋ ಮ್ಯಾನೇಜ್‌ಮೆಂಟ್‌ನಲ್ಲಿ ಸಂಪೂರ್ಣ ಸಹಾಯ ಮಾಡುತ್ತಿದೆ. ಈಗಾಗಲೇ 'ಕಾಂಪ್ಲಾನ್' ಮತ್ತು 'ರೆಡ್ ಬುಲ್' ನಂತಹ ಪ್ರಮುಖ ಬ್ರ್ಯಾಂಡ್‌ಗಳಿಗೆ ರಾಯಭಾರಿಯಾಗಿ ಕಾಣಿಸಿಕೊಂಡಿರುವ ಈ 15 ವರ್ಷದ ಬಾಲಕನ ಐಪಿಎಲ್ ಧಮಾಕಾ ಬ್ಯಾಟಿಂಗ್ ನೋಡಿದ ನಂತರ, ಈಗ ದೇಶದ ಹತ್ತಾರು ಮುಂಚೂಣಿಯ ಬ್ರ್ಯಾಂಡ್‌ಗಳು ಇವರನ್ನು ತಮ್ಮ ಜಾಹೀರಾತುಗಳಿಗೆ ಸಹಿ ಹಾಕಿಸಿಕೊಳ್ಳಲು ಮುಗಿಬೀಳುತ್ತಿವೆ.

ಮಾರುಕಟ್ಟೆ ತಜ್ಞರೊಬ್ಬರು ಮಾಧ್ಯಮಕ್ಕೆ ನೀಡಿರುವ ಗೌಪ್ಯ ಮಾಹಿತಿಯ ಪ್ರಕಾರ, ವೈಭವ್ ಈಗಾಗಲೇ ತಮ್ಮ ಜಾಹೀರಾತು ಶುಲ್ಕವನ್ನು ಸರಿಸುಮಾರು ದುಪ್ಪಟ್ಟು ಮಾಡಿಕೊಂಡಿದ್ದಾರೆ. ಐಪಿಎಲ್ 2026 ಸೀಸನ್ ಆರಂಭವಾಗುವುದಕ್ಕೂ ಮುನ್ನ ಅವರು ಕಾಂಪ್ಲಾನ್ ಮತ್ತು ರೆಡ್ ಬುಲ್ ಸಂಸ್ಥೆಗಳೊಂದಿಗೆ ತಲಾ 1 ಕೋಟಿ ರೂಪಾಯಿ ಆಸುಪಾಸಿನ ಮೊತ್ತಕ್ಕೆ ಒಪ್ಪಂದ ಮಾಡಿಕೊಂಡಿದ್ದರು. ಆದರೆ, ಸದ್ಯ ಅವರ ಮಾರುಕಟ್ಟೆ ಮೌಲ್ಯ ಗಗನಕ್ಕೇರಿದ್ದು, ಹೊಸದಾಗಿ ಬರುತ್ತಿರುವ ಬ್ರ್ಯಾಂಡ್‌ಗಳಿಗೆ ಪ್ರತಿ ವ್ಯವಹಾರಕ್ಕೆ 1.5 ಕೋಟಿಯಿಂದ 2 ಕೋಟಿ ರೂಪಾಯಿವರೆಗೂ ಶುಲ್ಕ ವಿಧಿಸುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಕೇವಲ 15 ವರ್ಷದ ಪ್ರಾಯದ ವೈಭವ್ ಸೂರ್ಯವಂಶಿ ಸದ್ಯ ತಮ್ಮ ಕ್ರಿಕೆಟ್ ಜೀವನದ ಆರಂಭಿಕ ದಿನಗಳಲ್ಲಿದ್ದಾರೆ. ಐಪಿಎಲ್ 2026ರ ಭರ್ಜರಿ ಪ್ರದರ್ಶನವು ಭಾರತೀಯ ಕ್ರಿಕೆಟ್ ಜಗತ್ತಿನಲ್ಲಿ ಅವರ ಬ್ರ್ಯಾಂಡ್ ಮೌಲ್ಯವನ್ನು ಅತ್ಯಂತ ಎತ್ತರಕ್ಕೆ ಕೊಂಡೊಯ್ದಿರುವುದು ನಿಜವಾದರೂ, ಸಿಗುತ್ತಿರುವ ಇಂತಹ ಅಪಾರ ಅವಕಾಶಗಳನ್ನು ಅವರ ಪೋಷಕರು ಮತ್ತು ಮ್ಯಾನೇಜ್ಮೆಂಟ್ ತಂಡವು ಅತ್ಯಂತ ಜಾಗರೂಕತೆಯಿಂದ ಹಾಗೂ ಎಚ್ಚರಿಕೆಯಿಂದ ನಿರ್ವಹಿಸುವುದು ಮುಂಬರುವ ದಿನಗಳಲ್ಲಿ ಅತ್ಯಂತ ಪ್ರಮುಖವಾಗಿದೆ.

ಈಗಾಗಲೇ ಕ್ರಿಕೆಟ್ ಲೋಕದ ಹಲವು ಮಾಜಿ ಆಟಗಾರರು, ದಂತಕಥೆಗಳು ಮತ್ತು ವಿಶ್ಲೇಷಕರು ವೈಭವ್ ಸೂರ್ಯವಂಶಿ ಅವರ ಆಟವನ್ನು ಸಚಿನ್ ತೆಂಡೂಲ್ಕರ್, ವಿರಾಟ್ ಕೊಹ್ಲಿ ಮತ್ತು ಸುನಿಲ್ ಗವಾಸ್ಕರ್ ಅವರಂತಹ ಶ್ರೇಷ್ಠ ದಿಗ್ಗಜರ ಸಾಲಿಗೆ ಹೋಲಿಸಿ ಮಾತನಾಡಲು ಶುರು ಮಾಡಿದ್ದಾರೆ. ಅವರ ಅದ್ಭುತ ಪ್ರತಿಭೆಯ ಬಗ್ಗೆ ಯಾರಿಗೂ ಯಾವುದೇ ಅನುಮಾನವಿಲ್ಲದಿದ್ದರೂ, ಈ ಯುವ ಆಟಗಾರ ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ದೀರ್ಘಕಾಲ ಯಶಸ್ವಿಯಾಗಿ ನೆಲೆನಿಲ್ಲಲು ಇನ್ನೂ ಸಾಕಷ್ಟು ಸುದೀರ್ಘ ಹಾದಿಯನ್ನು ಸಾಗಬೇಕಿದೆ.

"ಮಾರುಕಟ್ಟೆ ತಜ್ಞರ ಪ್ರಕಾರ, ವೈಭವ್ ಸೂರ್ಯವಂಶಿ ಭವಿಷ್ಯದಲ್ಲಿ ಐಪಿಎಲ್ ಹರಾಜಿಗೆ ಬಂದರೆ ಒಂದು ಋತುವಿಗೆ 30 ಕೋಟಿ ರೂ.ಗಳವರೆಗೆ ಬಿಡ್ ಪಡೆಯಬಹುದು."

ವೈಭವ್ ಸೂರ್ಯವಂಶಿ ವಾರ್ಷಿಕವಾಗಿ 12 ಕೋಟಿಯ ಬ್ಯಾಟ್ ಪ್ರಾಯೋಜಕತ್ವದ ಕೊಡುಗೆಯನ್ನು ಪಡೆದಿದ್ದಾರೆ ಎಂದು ವರದಿಯಾಗಿದೆ, ಇದು ಅವರ ಹಿಂದಿನ ವರ್ಷಕ್ಕೆ 50 ಲಕ್ಷ ಒಪ್ಪಂದಕ್ಕಿಂತ ಭಾರಿ ಜಿಗಿತವಾಗಿದೆ.







# ಇಂಡೋನೇಷ್ಯಾ ಓಪನ್ ಟೆನ್ನಿಸ್: ಪಿವಿ ಸಿಂಧು, ಅರ್ಜುನ್–ಹರಿಹರನ್ ಜೋಡಿಗೆ ಮೊದಲ ಸುತ್ತಿನ ಗೆಲುವಿನೊಂದಿಗೆ ಮುನ್ನಡೆ

**ಜಕಾರ್ತಾ, ಜೂನ್ 2:** ವಿಶ್ವ ಶ್ರೇಯಾಂಕದ ಅಗ್ರ 10 ರಲ್ಲಿ ಮತ್ತೆ ಸ್ಥಾನ ಪಡೆದಿರುವ ಪಿವಿ ಸಿಂಧು, ಮಂಗಳವಾರ ಇಲ್ಲಿನ ಇಸ್ಟೋರಾ ಸೆನಾಯನ್ ಕ್ರೀಡಾಂಗಣದಲ್ಲಿ ಥೈಲ್ಯಾಂಡ್‌ನ ಬುಸಾನನ್ ಒಂಗ್ಬಮ್ರುಂಗ್‌ಫಾನ್ ವಿರುದ್ಧ 25–23, 21–16 ಅಂತರದಲ್ಲಿ ಜಯಗಳಿಸುವ ಮೂಲಕ ಇಂಡೋನೇಷ್ಯಾ ಓಪನ್ 2026 ಅನ್ನು ಆರಂಭಿಸಿದರು. ಮುಂದಿನ ಸುತ್ತಿಗೆ ಹರಿಹರನ್ ಅಮ್ಸಕರುಣನ್ ಮತ್ತು ಎಂಆರ್ ಅರ್ಜುನ್ ಜೋಡಿ ಮುನ್ನಡೆ ಸಾಧಿಸಿದ್ದು, ಮಲೇಷ್ಯಾದ 2016 ರ ಒಲಿಂಪಿಕ್ ಪದಕ ವಿಜೇತ ಟಾನ್ ವೀ ಕಿಯೊಂಗ್ ಮತ್ತು ಅವರ ಪ್ರಸ್ತುತ ಪಾಲುದಾರ ನೂರ್ ಮೊಹಮ್ಮದ್ ಅಜ್ರಿನ್ ವಿರುದ್ಧ ನೇರ ಗೇಮ್‌ಗಳ ಜಯ ಸಾಧಿಸಿದೆ.



2023 ರ ನಂತರ ಮೊದಲ ಬಾರಿಗೆ ವಿಶ್ವದ ಟಾಪ್ –10 ರಲ್ಲಿ ಪ್ರವೇಶಿಸಿದ ಭಾರತದ ಏಸ್ ಶಟ್ಲರ್ ಸಿಂಧು, ಥೈಲ್ಯಾಂಡ್ ಶಟ್ಲರ್ ವಿರುದ್ಧ ಸತತ 11 ನೇ ಗೆಲುವಿನೊಂದಿಗೆ ತನ್ನ ಅಭಿಯಾನವನ್ನು ಪ್ರಾರಂಭಿಸಿದರು. ಸಿಂಧು ಈಗ ಬುಸಾನನ್ ವಿರುದ್ಧ 21–1 ಅಂತರದಲ್ಲಿ ಹೆಡ್–ಟು–ಹೆಡ್ ದಾಖಲೆಯಲ್ಲಿ ಮುಂದಿದ್ದಾರೆ. ಈಗ ಅವರು ಕೊರಿಯಾದ ಅಗ್ರ ಶ್ರೇಯಾಂಕಿತ ಆನ್ ಸೆ ಯಂಗ್ ಮತ್ತು ಟರ್ಕಿಯ ನೆಸ್ಲಿಹಾನ್ ಅರಿನ್ ನಡುವಿನ ಪಂದ್ಯದ ವಿಜೇತರನ್ನು ಎದುರಿಸಲಿದ್ದಾರೆ. ನಂತರ, ಹರಿಹರನ್ ಮತ್ತು ಅರ್ಜುನ್ ಅನುಭವಿ ಮಲೇಷ್ಯಾದ ಜೋಡಿಯನ್ನು ಕೇವಲ 33 ನಿಮಿಷಗಳಲ್ಲಿ 21–18, 21–10 ಸೆಟ್‌ಗಳಿಂದ ಸೋಲಿಸಿದರು. ಏತನ್ಮಧ್ಯೆ, ಲಕ್ಷ್ಯ ಸೇನ್ ತವರಿನ ನೆಚ್ಚಿನ ಅಲ್ವಿ ಫರ್ಹಾನ್ ವಿರುದ್ಧ 21–19, 21–16 ಸೆಟ್‌ಗಳಿಂದ ಸೋತರು. ಕಳೆದ ವಾರ ಸಿಂಗಾಪುರ ಓಪನ್‌ನಲ್ಲಿ ಅಲ್ವಿ ವಿಶ್ವದ ನಂ. 1 ಶಿ ಯು ಕಿ ಅವರನ್ನು ಸೋಲಿಸಿದ್ದರು.